ಸಂಪುಟ: 05 ಸಂಚಿಕೆ: 188 ಪುಟಗಳು: 08 ಭಾನುವಾರ 21 ಸೆಪ್ಟೆಂಬರ್ 2025
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ನಮ್ಮೊಡನಿದ್ದವರು ದೂರ ಸರಿದಾಗ ಚಿಂತಿಸಬೇಕಿಲ್ಲ. ಅವರಿಲ್ಲದೇ ನಾವೇ ನಿಭಾಯಿಸಬಲ್ಲೆವು ಎಂಬ ಪಾಠ ದೊರೆಯಿತಲ್ಲ ಎಂದು ಸಮಾಧಾನದಿಂದ ಮುಂದುವರಿಯಬೇಕು

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಪ್ರಲ್ಹಾದ್ ಜೋಶಿ ಮನವಿಗೆ ಮಣಿದ ಕೇಂದ್ರ ಸರ್ಕಾರ

**ಕರ್ನಾಟಕ ರೈತರಿಗೆ ನವರಾತ್ರಿ ಕೊಡುಗೆ**

• **ಉದಯವಾಹಿನಿ, ನವದೆಹಲಿ**

ಅತಿವೃಷ್ಟಿಯಿಂದಾಗಿ ತತ್ತರಿಸಿದ್ದ ಕರ್ನಾಟಕದ ರೈತರ ನೆರವಿಗೆ ಧಾವಿಸಿರುವ ಕೇಂದ್ರ ಸರ್ಕಾರ, ಇದೀಗ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ಅವರ ಒತ್ತಾಸೆ ಮೇರೆಗೆ ನವರಾತ್ರಿ ಕೊಡುಗೆಯಾಗಿ ಬೆಂಬಲ ಬೆಲೆಯಲ್ಲಿ ಐದು ಧಾನ್ಯಗಳ ಖರೀದಿಗೆ ಅನುಮತಿ ನೀಡಿದೆ. 2025-26ನೇ ಸಾಲಿನ ಮುಂಗಾರಿನಲ್ಲಿ ಬೆಳೆದ ಹೆಸರು ಕಾಳು, ಉದ್ದಿನ ಕಾಳು, ನೆಲಗಡಲೆ(ಶೇಂಗಾ), ಸೋಯಾಬಿನ್ ಮತ್ತು ಸೂರ್ಯಕಾಂತಿ ಹೀಗೆ ಒಟ್ಟೂ 5 ಧಾನ್ಯಗಳನ್ನು ಕೇಂದ್ರದ ಬೆಂಬಲ ಬೆಲೆಯಲ್ಲಿ ಖರೀದಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಈ ಕುರಿತು ಕೇಂದ್ರ ಕೃಷಿ ಸಚಿವರು ಆಹಾರ ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಖುದ್ದು ಪತ್ರ ಬರೆದು ಮಾಹಿತಿ ನೀಡಿದ್ದಾರೆ.

ಪ್ರಸಕ್ತ ಮುಂಗಾರಿನಲ್ಲಿ ಕರ್ನಾಟಕದ ಬೆಳೆಗಾರರು ಅತಿವೃಷ್ಟಿಯಿಂದಾಗಿ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಹೀಗಾಗಿ ಹೆಸರು, ಉದ್ದು, ಶೇಂಗಾ, ಸೋಯಾಬಿನ್ ಹಾಗೂ ಸೂರ್ಯಕಾಂತಿ ಧಾನ್ಯಗಳನ್ನು ಬೆಂಬಲ ಬೆಲೆಯಲ್ಲಿ ಖರೀದಿಗೆ ನೆರವಾಗುವಂತೆ ಕೋರಿ ಸಚಿವ ಪ್ರಲ್ಹಾದ್ ಜೋಶಿ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದಿದ್ದರು. ಜೋಶಿ ಅವರ ಮನವಿಗೆ ಸ್ಪಂದಿಸಿದ ಪ್ರಧಾನಿ ಮೋದಿ ಅವರು ತಕ್ಷಣವೇ ಕರ್ನಾಟಕದ ರೈತರ ನೆರವಿಗೆ ಮುಂದಾಗುವಂತೆ ತಿಳಿಸಿದ್ದರು. ಅಂತೆಯೇ ಕೇಂದ್ರ ಕೃಷಿ ಸಚಿವ ಶಿವರಾಜ ಸಿಂಗ್ ಚೌಹಾಣ್ ಅವರು ತಮ್ಮ ಮನವಿಗೆ ತ್ವರಿತ ಸ್ಪಂದನೆ ನೀಡಿ ರಾಜ್ಯದ ರೈತರ ನೆರವಿಗೆ ಧಾವಿಸಿದ್ದಾರೆ. ಈ ಬೆಳೆಗಾರರ ಹಿತದೃಷ್ಟಿಯಿಂದ ಬೆಂಬಲ ಬೆಲೆಯಲ್ಲಿ ಆಹಾರ ಧಾನ್ಯ ಖರೀದಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ಸಹ ನೀಡಿದ್ದಾರೆ.

**ಎಷ್ಟು ಖರೀದಿಗೆ ಕೇಂದ್ರ ಅಸ್ತು:** ಕೇಂದ್ರ ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ 2025-26ನೇ ಸಾಲಿನಲ್ಲಿ ಕರ್ನಾಟಕದಿಂದ 38000 ಮೆಟ್ರಿಕ್ ಟನ್ ಹೆಸರು ಕಾಳು, 60,810 ಎಂ.ಟಿ ಉದ್ದು, 15,650 ಎಂ.ಟಿ ಸೂರ್ಯಕಾಂತಿ, 61,148 ಎಂ.ಟಿ ಕಡಲೆಬೀಜ ಮತ್ತು 1,15,000 ಎಂ.ಟಿ ಸೋಯಾಬಿನ್ ಖರೀದಿಗೆ ಅನುಮತಿ ನೀಡಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.



## ಸಿಎಂ ಆಗೋಕೆ ಹೆಲಿಕಾಪ್ಟರ್ ಖರೀದಿಸಿದ್ದಾರೆ ಅನ್ನೋದು ತಪ್ಪು ಕಲ್ಪನೆ: ಬೋಸರಾಜು

• **ಉದಯವಾಹಿನಿ, ರಾಯಚೂರು**

ಸಿಎಂ ಆಗಲು ಪ್ರಚಾರಕ್ಕಾಗಿ ಹೆಲಿಕಾಪ್ಟರ್ ಖರೀದಿ ಮಾಡಿದ್ದಾರೆ ಅನ್ನೋದು ತಪ್ಪು ಕಲ್ಪನೆ ಎಂದು ಸಣ್ಣ ನೀರಾವರಿ ಸಚಿವ ಎನ್.ಎಸ್ ಬೋಸರಾಜು ಅವರು ಸತೀಶ್ ಜಾರಕಿಹೊಳಿ ಪರ ಬ್ಯಾಟಿಂಗ್ ಮಾಡಿದ್ದಾರೆ. ರಾಯಚೂರಿನಲ್ಲಿ ಮಾತನಾಡಿದ ಅವರು, ಸತೀಶ್ ಜಾರಕಿಹೊಳಿ ಯಾವಾಗಲೂ ಹೆಲಿಕಾಪ್ಟರ್‌ನಲ್ಲಿ ಓಡಾಡುತ್ತಾರೆ. ನಮ್ಮನ್ನೂ ಕರೆದುಕೊಂಡು ಹೋಗ್ತಾರೆ. ಸಿಎಂ ಆಗಲು ಪ್ರಚಾರಕ್ಕೆ ಹೆಲಿಕಾಪ್ಟರ್ ಖರೀದಿ ಮಾಡಿದ್ದಾರೆ ಅನ್ನೋದು ತಪ್ಪು ಕಲ್ಪನೆ. ಸಿಎಂ ಆಗಬೇಕು ಅಂತಾ ಎಲ್ಲರಿಗೂ ಇರುತ್ತೆ, ನಮಗೂ ಇರುತ್ತೆ ಎಂದು ಹೇಳಿದ್ದಾರೆ.

ನಾನು ಸತೀಶ್ ಜಾರಕಿಹೊಳಿ ಬಹಳ ವರ್ಷಗಳಿಂದ ರಾಜಕೀಯ ಮಾಡುತ್ತಿದ್ದೇವೆ. ಪಕ್ಷನಿಷ್ಟರಾಗಿ ಪಕ್ಷಕ್ಕೆ ಬದ್ಧರಾಗಿದ್ದೇವೆ, ಹೇಳುವವರಿಗೆ ಬುದ್ಧಿ ಇಲ್ಲ. ಸಚಿವ ಸಂಪುಟದಲ್ಲಿರುವ ಎಲ್ಲಾ ಸಚಿವರು ಪಕ್ಷಕ್ಕೆ ನಿಷ್ಠಾವಂತರಾಗಿದ್ದೇವೆ. ಬೇರೆ ಪಕ್ಷದಿಂದ ಬಂದವರು ಪಕ್ಷಕ್ಕೆ ಬದ್ಧರಾಗಿದ್ದಾರೆ. ಮುಖ್ಯಮಂತ್ರಿಗಳು ಕೂಡ ಬೇರೆ ಪಕ್ಷದಿಂದ ಬಂದವರು. ಅವರು ಪಕ್ಷಕ್ಕೆ ಬದ್ಧರಾಗಿ ಸಾಮಾಜಿಕ, ಆರ್ಥಿಕ ಶೈಕ್ಷಣಿಕವಾಗಿ ಅಭಿವೃದ್ಧಿ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ.

## 7 ಕೋಟಿ ಜನರಿಗೂ ತೃಪ್ತಿಯಾಗುವಂತೆ ಜಾತಿಗಣತಿ ಸಮೀಕ್ಷೆ ನಡೆಯಲಿದೆ: ಖಂಡ್ರೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ 7 ಕೋಟಿ ಜನರಿಗೂ ತೃಪ್ತಿಯಾಗುವಂತೆ ಜಾತಿಗಣತಿ ಸಮೀಕ್ಷೆ ನಡೆಯಲಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ 22ರಿಂದ ಆರಂಭವಾಗಲಿರುವ ಸಮೀಕ್ಷೆ ಪೂರ್ಣಗೊಂಡ ಬಳಿಕ, ಹಿಂದುಳಿದಿರುವಿಕೆಯ ಗುರುತಿಸುವಿಕೆ, ಅಂಕ ನೀಡುವಿಕೆಯಲ್ಲಿ ಯಾರಿಗೂ ಅನ್ಯಾಯ ಆಗದ ರೀತಿಯಲ್ಲಿ ಎಲ್ಲರ ಅಭಿಪ್ರಾಯ ಪಡೆದೇ ಸರ್ಕಾರ ಮುಂದಡಿ ಇಡಲಿದೆ. ಇದನ್ನು ಮುಖ್ಯಮಂತ್ರಿಗಳು ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ರಾಜ್ಯದ ಎಲ್ಲ 7 ಕೋಟಿ ಜನರಿಗೂ ತೃಪ್ತಿಯಾಗುವ ರೀತಿಯಲ್ಲಿ ಸಮೀಕ್ಷೆ ನಡೆಯಲಿದೆ. ಎಲ್ಲ ಜಾತಿ, ಜನಾಂಗದಲ್ಲೂ ಬಡವರಿದ್ದಾರೆ, ನಿರ್ಗತಿಕರಿದ್ದಾರೆ. ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯ ಸಿಗಬೇಕು. ಸರ್ಕಾರದ ಯೋಜನೆಯ ಲಾಭ ದೊರಕಬೇಕೆಂಬ ನಿಟ್ಟಿನಲ್ಲಿ ಸರ್ಕಾರ ಶ್ರಮಿಸುತ್ತಿದೆ ಎಂದರು.

## ರಾಜ್ಯದಲ್ಲಿ ಮುಸ್ಲಿಮರು ಹೆಚ್ಚಿದ್ದಾರೆಂದು ತೋರಿಸಲು ಸಿದ್ದು ನಾಟಕ: ಯತ್ನಾಳ್

• **ಉದಯವಾಹಿನಿ, ವಿಜಯಪುರ**

ರಾಜ್ಯದಲ್ಲಿ ಮುಸ್ಲಿಮರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆಂದು ತೋರಿಸಲು ಇದು ಸಿದ್ದರಾಮಯ್ಯನ ನಾಟಕ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ ನಡೆಸಿದರು.

ಜಿಲ್ಲೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜಾತಿಗಣತಿ ಬಗ್ಗೆ ಅವರ ಸಚಿವ ಸಂಪುಟದಲ್ಲೇ ಗೊಂದಲ ಉಂಟಾಗಿದೆ. ಹೀಗಾಗಿ ಸಿದ್ದರಾಮಯ್ಯನವರು ಜಾತಿಗಣತಿಯನ್ನು ಕೈಬಿಡಬೇಕು. ಹೇಗಿದ್ದರೂ ಕೇಂದ್ರ ಸರ್ಕಾರ ಜಾತಿಗಣತಿ ಮಾಡುತ್ತೆ. ಕೇವಲ ಕೇಂದ್ರಕ್ಕೆ ಮಾತ್ರ ಜಾತಿಗಣತಿ ನಡೆಸಲು ಅಧಿಕಾರವಿದೆ. ರಾಜ್ಯಕ್ಕೆ ಅಧಿಕಾರವಿಲ್ಲ. ಆದರೆ ಇವರು ಸುಮ್ಮನೇ ರಾಜ್ಯದ ಜನರ ದಾರಿ ತಪ್ಪಿಸಲು, ರಾಜ್ಯದಲ್ಲಿ ಲಿಂಗಾಯರು, ಒಕ್ಕಲಿಗರು ಕಡಿಮೆ ಇದ್ದಾರೆ ಎಂದು ತೋರಿಸಲು ಮತ್ತು ಅಲ್ಪಸಂಖ್ಯಾತ ಮುಸ್ಲಿಂರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆಂದು ತೋರಿಸಲು ಸಿದ್ದರಾಮಯ್ಯನ ನಾಟಕವಿದು ಎಂದು ಆಗ್ರಹಿಸಿದರು.

## 331 ಹೊಸ ಜಾತಿಗಳು ಎಲ್ಲಿಂದ ಹುಟ್ಟಿಕೊಂಡವು..?: ನಿಖಿಲ್

• **ಉದಯವಾಹಿನಿ, ಬೆಂಗಳೂರು**

ಸರ್ಕಾರದಿಂದ ಸಿಗಬೇಕಾದ ಸೌಲಭ್ಯ, ಸಮಾಜದ ಕಟ್ಟಕಡೆಯ ವ್ಯಕ್ತಿ ಗುರುತಿಸಿ ತಯಾರಿಸುವ ಜಾತಿಗಣತಿಯನ್ನು ನಾವು ಸ್ವಾಗತಿಸುತ್ತೇವೆ. ಆದರೆ, ಇದು ಅವೈಜ್ಞಾನಿಕವಾಗಿ ತಯಾರಿಸಿರುವ ವರದಿ ಆಗಿದ್ದು, ವಿರೋಧಿಸುತ್ತೇವೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು. ಆದಿಚುಂಚನಗಿರಿ ಶಾಖ ಮಠದಲ್ಲಿ ಆಯೋಜಿಸಿದ್ದ ಒಕ್ಕಲಿಗ ಸಮುದಾಯದ ಜಾಗೃತಿ ಸಭೆಯ ನಂತರ ಮಾಧ್ಯಮಗಳ ಜೊತೆ ನಿಖಿಲ್ ಕುಮಾರಸ್ವಾಮಿ ಅವರು ಮಾತನಾಡಿದರು.

ಸಮಾಜ ಸಮಾಜ ಜೊತೆ ಸಂಘರ್ಷ ತರಲು ರಾಜ್ಯ ಸರ್ಕಾರ ಹೊರಟಿದೆ. 331 ಹೊಸ ಜಾತಿ ಎಲ್ಲಿ ಹುಟ್ಟಿಕೊಂಡಿದೆ ಗೊತ್ತಿಲ್ಲ ಎಂದು ಜಾತಿ ಸಮೀಕ್ಷೆ ಬಗ್ಗೆ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿಯವರು ವ್ಯಂಗ್ಯವಾಡಿದರು. ಕುಮಾರಣ್ಣನವರು ಕಾಂತರಾಜು ವರದಿಯನ್ನ ರಿಜೆಕ್ಟ್ ಮಾಡ್ತಾರೇ, ಮಧೂಸುದನ್ ಅಧ್ಯಕ್ಷರಾದ 15 ದಿನದಲ್ಲಿ 2 ಕೋಟಿ ಜನರ ಮಾಹಿತಿ ಕಲೆ ಹಾಕಲು ಸಾಧ್ಯವಾ.? ಎಂದು ನಿಖಿಲ್ ಅವರು ಪ್ರಶ್ನಿಸಿದರು.

## ಹೆಬ್ಬಾಳ ಕ್ಷೇತ್ರದಲ್ಲಿ ವಾರದೊಳಗೆ ಗುಂಡಿ ಮುಚ್ಚುವ ಕಾರ್ಯ ಆರಂಭ: ಬೈರತಿ ಸುರೇಶ್

• **ಉದಯವಾಹಿನಿ, ಬೆಂಗಳೂರು**

ಹೆಬ್ಬಾಳ ಕ್ಷೇತ್ರದಲ್ಲಿರುವ ರಸ್ತೆ ಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಇನ್ನೊಂದು ವಾರದಲ್ಲಿ ಆರಂಭಿಸಲಾಗುವುದು ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ಕ್ಷೇತ್ರದ ಕುಂದುಕೊರತೆಗಳ ಪರಿಹಾರಕ್ಕೆ ಆಯೋಜಿಸಿದ್ದ ಜನಸ್ಪಂದನ ಸಭೆಯಲ್ಲಿ ಅವರು ಮಾತನಾಡಿದರು. ಒಳಚರಂಡಿ ಕಾಮಗಾರಿಗಾಗಿ ರಸ್ತೆಯನ್ನು ಅಗೆದು ಬಿಡಲಾಗಿದೆ, ಬೀದಿ ದೀಪಗಳ ಸಮಸ್ಯೆ, ಇ- ಖಾತಾ ವಿತರಣೆಯಲ್ಲಿ ವಿಳಂಬ ಸೇರಿದಂತೆ ಹಲವು ಸಮಸ್ಯೆಗಳನ್ನು ನಾಗರಿಕರು ಸಚಿವರ ಮುಂದಿಟ್ಟರು.

ಕಳೆದ ಹಲವು ದಿನಗಳಿಂದ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ರಸ್ತೆ ಗುಂಡಿಗಳನ್ನು ಮುಚ್ಚಲು ಸಾಧ್ಯವಾಗುತ್ತಿಲ್ಲ. ಇನ್ನು ಒಂದೆರಡು ದಿನಗಳಲ್ಲಿ ಮಳೆಯ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಇದ್ದು, ಮಳೆ ಬಿಟ್ಟ ತಕ್ಷಣ ಗುಂಡಿ ಮುಚ್ಚುವ ಕಾಮಗಾರಿಯನ್ನು ಮೊದಲ ಆದ್ಯತೆಯಾಗಿ ಕೈಗೆತ್ತಿಕೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

# ಜಾತಿಗಣತಿ ದಂಗಲ್ ನಿರ್ಮಲಾನಂದನಾಥ ಶ್ರೀಗಳು ಸವಾಲ್



**ಒಕ್ಕಲಿಗರ ಒಕ್ಕೊರಲ ನಿರ್ಧಾರ**




• **ಉದಯವಾಹಿನಿ, ಬೆಂಗಳೂರು**

ಜಾತಿಗಣತಿ ವೇಳೆ ಉಪಜಾತಿಗಳ ಮೊದಲು ಒಕ್ಕಲಿಗ ಎಂದು ಬರೆಸಬೇಕು ಎಂದು ಒಕ್ಕಲಿಗ ಸಮುದಾಯದ ಸಭೆಯಲ್ಲಿ ಒಕ್ಕೊರಲ ಕೂಗು ಕೇಳಿಬಂದಿದೆ. ಇನ್ನೊಂದೇ ದಿನ ಬಾಕಿ. ಸೋಮವಾರ ಬಂದರೆ ಹೊಸದಾಗಿ ಜಾತಿ ಸಮೀಕ್ಷೆ ಶುರುವಾಗುತ್ತದೆ. ಆದರೆ, ಇನ್ನೂ ಜಾತಿ ಜ್ವಾಲೆ ಮಾತ್ರ ಧಗಧಗಿಸುತ್ತಲೇ ಇದೆ. ಕ್ರಿಶ್ಚಿಯನ್ ಜೊತೆ ಒಕ್ಕಲಿಗ ಎಂದು ಸೇರಿಸಿರುವುದು ಸಮುದಾಯವನ್ನೇ ಕೆರಳುವಂತೆ ಮಾಡಿದೆ. ಇಡೀ ಒಕ್ಕಲಿಗ ಸಮುದಾಯದ ಘಟಾನುಘಟಿ ನಾಯಕರು ಶನಿವಾರ ಬೆಂಗಳೂರಿನಲ್ಲಿ ಆದಿಚುಂಚನಗಿರಿ ಶ್ರೀಗಳ ನೇತೃತ್ವದಲ್ಲಿ ಸಭೆ ಮೂಲಕ ಶಕ್ತಿ ಪ್ರದರ್ಶನ ಮಾಡಿದರು. ನಿರ್ಮಲಾನಂದನಾಥ ಶ್ರೀಗಳ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಮೂರು ಪಕ್ಷಗಳ ನಾಯಕರು ಭಾಗಿಯಾದರು. ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ, ಡಿಸಿಎಂ ಡಿಕೆಶಿವಕುಮಾರ್, ಅಶ್ವತ್ಥ ನಾರಾಯಣ್, ಆರ್.ಅಶೋಕ್, ಮಾಜಿ ಸಿಎಂ ಡಿ.ವಿ.ಸದಾನಂದಗೌಡ, ಕೇಂದ್ರ ಸಚಿವೆ ಶೋಭಾ ಸೇರಿದಂತೆ ಪ್ರಮುಖರು ಭಾಗಿಯಾದರು. ಮಹತ್ವದ ಸುದೀರ್ಘ ಚರ್ಚೆ ಮೂಲಕ ನಿರ್ಧಾರವನ್ನೂ ಕೈಗೊಳ್ಳಲಾಯಿತು. ಸಭೆ ಬಳಿಕ ಮಾತನಾಡಿದ ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥಶ್ರೀ ಯಾವುದೇ ಕಾರಣಕ್ಕೂ ಕ್ರಿಶ್ಚಿಯನ್ ಜೊತೆ ಒಕ್ಕಲಿಗರನ್ನು ಸೇರಿಸಬಾರದು. ಸಮೀಕ್ಷೆ ಮುಂದೂಡಬೇಕು ಎಂದು ಆಗ್ರಹ ಮಾಡಿದರು.

| | |
|---|---|
| 1 | ಆದಿಚುಂಚನಗಿರಿ ಮಠದಲ್ಲಿ ಒಕ್ಕಲಿಗ ನಾಯಕರ ಸಭೆ |
| 2 | ಸಮೀಕ್ಷೆ ವೇಳೆ ಜಾತಿ ಕಲಂನಲ್ಲಿ ಒಕ್ಕಲಿಗ ಎಂದು ಬರೆಸಲು ನಿರ್ಣಯ |
| 3 | ಉಪಜಾತಿಗಳ ಬಗ್ಗೆ ಗೊಂದಲ ಮಾಡಿಕೊಳ್ಳದಂತೆ ಸ್ವಾಮೀಜಿಗಳಿಂದ ಮಾರ್ಗದರ್ಶನ |

**ಒಕ್ಕಲಿಗರ ಸಭೆ:** ಜಾತಿಗಣತಿ ಸಮೀಕ್ಷೆ ಪಟ್ಟಿಯಲ್ಲಿ ಧರ್ಮ ಹಿಂದೂ, ಜಾತಿ ಒಕ್ಕಲಿಗ ಬರೆಸಲು ನಿರ್ಣಯ ಕೈಗೊಳ್ಳಲಾಯಿತು. ಯಾರೂ ಗೊಂದಲ ಮಾಡಿಕೊಳ್ಳದಂತೆ ನಿರ್ಮಲಾನಂದನಾಥ ಶ್ರೀಸಲಹೆ ಕೊಟ್ಟರು. ಉಪ ಜಾತಿಯಲ್ಲೂ ಒಕ್ಕಲಿಗ ಎಂದೇ ನಮೂದಿಸಲು ನಿರ್ಣಯ ತೆಗೆದುಕೊಳ್ಳಲಾಗಿದೆ. ನಿರ್ಣಯವನ್ನು ನಿರ್ಮಲಾನಂದನಾಥ ಶ್ರೀಮಂಡಿಸಿದರೆ, ಅದಕ್ಕೆ ಸಭೆಯಲ್ಲಿದ್ದ ಡಿಸಿಎಂ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಕುಮಾರಸ್ವಾಮಿ, ಸದಾನಂದಗೌಡ ಸೇರಿ ಹಲವು ನಾಯಕರು ಅನುಮೋದನೆ ಕೊಟ್ಟರು. ಇನ್ನು ಸಮೀಕ್ಷೆಯನ್ನು 45 ದಿನಗಳ ಕಾಲ ಮುಂದೂಡಿಕೆ ಮಾಡಬೇಕು ಎಂದೂ ಒತ್ತಾಯಿಸಲಾಯಿತು. ಒಂದು ವೇಳೆ ಕ್ರಿಶ್ಚಿಯನ್ ಒಕ್ಕಲಿಗ ಎಂದು ಉಲ್ಲೇಖ ಮಾಡಿದರೆ, ಬೀದಿಗಿಳಿದು ಹೋರಾಟ ಮಾಡುತ್ತೇವೆ ಎಂದು ವಿಪಕ್ಷ ನಾಯಕ ಆರ್?. ಅಶೋಕ್, ಸಿ.ಟಿ.ರವಿ ಎಚ್ಚರಿಕೆ ಕೊಟ್ಟರು. ಸರ್ಕಾರ ಬೆಂಕಿ ಹಚ್ಚಲು ಏನ್ ಮಾಡಬೇಕೋ ಅದನ್ನು ಮಾಡುತ್ತಿದೆ ಎಂದು ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ ಆರೋಪಿಸಿದರು.

ಒಕ್ಕಲಿಗರ ಸಭೆಯಲ್ಲಿ ನಾಯಕರ ನಡೆ ಎಲ್ಲರ ಕುತೂಹಲಕ್ಕೆ ಕಾರಣವಾಯಿತು. ಜಾತಿ ವಿಚಾರದಲ್ಲಿ ಸಿಎಂಗೆ ಡಿಸಿಎಂ ಒಳ್ಳೆಯ ಪ್ರಶ್ನೆ ಕೇಳಿದ್ದಾರೆ ಎಂದು ಕುಮಾರಸ್ವಾಮಿ ಶ್ಲಾಘನೆ ವ್ಯಕ್ತಪಡಿಸಿದರು. ಇದಕ್ಕೆ ಕೆಲ ನಾಯಕರು ಚಪ್ಪಳೆ ತಟ್ಟಿದರು. ಸಭೆಯಲ್ಲಿ ಡಿಸಿಎಂ ಡಿಕೆಶಿ, ಕುಮಾರಸ್ವಾಮಿ ಮುಖಾಮುಖಿಯಾಗಿರುವುದು ಸಾಕಷ್ಟು ಕುತೂಹಲಕ್ಕೆ ಕಾಣವಾಯಿತು. ಒಟ್ಟಿನಲ್ಲಿ, ಹೊಸ ಜಾತಿ ಸಮೀಕ್ಷೆಗೆ ಒಕ್ಕಲಿಗ ನಾಯಕರಿಂದ ವಿರೋಧ ವ್ಯಕ್ತವಾಗಿರುವುದಂತೂ ಸುಳ್ಳಲ್ಲ. ಮುಖ್ಯವಾಗಿ, ಕ್ರಿಶ್ಚಿಯನ್ ಜೊತೆ ಒಕ್ಕಲಿಗರನ್ನು ಸೇರಿಸಿರುವುದು ಆಕ್ರೋಶಕ್ಕೆ ಕಾರಣವಾಗಿದೆ.

**ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡ ಡಿಕೆಶಿ-ಎಚ್‌ಡಿಕೆ..!:** ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡಿದ್ದಾರೆ. ಇದಕ್ಕೆ ಕಾರಣವಾಗಿದ್ದು ಆದಿಚುಂಚನಗಿರಿ ಕ್ಷೇತ್ರದ ಬೆಂಗಳೂರಿನ ವಿಜಯನಗರ ಶಾಖಾ ಮಠದಲ್ಲಿ ಇಂದು ನಿರ್ಮಲಾನಂದನಾಥ ಸ್ವಾಮೀಜಿ ಅವರ ನೇತೃತ್ವದಲ್ಲಿ ನಡೆದ ಒಕ್ಕಲಿಗ ಸಮುದಾಯದ ಜಾಗೃತಿ ಸಭೆ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ- 2025 ಹಾಗೂ ಜಾತಿ ಗಣತಿ ಪ್ರಯುಕ್ತ ಒಕ್ಕಲಿಗ ಸಮುದಾಯದ ಜಾಗೃತಿ ಸಭೆ ಆಯೋಜಿಸಲಾಗಿತ್ತು. ಪರಸ್ಪರ ರಾಜಕೀಯ ವೈರಿಗಳಾಗಿರುವ ಡಿಕೆಶಿ-ಎಚ್‌ಡಿಕೆ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡು ಅಚ್ಚರಿ ಮೂಡಿಸಿದರು. ಅಲ್ಲದೇ ಉಭಯ ಕುಶಲೋಪರಿ ಆಗಿದೆ. ಈ ಕುರಿತು ಟಿವಿ, ಜಾಲತಾಣಗಳಲ್ಲಿ ವಿಡಿಯೊಗಳು ಹರಿದಾಡುತ್ತಿವೆ. ಇದೇ ವೇಳೆ ಸಚಿವ ಎಂ.ಸಿ. ಸುಧಾಕರ್, ಸಂಸದ ಕೆ. ಸುಧಾಕರ್, ಮಾಜಿ ಸಿಎಂ ಡಿ.ವಿ. ಸದಾನಂದ ಗೌಡ, ನಿಖಿಲ್ ಕುಮಾರಸ್ವಾಮಿ, ಸಿ.ಟಿ ರವಿ ಸಹ ಇದ್ದರು.

- **ಒಕ್ಕಲಿಗರ ಕೂಗು**
- **ಕ್ರಿಶ್ಚಿಯನ್ ಜೊತೆ ಒಕ್ಕಲಿಗ ಕಾಲಂ ತೆಗೆಯದಿದ್ರೆ ಬೃಹತ್ ಹೋರಾಟ**
- **ಒಕ್ಕಲಿಗರ ಒಕ್ಕೊರಲ ನಿರ್ಧಾರ**
- **ಪಂಚಮಸಾಲಿಗಳ ಮನೆಗೆ ಸ್ಟಿಕ್ಕರ್ ಅಭಿಯಾನ ಆರಂಭಿಸಿದ ವಚನಾನಂದ ಶ್ರೀ**
- **ಹಿಂದೂ ಮುಸ್ಲಿಂ, ಹಿಂದೂ ಕ್ರಿಶ್ಚಿಯನ್ ಅಂದ್ರೆ ಸರಿ ಇರಲ್ಲ ; ನಿರ್ಮಲಾನಂದ ಶ್ರೀ ಎಚ್ಚರಿಕೆ**
- **60 ದಿನ ಜಾತಿಗಣತಿ ಮುಂದೂಡಿ, 15 ದಿನ ಕಾಲಮಿತಿ ಹೆಚ್ಚಿಸಿ - ಒಕ್ಕಲಿಗ ಸಭೆಯಲ್ಲಿ ನಿರ್ಣಯ**

### ತೆಲಂಗಾಣಕ್ಕೆ 3 ದಿನ ಬೇಕು

ನಿರ್ಮಲಾನಂದ ಸ್ವಾಮೀಜಿಯವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ನಮ್ಮ ಡಿಮ್ಯಾಂಡ್ ಏನೆಂದು ನಾವು ಸ್ಪಷ್ಟವಾಗಿ ಮಂಡಿಸಿದ್ದೇವೆ. ಪ್ರಜ್ಞಾವಂತ ಸರ್ಕಾರ ಇದರ ಬಗ್ಗೆ ಗಮನ ಹರಿಸುವ ಭರವಸೆ ಇದೆ. ಸರ್ಕಾರದಲ್ಲಿ ನಮ್ಮ ಸಮಾಜದ ಜನಪ್ರತಿನಿಧಿಗಳು ಇದ್ದಾರೆ, ಅವರಿಗೆ ನಾವು ಸಂದೇಶ ಕಳುಹಿಸಿದ್ದೇವೆ. ಸಮೀಕ್ಷೆಯನ್ನು ಮುಂದೂಡುವ ಬಗ್ಗೆ ಅವರು ಸಭೆಯಲ್ಲಿ ಧ್ವನಿ ಎತ್ತುತ್ತಾರೆ ಎಂದು ಹೇಳಿದರು. ಸಮೀಕ್ಷೆಯನ್ನು ಮುಂದೂಡುವಂತೆ ಸರ್ಕಾರವೇ ನಿರ್ಧರಿಸಬೇಕೆಂದು ಒತ್ತಿ ಹೇಳಿದ ಶ್ರೀಗಳು, ನಮ್ಮ ರಾಜ್ಯದಲ್ಲಿ 7 ಕೋಟಿ ಜನಸಂಖ್ಯೆ ಇದೆ. ಜಾತಿ ಗಣತಿ ನಡೆಸಲು ತೆಲಂಗಾಣಕ್ಕೆ ಮೂರು ತಿಂಗಳು ಬೇಕಾಗಿದೆ, ಹಾಗಾದ್ರೆ ನಮ್ಮ ರಾಜ್ಯಕ್ಕೆ ಎಷ್ಟು ಸಮಯ ಬೇಕು ಎಂಬುದನ್ನು ಸರ್ಕಾರವೇ ತಿಳಿಯಬೇಕು ಎಂದು ಸಲಹೆ ನೀಡಿದರು.

### ಲಿಂಗಾಯತರ ಮಧ್ಯೆ ಜಾತಿ ಜಟಾಪಟಿ

ಕೊನೆಗೂ ಜಾತಿ ಗಣತಿ ವೇಳೆ ಹಿಂದೂ ಧರ್ಮ ಎಂದು ಬರೆಸುವ ವಿಚಾರದಲ್ಲಿ ಲಿಂಗಾಯತರು ಒಮ್ಮತಕ್ಕೆ ಬಂದರೂ ಜಾತಿ ಜಟಾಪಟಿ ಜೋರಾಗಿದೆ. ಜಾತಿ ಕಾಲಂನಲ್ಲಿ ವೀರಶೈವ ಲಿಂಗಾಯತ ಎಂದು ಬರೆಸಬೇಕೆಂಬುದು ಒಂದು ಬಣದ ಆಗ್ರಹವಾದರೆ, ಪಂಚಮಸಾಲಿ ಲಿಂಗಾಯತ ಎಂದು ಬರೆಯಬೇಕೆಂದು ಇನ್ನು ಕೆಲವರು ಆಗ್ರಹಿಸಿದ್ದಾರೆ. ಲಿಂಗಾಯತ ಪಂಚಮಸಾಲಿ ಎಂದು ಜಾತಿ ಕಾಲಂನಲ್ಲಿ ನಮೂದಿಸುವಂತೆ ವಚನಾನಂದ ಸ್ವಾಮೀಜಿಗಳ ನೇತೃತ್ವದಲ್ಲಿ ಹುಬ್ಬಳ್ಳಿಯಲ್ಲಿ ಮನೆ ಮನೆ ಸ್ಟಿಕ್ಕರ್ ಅಭಿಯಾನ ಆರಂಭಿಸಲಾಗಿದೆ. ಸುಮಾರು 1 ಲಕ್ಷ ಸ್ಟಿಕ್ಕರ್ ಅಂಟಿಸುವ ಗುರಿ ಹೊಂದಲಾಗಿದೆ. ಜಿಲ್ಲೆ ಜಿಲ್ಲೆಗಳಲ್ಲಿ ಜಾಗೃತಿ ಮೂಡಿಸಲಾಗುತ್ತದೆ ಎಂದು ವಚನಾನಂದ ಶ್ರೀ ತಿಳಿಸಿದ್ದಾರೆ.

### ಶ್ರೀಗಳಿಂದ ಖಡಕ್ ಎಚ್ಚರಿಕೆ

ಧರ್ಮೀಯ ಗುರುತುಗಳೊಂದಿಗೆ ಜಾತಿಯ ವರ್ಗೀಕರಣವನ್ನು ಶ್ರೀಗಳು ತೀವ್ರವಾಗಿ ಖಂಡಿಸಿದರು. ಜಾತಿಗಣತಿ ಮುಂದೂಡಿ ಅನ್ನೋದು ನಮ್ಮ ನಿರ್ಣಯ. ಸರ್ಕಾರ ಸ್ಪಂದಿಸುವ ಭರವಸೆ ಇದೆ. ಆದರೆ ಕ್ರಿಶ್ಚಿಯನ್ ಒಕ್ಕಲಿಗ, ಕ್ರಿಶ್ಚಿಯನ್ ಲಿಂಗಾಯತ, ಕ್ರಿಶ್ಚಿಯನ್ ಕುರುಬ ಸರಿ ಇಲ್ಲ. ಇದು ಮುಂದೆ ಮುಸ್ಲಿಂ ಒಕ್ಕಲಿಗ, ಮುಸ್ಲಿಂ ಲಿಂಗಾಯತ ಅಂತಾ ಆದರೆ ಹೇಗೆ? ಮುಸ್ಲಿಂ ಹಿಂದೂ ಅಂತ ಮಾಡಿದರೆ ಇದನ್ನು ಸಹಿಸಲು ಆಗಲ್ಲ ಎಂದು ಎಚ್ಚರಿಕೆ ನೀಡಿದರು. ಈ ವಿಧಾನವು ಧರ್ಮಗಳ ನಡುವೆ ವಿಭಜನೆಯನ್ನು ಹೆಚ್ಚಿಸುತ್ತದೆ ಎಂದು ಶ್ರೀಗಳು ಆಕ್ಷೇಪ ವ್ಯಕ್ತಪಡಿಸಿದರು.

## ಬೆಂಗಳೂರಲ್ಲಿ 7 ಸಾವಿರ ಗುಂಡಿಗಳನ್ನು ಮುಚ್ಚಿದ್ದೇವೆ, ಇನ್ನೂ 5 ಸಾವಿರ ಬಾಕಿ ಇವೆ

**● ರಸ್ತೆ ಗುಂಡಿಗಳನ್ನು ಗುರುತಿಸಲು ಪೊಲೀಸ್ ಆಯುಕ್ತರಿಗೆ ವರದಿ ನೀಡುವಂತೆ ಸೂಚಿಸಲಾಗಿದೆ: ಡಿಕೆಶಿ**

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ಭಾರೀ ಪ್ರಮಾಣದ ಸಂಚಾರ ದಟ್ಟಣೆ ಹಾಗೂ ವ್ಯಾಪಕ ಮಳೆಯಿಂದಾಗಿ ರಸ್ತೆ ಗುಂಡಿಗಳು ಸೃಷ್ಟಿಯಾಗುತ್ತಿವೆ. ಈಗಾಗಲೇ 7 ಸಾವಿರ ಗುಂಡಿಗಳನ್ನು ಮುಚ್ಚಲಾಗಿದ್ದು, ಇನ್ನೂ 5 ಸಾವಿರ ಗುಂಡಿಗಳು ಬಾಕಿ ಇವೆ ಎಂದು ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನಲ್ಲಿ ರಸ್ತೆ ಗುಂಡಿಗಳು ಸೃಷ್ಟಿಯಾಗಬೇಕೆಂದು ಯಾರೂ ಬಯಸುವುದಿಲ್ಲ, ಹೆಚ್ಚಿನ ವಾಹನಗಳ ಸಂಚಾರ ಹಾಗೂ ನಿಸರ್ಗದತ್ತವಾಗಿ ನಿರಂತರ ಮಳೆಯಿಂದ ಗುಂಡಿಗಳಾಗುತ್ತಿವೆ. ಸರ್ಕಾರ ಸಮಸ್ಯೆಯನ್ನು ಸರಿಪಡಿಸುವ ಸಲುವಾಗಿಯೇ ಶ್ರಮಿಸುತ್ತದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸಂಜೆ ಕೂಡ ಬೆಂಗಳೂರಿನ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಸಭೆ ನಡೆಸುತ್ತಿದ್ದಾರೆ. ರಸ್ತೆ ಗುಂಡಿಗಳನ್ನು ಗುರುತಿಸಲು ಪೊಲೀಸ್ ಆಯುಕ್ತರಿಗೆ ವರದಿ ನೀಡುವಂತೆ ಸೂಚಿಸಲಾಗಿದೆ.

| | |
|---|---|
| 1 | ರಸ್ತೆಗುಂಡಿ ಸಮಸ್ಯೆ ಬಗೆಹರಿಸಲು ನಾವು ಬದ್ಧ ಎಂದ ಡಿಸಿಎಂ ಡಿ.ಕೆ. ಶಿವಕುಮಾರ್ |
| 2 | ಅನುದಾನ ಕೊಟ್ಟರೂ ಬಿಜೆಪಿ ಶಾಸಕರು ಗುಂಡಿ ಮುಚ್ಚಿಲ್ಲ ಯಾಕೆ? |
| 3 | ಬಿಜೆಪಿ ಶಾಸಕರಿಗೆ ಡಿಸಿಎಂ ಡಿಕೆ ಶಿವಕುಮಾರ್ ಕೇಳಿದ್ದಾರೆ ಪ್ರಶ್ನೆ |

ಸಾರ್ವಜನಿಕರೂ ಕೂಡ ರಸ್ತೆ ಗುಂಡಿಗಳ ಬಗ್ಗೆ ಮಾಹಿತಿ ನೀಡಿ ಎಂದು ಮನವಿ ಮಾಡಿದ್ದೇವೆ ಎಂದು ತಿಳಿಸಿದರು. ಬಿಜೆಪಿಯವರಿಗೆ ರಾಜಕೀಯ ಮಾಡುವುದೇ ಪ್ರಮುಖ ಉದ್ದೇಶವಾಗಿದೆ. ಅದನ್ನು ಬಿಟ್ಟು ಅವರಿಗೆ ಬೇರೇನೂ ಗೊತ್ತಿಲ್ಲ. ಅವರು ಏನೂ ಬೇಕಾದರೂ ಮಾಡಿಕೊಳ್ಳಲಿ, ನಾವಂತೂ ಯಾವುದೇ ತಾರತಮ್ಯ ಮಾಡಿಲ್ಲ. ಎಲ್ಲಾ ಶಾಸಕರಿಗೂ ಸಮಾನವಾಗಿ ಅನುದಾನ ಹಂಚುತ್ತಿದ್ದೇವೆ.

ನನ್ನ ವಿವೇಚನಾಧಿಕಾರಿಯಲ್ಲಿರುವ ಅನುದಾನವನ್ನು ಸಮನಾಂತರವಾಗಿಯೇ ನೀಡುತ್ತಿದ್ದೇನೆ. ಅದನ್ನು ಬಳಸಿಕೊಂಡು ಕೆಲಸ ಮಾಡಲಿ, ಹಣ ಇಲ್ಲವೆಂಬ ಅಭಿಪ್ರಾಯವನ್ನು ಏಕೆ ವ್ಯಕ್ತಪಡಿಸುತ್ತಿದ್ದಾರೆ. ಶಾಸಕರಿಗೆ 25 ಕೋಟಿ ರೂ.ಗೂ ಹೆಚ್ಚಿನ ಹಣ ನೀಡಲಾಗಿದೆ ಎಂದರು. ಜಾತಿ ಜನಗಣತಿಯ ಸಂಬಂಧಪಟ್ಟಂತೆ ಸಭೆಯ ಬಳಿಕ ಪ್ರತಿಕ್ರಿಯಿಸುವುದಾಗಿ ಅವರು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.



**ನವೆಂಬರ್ ಡೆಡ್ ಲೈನ್ ನೀಡಿದ್ದ ಡಿಕೆಶಿ:** ರಸ್ತೆ ಗುಂಡಿಗಳನ್ನು ಮುಚ್ಚಿಸುವ ನಿಟ್ಟಿನಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರು ನವೆಂಬರ್ ತಿಂಗಳ ಡೆಡ್ ಲೈನ್ ನೀಡಿದ್ದಾರೆ. ಈಗಾಗಲೇ ಗುತ್ತಿಗೆದಾರರಿಗೆ ಈ ಕುರಿತಾಗಿ ಸೂಚನೆಯನ್ನು ಅವರು ನೀಡಿದ್ದಾರೆ. ನಗರದ 69 ರಸ್ತೆಗಳಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ರಸ್ತೆ ಗುಂಡಿಗಳು ಇವೆ.

ಬೆಂಗಳೂರು ರಸ್ತೆ ಗುಂಡಿಯ ಬಗ್ಗೆ ಉದ್ಯಮಿಗಳು ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ಅಭಿಪ್ರಾಯವನ್ನು ಹೊರಹಾಕಿದ್ದರು. ಇದು ಚರ್ಚೆಗೆ ಗ್ರಾಸವಾಗಿತ್ತು. ಈ ನಡುವೆ ಆಂಧ್ರ ಪ್ರದೇಶದ ಸಚಿವ ನಾರಾ ಲೋಕೇಶ್ ಅವರು ಬೆಂಗಳೂರಿನ ಉದ್ಯಮಿಗೆ ಆಂಧ್ರ ಪ್ರದೇಶಕ್ಕೆ ಆಹ್ವಾನ ನೀಡಿದ್ದರು. ಇದು ಸರ್ಕಾರಕ್ಕೂ ಸಹಜವಾಗಿ ಮುಜುಗರ ಉಂಟು ಮಾಡಿತ್ತು. ಈ ಹಿನ್ನೆಲೆಯಲ್ಲಿ ಡಿಕೆಶಿ ನವೆಂಬರ್ ಡೆಡ್ ಲೈನ್ ನೀಡಿದ್ದಾರೆ.

### ಬಿಜೆಪಿ ಶಾಸಕರು ಗುಂಡಿ ಮುಚ್ಚಿಲ್ಲ ಯಾಕೆ..?

ಬಿಜೆಪಿಯವರು ರಸ್ತೆ ತಡೆಯದರೂ ಮಾಡಲಿ, ಬೇರೆ ಏನಾದರೂ ಮಾಡಲಿ. ಪ್ರತಿಯೊಬ್ಬ ಬಿಜೆಪಿ ಶಾಸಕನ ಕ್ಷೇತ್ರಕ್ಕೆ 25 ಕೋಟಿ ರೂ. ನೀಡಲಾಗಿದೆ. ನನ್ನ ಅನುದಾನದಲ್ಲೂ ಯಾವುದೇ ತಾರತಮ್ಯ ಇಲ್ಲದೆ ನಗರದ ಬಿಜೆಪಿ ಶಾಸಕರ ಕ್ಷೇತ್ರಗಳಿಗೆ ಅನುದಾನ ನೀಡಿದರೂ ಏಕೆ ರಸ್ತೆಗುಂಡಿಗಳನ್ನು ಮುಚ್ಚಿಸಿಲ್ಲ ಎಂದು ಪ್ರಶ್ನಿಸಿದ್ದಾರೆ.

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹11,215 /Gram(24ct) ₹10,280/Gram(22ct) | ಬೆಳ್ಳಿ: ₹133.60/Gram

## ಜೆಡಿಎಸ್ ಮುಖಂಡ ಕಬ್ಜ ಮಾಡಿದ್ದ 75 ಕೋಟಿ ಮೌಲ್ಯದ ಭೂಮಿ ಬಿಡಿಎ ವಶಕ್ಕೆ

• ಉದಯವಾಹಿನಿ, ಬೆಂಗಳೂರು

ಬೆಳ್ಳಂಬೆಳಗ್ಗೆ ಜೆಸಿಬಿ ಘರ್ಜಿಸಿದೆ. ಜೆಡಿಎಸ್ ಮುಖಂಡ ಹನುಮಂತೇಗೌಡ ಕಬ್ಜ ಮಾಡಿದ್ದ 75 ಕೋಟಿ ಮೌಲ್ಯದ ಭೂಮಿಯನ್ನು ಬಿಡಿಎ ವಶಕ್ಕೆ ಪಡೆದುಕೊಂಡಿದೆ. ಕೆಂಗೇರಿ ಬಳಿಯ ವಳಗೆರೆಹಳ್ಳಿ ಸರ್ವೆ ನಂಬರ್‌ನಲ್ಲಿ ಭೂಮಿ ಕಬ್ಜ ಮಾಡಲಾಗಿತ್ತು.

ಸುಮಾರು 75 ಕೋಟಿ ಬೆಲೆ ಬಾಳುವ 1.5 ಎಕರೆ ಭೂಮಿ ಇದಾಗಿದೆ. ಹನುಮಂತೇಗೌಡ ಈ ಹಿಂದೆ ಯಲಹಂಕ ಎಂಎಲ್ಎ ಸ್ಥಾನಕ್ಕೆ ಸ್ಪರ್ಧಿಸಿದ್ದರು. ಅವರ ಪತ್ನಿ ಲತಾ ಹೆಸರಲ್ಲಿ ಜಮೀನಿತ್ತು. ಬಿಡಿಎ ಸ್ವತ್ತನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ್ದರು. ಬಿಡಿಎ ಎಸ್‌ಪಿ ಲಕ್ಷ್ಮೀಗಣೇಶ್ ನೇತೃತ್ವದಲ್ಲಿ ಒತ್ತುವರಿ ತೆರವು ಮಾಡಲಾಗಿದೆ.

## ಡ್ರೋನ್ ತಂತ್ರಜ್ಞಾನ ಬಳಸಿಕೊಂಡು ಹೊಸ ಆವಿಷ್ಕಾರ ಕೈಗೊಳ್ಳಿ: ವಿಜ್ಞಾನಿ ಓಂಕಾರ್

• ಉದಯವಾಹಿನಿ, ಬೆಂಗಳೂರು


ಡ್ರೋನ್ ತಂತ್ರಜ್ಞಾನಗಳನ್ನು ಬಳಸಿಕೊಂಡು ಸಾರಿಗೆ ಕ್ಷೇತ್ರದಲ್ಲಿ ಹೊಸ ಆವಿಷ್ಕಾರಗಳನ್ನು ಕೈಗೊಳ್ಳಬೇಕು ಎಂದು ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್‌ಸಿ) ಏರೋಸ್ಪೇಸ್ ಇಂಜಿನಿಯರಿಂಗ್ ವಿಭಾಗದ ಮುಖ್ಯ ಸಂಶೋಧನಾ ವಿಜ್ಞಾನಿ.ಎಸ್.ಎನ್.ಓಂಕಾರ್ ಸಲಹೆ ನೀಡಿದರು. ದಯಾನಂದ ಸಾಗರ್ ಎಂಜಿನಿಯರಿಂಗ್ ಕಾಲೇಜಿನಲ್ಲಿ ಇಂಜಿನಿಯರ್‌ಗಳ ದಿನದ ಅಂಗವಾಗಿ ಸ್ಥಿರ ನಾಗರಿಕ ಮೂಲಸೌಕರ್ಯಕ್ಕಾಗಿ ಡ್ರನ್ ಮತ್ತು ಜಿಯೊಸ್ಪೇಶಿಯಲ್ ತಂತ್ರಜ್ಞಾನಗಳು ಆಧುನಿಕ ಇಂಜಿನಿಯರಿಂಗ್ ಅಭ್ಯಾಸಗಳ ಮೂಲಕ ಸುಸ್ಥಿರ ಅಭಿವೃದ್ಧಿ ಗುರಿ ಕುರಿತ ರಾಷ್ಟ್ರೀಯ ವಿಚಾರಗೋಷ್ಠಿಯಲ್ಲಿ ಮಾತನಾಡಿದರು. ಡ್ರೋನ್‌ಗಳನ್ನು ಈಗ ಹಲವಾರು ವಲಯಗಳಲ್ಲಿ ಬಳಕೆ ಮಾಡಲಾಗುತ್ತಿದೆ. ಸಾರಿಗೆ ವಲಯದಲ್ಲೂ ಇವುಗಳ ಬಳಕೆಗೆ ವಿಪುಲ ಅವಕಾಶಗಳಿದ್ದು, ವಿಜ್ಞಾನಿಗಳು ಈ ನಿಟ್ಟಿನಲ್ಲೂ ಕೆಲಸ ಮಾಡಬೇಕು ಎಂದರು.

ಭಾರತೀಯ ಭೂ ಸರ್ವೇಕ್ಷಣಾ ಇಲಾಖೆಯ ನಿರ್ದೇಶಕಿ ನಿಶಾ ರಾಣಿ ಅವರು, ಭೂವೈಜ್ಞಾನಿಕ ನಲ್ಲಿ, ಖನಿಜ ಅನ್ವೇಷಣೆ, ಪೈಪ್‌ಲೈನ್‌ಗಳು, ಸುರಂಗ ನಿರ್ಮಾಣಕ್ಕಾಗಿ ಅಗತ್ಯವಾದ ಭೂಗರ್ಭ ಮಾಹಿತಿ ಸಂಗ್ರಹಣೆಯಲ್ಲಿ ಡ್ರೋನ್‌ಗಳ ಉಪಯೋಗಗಳ ಬಗ್ಗೆ ವಿವರಿಸಿದರು. ಇಸ್ರೋ ಮಾಜಿ ವಿಜ್ಞಾನಿ ಗಣೇಶ್ ರಾಜ, ಉಪಪ್ರಾಂಶುಪಾಲ ಎಚ್. ಕೆ. ರಾಮ ರಾಜು, ತಹೇರಾ, ಎಸ್.ಎಸ್.ಸ್ಫೂರ್ತಿ, ಜಿ. ವೆಂಕಟೇಶ, ಡಾ. ಎ.ವಿನಯ್ ಹಾಜರಿದ್ದರು.

## ಜೊಮ್ಯಾಟೊ ಡೆಲಿವರಿ ಯುವಕನ ಮೇಲೆ ಹಲ್ಲೆ: ಇಬ್ಬರ ಬಂಧನ

• ಉದಯವಾಹಿನಿ, ಬೆಂಗಳೂರು

ಜೊಮ್ಯಾಟೊ ಡೆಲಿವರಿ ಯುವಕನ ಮೇಲೆ ಹಲ್ಲೆ ಮಾಡಿದ್ದ ಇಬ್ಬರನ್ನು ಬ್ಯಾಟರಾಯನಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಮುಬಾರಕ್, ಶಾರೂಕ್ ಬಂಧಿತರು. ಹಲ್ಲೆಗೆ ಒಳಗಾದ ಚಾಂದ್ ಅವರು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ಆರೋಪಿಗಳನ್ನು ಬಂಧಿಸಲಾಯಿತು ಎಂದು ಪೊಲೀಸರು ಹೇಳಿದರು.




ಆನ್‌ಲೈನ್‌ನಲ್ಲಿ ಆರ್ಡರ್ ಮಾಡಿದ್ದ ಆಹಾರ ತಡವಾಗಿ ಬಂದಿದ್ದಕ್ಕೆ ಆರೋಪಿಗಳು ಹಲ್ಲೆ ನಡೆಸಿದ್ದಾರೆ ಎಂಬುದು ತನಿಖೆಯಿಂದ ಗೊತ್ತಾಗಿದೆ ಎಂದು ಪೊಲೀಸರು ಹೇಳಿದರು. ಸೆ.12ರಂದು ರಾತ್ರಿ ಬಾಪೂಜಿ ನಗರದ ಬಳಿ ಆರೋಪಿಗಳು. ಜೊಮ್ಯಾಟೊ ಬಿರಿಯಾನಿ ಆರ್ಡರ್ ಮಾಡಿದ್ದರು. ಮಳೆಯಿಂದಾಗಿ ಡೆಲಿವರಿ ಹುಡುಗ ಚಾಂದ್ ಅವರು ತಡವಾಗಿ ಸ್ಥಳಕ್ಕೆ ಹೋಗಿದ್ದರು. ಇದರಿಂದ ಕೆರಳಿದ ಆರೋಪಿಗಳು. ಅವಾಚ್ಯ ಶಬ್ದಗಳಿಂದ ನಿಂದಿಸಿದ್ದರು. ನೀರಿನ ಕ್ಯಾನ್‌ನಿಂದ ಹೊಡೆದಿದ್ದರು. ಘಟನೆಯ ವಿಡಿಯೊವನ್ನು ಸ್ಥಳೀಯರು ಮೊಬೈಲ್‌ನಲ್ಲಿ ಸೆರೆ ಹಿಡಿದು ಸಾಮಾಜಿಕ ಜಾಲತಾಣದಲ್ಲಿ ಅಪ್‌ಲೋಡ್ ಮಾಡಿದ್ದರು. ಆ ವಿಡಿಯೊ ವೀಕ್ಷಿಸಿದ್ದ ಬ್ಯಾಟರಾಯನಪುರ ಠಾಣೆ ಸಾಮಾಜಿಕ ಜಾಲತಾಣ ವಿಭಾಗದ ಪೊಲೀಸರು ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಲಿವಿಂಗ್ ಟುಗೆದರ್‌ನಲ್ಲಿದ್ದ ಯುವತಿ ಮೇಲೆ ಹಲ್ಲೆ ನಡೆಸಿ ಹಣ ಸುಲಿಗೆ: ವ್ಯಕ್ತಿ ಬಂಧನ

• ಉದಯವಾಹಿನಿ, ಬೆಂಗಳೂರು

ವಸತಿ ಗೃಹದಲ್ಲಿ ಜೊತೆಯಲ್ಲಿ ವಾಸವಾಗಿದ್ದ ಗೆಳತಿ ದೈಹಿಕ ಸಂಪರ್ಕಕ್ಕೆ ಒಪ್ಪದಿದ್ದಾಗ ಗೆಳೆಯ ಆಕೆಯನ್ನು ಚಾಕುವಿನಿಂದ ಇರಿದು ಹಲ್ಲೆ ಮಾಡಿರುವ ಘಟನೆ ಬೆಂಗಳೂರಿನ ವೈಟ್ ಫೀಲ್ಡ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ. ಆರೋಪಿಯು ಸಂತ್ರಸ್ತೆಯನ್ನು ಬೆದರಿಸಿ ಹಣ ಸುಲಿಗೆ ಮಾಡಿದ್ದಾನೆ ಎಂದು ಸಹ ಪೊಲೀಸರು ಹೇಳಿದ್ದಾರೆ. ಆರೋಪಿಯನ್ನು ಆಂಧ್ರಪ್ರದೇಶದ ಮೂಲದ ಸಾಯಿ ಬಾಬು ಚೆನ್ನೂರು ಎಂದು ಗುರುತಿಸಲಾಗಿದೆ. ಆತ ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಉದ್ಯೋಗಿಯಾಗಿದ್ದು, ಪತ್ನಿ ಮತ್ತು ಮಕ್ಕಳು ಊರಿನಲ್ಲಿ ವಾಸಿಸುತ್ತಿದ್ದಾರೆ. ಕಳೆದ ಮೂರು ತಿಂಗಳಿನಿಂದ 24 ವರ್ಷದ ಯುವತಿ ಜೊತೆ ವೈಟ್‌ಫೀಲ್ಡ್‌ನ ವೈಟ್‌ರೋಸ್ ಲೇಔಟ್‌ನಲ್ಲಿರುವ ಪ್ಲೊ.4, ಲಿವಿಂಗ್ ಟುಗೆದರ್ ಪಿಜಿ ವಸತಿ ಸೌಕರ್ಯದಲ್ಲಿ ವಾಸಿಸುತ್ತಿದ್ದ. ಮೊನ್ನೆ ಸೆಪ್ಟೆಂಬರ್ 16 ರಂದು ಬೆಳಗಿನ ಜಾವ 3 ಗಂಟೆ ಸುಮಾರಿಗೆ, ಚೆನ್ನೂರು ಸಂತ್ರಸ್ತೆಯ ಕೋಣೆಯ ಬಾಗಿಲು ಬಡಿದು ಲೈಂಗಿಕ ಕಿರುಕುಳ ನೀಡಲು ಆರಂಭಿಸಿದ. ಆಕೆ ತಾನು ಋತುಚಕ್ರದ ಸಮಯದಲ್ಲಿದ್ದೇನೆ ಎಂದು ಹೇಳಿದರೂ ಕೇಳದೆ ಕಿರುಕುಳ ನೀಡುತ್ತಲೇ ಇದ್ದನು. ಆಕೆ ದೈಹಿಕ ಸಂಪರ್ಕಕ್ಕೆ ಒಪ್ಪದಿದ್ದಾಗ ಅವನು ಅವಳ ಬೆನ್ನಿನ ಎಡಭಾಗಕ್ಕೆ ಚಾಕುವಿನಿಂದ ಇರಿದಿದ್ದಾನೆ. ಇದರಿಂದ ಆಕೆಗೆ ಗಾಯಗಳಾಗಿವೆ. ನಂತರ ಅವನು ಅವಳನ್ನು ವಿವಸ್ತ್ರಗೊಳಿಸಿ, ಫೋಟೋಗಳನ್ನು ತೆಗೆದು 70,000 ರೂಪಾಯಿ ಕೊಡು ಇಲ್ಲದಿದ್ದರೆ ನಿನ್ನ ಕುಟುಂಬಸ್ಥರು ಮತ್ತು ಸ್ನೇಹಿತರಿಗೆ ಈ ಫೋಟೋ, ವಿಡಿಯೊಗಳನ್ನು ಕಳುಹಿಸುತ್ತೇನೆಂದು ಬೆದರಿಕೆ ಹಾಕಿದ್ದಾನೆ.

# ನಮ್ಮ ಮೆಟ್ರೋ ಕೆಂಪು ಮಾರ್ಗದ ವೆಚ್ಚ ಮರುಪರಿಶೀಲನೆಗೆ ಸೂಚನೆ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೊ, ಹೆಬ್ಬಾಳ-ಸರ್ಜಾಪುರ ಮಾರ್ಗ (ಕೆಂಪು ಮಾರ್ಗ)ಕ್ಕೆ ರಾಜ್ಯ ಸರ್ಕಾರ ಅನುಮತಿ ನೀಡಿದರೂ, ಯೋಜನಾ ವೆಚ್ಚ ಹೆಚ್ಚಾದ ಹಿನ್ನೆಲೆಯಲ್ಲಿ ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ, ವೆಚ್ಚ ಮರು ಪರಿಶೀಲಿಸುವಂತೆ ರಾಜ್ಯ ಸರ್ಕಾರಕ್ಕೆ ಸೂಚನೆ ನೀಡಿದೆ.


ಉದಯವಾಹಿನಿ ಚಿತ್ರ

ನಮ್ಮ ಮೆಟ್ರೊ, ಹೆಬ್ಬಾಳ-ಸರ್ಜಾಪುರ ಮಾರ್ಗದ ಡಿಪಿಆರ್ ಪ್ರಕಾರ, ಇದರ ನಿರ್ಮಾಣಕ್ಕೆ ಅಂದಾಜು ವೆಚ್ಚ 28,405 ಕೋಟಿ ರೂ.ಗೆ (ಪ್ರತಿ ಕಿ.ಮೀ.ಗೆ ಸುಮಾರು 776.3 ಕೋಟಿ ರೂ.) ಎಂದು ರಾಜ್ಯ ಸಚಿವ ಸಂಪುಟವು 2024ರ ಡಿಸೆಂಬರ್‌ನಲ್ಲಿ ಅಂಗೀಕರಿಸಿತ್ತು. ಪ್ರಸ್ತುತ ಈ ಯೋಜನೆಗೆ ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ, ವೆಚ್ಚ ಪರಿಶೀಲಿಸುವ ಅಗತ್ಯವನ್ನು ಉಲ್ಲೇಖಿಸಿ ವಿವರವಾದ ಯೋಜನಾ ವರದಿಯನ್ನು (ಡಿಪಿಆರ್) ರಾಜ್ಯ ಸರ್ಕಾರಕ್ಕೆ ಹಿಂದಿರುಗಿಸಿದೆ. ನಮ್ಮ ಮೆಟ್ರೊದಲ್ಲಿ ಕೇಂದ್ರವು ಶೇ.50 ಈಕ್ವಿಟಿ ಹೊಂದಿರುವುದರಿಂದ, ವೆಚ್ಚ ಮರು ಮೌಲ್ಯಮಾಪನ ಮಾಡಲು ಸ್ವತಂತ್ರ ಸಲಹೆಗಾರರನ್ನು ನೇಮಿಸಲು ರಾಜ್ಯವನ್ನು ಕೇಳಿದೆ. ಕೇಂದ್ರದ ನಿರ್ದೇಶನದಂತೆ ಬಾಹ್ಯ ಸಲಹೆಗಾರರೊಂದಿಗೆ ವೆಚ್ಚ ಮರು ಮೌಲ್ಯಮಾಪನ ಪ್ರಕ್ರಿಯೆ ನಡೆಯುತ್ತಿದೆ ಎಂದು ಬಿಎಂಆರ್‌ಸಿಎಲ್ ಮೂಲಗಳು ತಿಳಿಸಿವೆ.

ಹೆಬ್ಬಾಳ- ಸರ್ಜಾಪುರ ಮೆಟ್ರೊ ಮಾರ್ಗದಲ್ಲಿ 28 ನಿಲ್ದಾಣಗಳು ತಲೆಯೆತ್ತಲಿವೆ. 36.59 ಕಿ.ಮೀ. ಮಾರ್ಗದ ನಿರ್ಮಾಣಕ್ಕೆ ಅಂದಾಜು 28,405 ಕೋಟಿ ರೂ. ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ. ಇದರಲ್ಲಿ ಸ್ವಾಧೀನ ವೆಚ್ಚ ಸುಮಾರು 8,080 ಕೋಟಿ ರೂ., ಖಾಸಗಿ ಭೂಮಿ ಸ್ವಾಧೀನಪಡಿಸಿಕೊಳ್ಳಲು ಸುಮಾರು 1,224 ಕೋಟಿ ರೂ. ಎಂದು ನಿರೀಕ್ಷಿಸಲಾಗಿದೆ. ಉದ್ದೇಶಿತ ಡಿಪೋಗಾಗಿ ಸರ್ಜಾಪುರ ವೃತ್ತದ ಬಳಿ ಗುರುತಿಸಲಾದ 55.69 ಎಕರೆ ಖಾಸಗಿ ಭೂಮಿ ಸೇರಿದಂತೆ ಒಟ್ಟು 161.65 ಎಕರೆ ಅಗತ್ಯವಿದೆ ಎಂದು ಅಂದಾಜಿಸಲಾಗಿದೆ. ಹೆಬ್ಬಾಳದಿಂದ ಸರ್ಜಾಪುರವರೆಗೆ 36 ಕಿ.ಮೀ. ಮಾರ್ಗದಲ್ಲಿ ಒಟ್ಟು 836 ಆಸ್ತಿಗಳು ಬರುತ್ತಿವೆ. ಮಾರ್ಗಮಧ್ಯೆ, ಗುರುತಿಸಲಾಗಿರುವ ಕಟ್ಟಡಗಳಲ್ಲಿ 314 ವಸತಿ ಕಟ್ಟಡಗಳು, 37 ವಾಣಿಜ್ಯ ಕಟ್ಟಡಗಳು , 63 ಕೈಗಾರಿಕಾ ಕಟ್ಟಡಗಳಿವೆ. ಬಿಎಂಆರ್‌ಸಿಎಲ್ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ನಂತರ, ಯೋಜನೆಗೆ ಅಗತ್ಯವಿರುವ ಭೂಮಿಯ ಒಟ್ಟು ವಿಸ್ತೀರ್ಣ ಮತ್ತು ಯಾವ ಕಟ್ಟಡಗಳ ಭೂಸ್ವಾಧೀನ ಮಾಡಬೇಕಾಗಿದೆ ಎಂಬುದು ಸ್ಪಷ್ಟವಾಗಲಿದೆ.

# ಎಚ್‌ಡಿಕೆ ಕೊಡುಗೆ ಏನು ಎಂದು ಪ್ರಶ್ನಿಸಿದ ಡಿಕೆಶಿ

## ಡಿಕೆ ಶಿವಕುಮಾರ್‌ಗೆ ದೂರು ನೀಡಬೇಡಿ, ಅವರು ಅದನ್ನು ಬ್ಲ್ಯಾಕ್‌ಮೇಲ್ ಎನ್ನುತ್ತಾರೆ

• ಉದಯವಾಹಿನಿ, ಬೆಂಗಳೂರು

ರಾಜಧಾನಿಯ ರಸ್ತೆಗಳು ಕುಲಗೆಟ್ಟು ಹೋಗಿದೆ, ಮಳೆಯಿಂದಾಗಿ ಗುಂಡಿಗಳು ಹೆಚ್ಚಾಗಿವೆ. ನಗರದ ಮೂಲಭೂತ ಸೌಕರ್ಯದ ಬಗ್ಗೆ ಬೇಸರಿಸಿ, ಖಾಸಗಿ ಸಂಸ್ಥೆಯೊಂದು ಬೆಂಗಳೂರು ತೊರೆಯುವ ಟ್ವೀಟ್ ಅನ್ನು ಮಾಡಿದ್ದರು.

ಇದು, ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಇದರ ಮುಂದುವರಿದ ಭಾಗವಾಗಿ, ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಕುಮಾರಸ್ವಾಮಿ ಕುಟುಂಬದ ನಡುವೆ ವಾಕ್ಸಮರ ನಡೆಯುತ್ತಿದೆ.

ರಾಜ್ಯದಲ್ಲಿ ಐಟಿ ಹಾಗೂ ಸ್ಟಾರ್ಟ್ ಅಪ್ ಕಂಪನಿಗಳನ್ನು ರಸ್ತೆ ಗುಂಡಿಗಳಿಂದ ಓಡಿಸುವ ಕೆಲಸವನ್ನು ಡಿಕೆ ಶಿವಕುಮಾರ್ ಮಾಡುತ್ತಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದರು. ಇದಕ್ಕೆ, ಡಿಸಿಎಂ ಕೌಂಟರ್ ನೀಡಿ, ಪ್ರಧಾನಿಯವರ ರೈಟ್ ಹ್ಯಾಂಡ್ ಅಲ್ಲವೇ ಅವರು, ಕೇಂದ್ರದಿಂದ ಅನುದಾನ ತರಲಿ ಎಂದು ತಿರುಗೇಟು ನೀಡಿದ್ದರು.

ಸಂಸದರಾಗಿ, ಕೇಂದ್ರ ಸಚಿವರಾಗಿ ಬೆಂಗಳೂರು ನಗರಕ್ಕೆ ನಿನ್ನ ಕೊಡುಗೆ ಏನು? ಎಂದು ತಿಳಿಸಿ. ಮೇಕೆದಾಟು ಯೋಜನೆಗೆ ಐದೇ ನಿಮಿಷದಲ್ಲಿ ಅನುಮತಿ ಕೊಡಿಸುತ್ತೇನೆ ಎಂದು ಹೇಳಿ ಇದುವರೆಗೂ ಏಕೆ ಕೊಡಿಸಿಲ್ಲ? ಮಹದಾಯಿ ಯೋಜನೆಗೆ ಅನುಮತಿ ಏಕೆ ಕೊಡಿಸಿಲ್ಲ? ರೈತರ ಮಕ್ಕಳು ಎಂದು ಹೇಳಿಕೊಳ್ಳುವ ನೀವು ಯುಕೆಪಿ ಯೋಜನೆ ವಿರುದ್ಧ ಮಹಾರಾಷ್ಟ್ರ ಸಿಎಂ ಸುಪ್ರೀಂ ಕೋರ್ಟ್‌ಗೆ ಹೋಗುತ್ತೇವೆ ಎಂದು ಹೇಳಿರುವಾಗ ಅದರ ವಿರುದ್ಧ ಏಕೆ ಧ್ವನಿ ಎತ್ತುತ್ತಿಲ್ಲ ಎಂದು ಡಿಕೆ ಶಿವಕುಮಾರ್ ಪ್ರಶ್ನಿಸಿದ್ದರು.


ಉದಯವಾಹಿನಿ ಚಿತ್ರ

**ದೇವೇಗೌಡ್ರ ಕಾಲದಿಂದ ಲೆಕ್ಕ ಕೊಟ್ಟ ಜೆಡಿಎಸ್**

ಡಿಕೆ ಶಿವಕುಮಾರ್ ಹೇಳಿದಂತೆ, ಬೆಂಗಳೂರು ನಗರಕ್ಕೆ ಎಚ್.ಡಿ.ದೇವೇಗೌಡ ಅವರು ಸಿಎಂ, ಪಿಎಂ ಆಗಿದ್ದಾಗ ಮತ್ತು ಎಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ನೀಡಿದ ಕೊಡುಗೆ ಏನು ಎನ್ನುವುದನ್ನು ನಿಖಿಲ್ ಕುಮಾರಸ್ವಾಮಿ ವಿವರಿಸಿದ್ದಾರೆ.

ಬಂಡವಾಳ ಹೂಡಿಕೆಗೆ ಸರ್ಕಾರ ಯಾವ ಮೂಲ ಸೌಲಭ್ಯ ಕಲ್ಪಿಸಿದೆ. ನವೆಂಬರ್ ವೇಳೆಗೆ ಗುಂಡಿ ಮುಚ್ಚುವ ಗಡುವು ನೀಡಿ 1,100 ಕೋಟಿ ರೂ. ಒದಗಿಸುವುದಾಗಿ ಹೇಳಿದ್ದಾರೆ. ಮೂಲ ಸೌಕರ್ಯವಿಲ್ಲದೆ ಉದ್ಯಮಗಳು ನೆರೆಹೊರೆಯ ರಾಜ್ಯಗಳಿಗೆ ಹೋದರೆ ತೆರಿಗೆ ನಷ್ಟ ಉಂಟಾಗಲಿದೆ. ಜಿಬಿಎ ವ್ಯಾಪ್ತಿಯಲ್ಲಿ ವಾರ್ಷಿಕ 850 ಕೋಟಿ ರೂ. ತೆರಿಗೆ ಪಾವತಿಯಾಗುತ್ತಿದೆ. ಇರುವ ಕಂಪನಿಗಳನ್ನು ಉಳಿಸಿಕೊಂಡು ಹೊಸ ಕಂಪನಿಗಳನ್ನು ಬೆಂಗಳೂರಿಗೆ ಕರೆತರುವ ಪ್ರಯತ್ನವಾಗುತ್ತಿಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಆಕ್ಷೇಪಿಸಿದರು.

- ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಮುಖ್ಯಮಂತ್ರಿಯಾಗಿದ್ದಾಗ ಐಟಿಬಿಟಿಗೆ 10 ವರ್ಷಗಳ ಕಾಲ ತೆರಿಗೆ ವಿನಾಯಿತಿ ನೀಡಿ ಭದ್ರ ಬುನಾದಿ ಹಾಕಿದರು.
- ದೇವೇಗೌಡ್ರು, ಬೆಂಗಳೂರಿನ ಕಲಾಸಿಪಾಳ್ಯದ ಮೈಸೂರು ರಸ್ತೆ ಮೇಲ್ಸೇತುವೆ ನಿರ್ಮಾಣಕ್ಕೆ ಚಾಲನೆ ನೀಡಿದರು.
- ಪ್ರಧಾನಿಯಾಗಿ ದೇವೇಗೌಡ್ರು, ಬೆಂಗಳೂರಿಗೆ 9 ಟಿಎಂಸಿ ಕಾವೇರಿ ನೀರನ್ನು ಒದಗಿಸಿದರು.
- ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದ ವೇಳೆ ಬಿಬಿಎಂಪಿ Bruhat Bengalru Mahanagara Palike ಅಸ್ತಿತ್ವಕ್ಕೆ ತಂದಿದ್ದರು.
- ರಾಜರಾಜೇಶ್ವರಿ ನಗರ, ಹೊಸಕೆರೆಹಳ್ಳಿ ಸೇರಿದಂತೆ ವಿವಿಧೆಡೆ ನಡೆಯುತ್ತಿರುವ ಮೇಲ್ಸೇತುವೆ ಕಾಮಗಾರಿಗೆ ಚಾಲನೆ ನೀಡಿದರು, ಅದು ಕುಂಟುತ್ತಾ ಸಾಗುತ್ತಿವೆ.
- 4,500 ಇವಿ (Electronic Vehicles) ಬಸ್‌ಗಳನ್ನು ಬೆಂಗಳೂರಿಗೆ ಕುಮಾರಸ್ವಾಮಿ ನೀಡಿದ್ದಾರೆ, ಕೃತಜ್ಞತೆ ಇದೆಯಾ ನಿಮಗೆ?
- ಇದರ ಹೊರತಾಗಿ, ಜೆಡಿಎಸ್ ಆಡಳಿತದಲ್ಲಿ ಏನು ಅಭಿವೃದ್ಧಿಯಾಗಿದೆ ಎಂದು ಶ್ವೇತಪತ್ರ ಹೊರಡಿಸಲು ಸಿದ್ಧ, ನೀವು ಸಿದ್ದರೇ?

## ಬೆಂಗಳೂರಿನ ಹಲವೆಡೆ ವಿದ್ಯುತ್ ವ್ಯತ್ಯಯ



• ಉದಯವಾಹಿನಿ, ಬೆಂಗಳೂರು

ಕೆಪಿಟಿಸಿಎಲ್ ವತಿಯಿಂದ ತುರ್ತು ನಿರ್ವಹಣಾ ಕಾಮಗಾರಿ ಹಿನ್ನೆಲೆಯಲ್ಲಿ ಬೆಂಗ್ಳೂರು ನಗರದ ಹಲವೆಡೆ ಸೆ.23 ರಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

66/11ಕೆ.ವಿ. ಯಲ್ಲಾರ್ ಬಂಡೆ ಉಪಕೇಂದ್ರ (ಉತ್ತರ) ವ್ಯಾಪ್ತಿಯಲ್ಲಿ ಮಂಗಳವಾರ ಬೆಳಗ್ಗೆ 11 ಗಂಟೆಯಿಂದ ಸಂಜೆ 4 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

**ಎಲ್ಲೆಲ್ಲಿ ಕರೆಂಟ್ ಇರಲ್ಲ?:** ಕಾವಲ್ಬೈರಸಂದ್ರ, ಎಲ್‌ಆರ್ ಬಂಡೆ ಮುಖ್ಯರಸ್ತೆ, ಗಾಂಧಿನಗರ, ಚಿನ್ನಣ್ಣ ಲೇಔಟ್, ಅಂಬೇಡ್ಕರ್ ಲೇಔಟ್, ಅನ್ವರ್ ಲೇಔಟ್, ಕಾವೇರಿ ನಗರ, ಅಂಬೇಡ್ಕರ್ ವೈದ್ಯಕೀಯ ಕಾಲೇಜು, ಸುಲ್ತಾನ್ ಪಾಳ್ಯ, ರಂಕಾನಗರ, ಕನಕನಗರ, ಕೆಎಚ್‌ಬಿ ಮುಖ್ಯರಸ್ತೆ, ಭುವನೇಶ್ವರಿ ನಗರ, ಮಠಾಧೀಶ ಸಭಾಂಗಣ, ಮಠಾಧೀಶ ಸಭಾಂಗಣ ನಗರ, ವಿ ನಾಗೇನಹಳ್ಳಿ, ಪೆರಿಯಾರ್ ನಗರ, ಪೆರಿಯಾರ್ ವೃತ್ತ, ಶಂಪುರ, ಕುಶಾಲ್ ನಗರ, ಮೋದಿ ರಸ್ತೆ, ಮೋದಿ ಉದ್ಯಾನ, ದೊಡ್ಡಣ್ಣ ನಗರ, ಮುನಿವೀರಪ್ಪ ಲೇಔಟ್, ಸಕ್ಕರೆ ಮಂಡಿ, ಉಪ್ಪಿನ ಮಂಡಿ, ಮುನೇಶ್ವರ ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

## ಸೆಪ್ಟೆಂಬರ್ 22ರಿಂದ ಹಾಲಿನ ಉತ್ಪನ್ನಗಳ ದರ ಇಳಿಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ದಸರಾ ಹಬ್ಬದ ಸಮಯದಲ್ಲಿ ರಾಜ್ಯ ಸರ್ಕಾರದ ಅಧೀನದಲ್ಲಿರುವ ಕರ್ನಾಟಕ ಹಾಲು ಒಕ್ಕೂಟ ನಂದಿನಿ ತುಪ್ಪ, ಬೆಣ್ಣೆ ಮತ್ತು ಲಸ್ಸಿ ಸೇರಿದಂತೆ ಹಲವು ಉತ್ಪನ್ನಗಳ ದರ ಇಳಿಕೆ ಮಾಡಿ ಗ್ರಾಹಕರಿಗೆ ಸಿಹಿಸುದ್ದಿ ನೀಡಿದೆ. ಸೆ,22ರಿಂದ ನೂತನ ದರ ಜಾರಿಗೆ ಬರಲಿದ್ದು, ಅಧಿಕೃತ ಆದೇಶ ಬಾಕಿಯಿದೆ. ಕೇಂದ್ರ ಸರ್ಕಾರದಿಂದ ಜಿಎಸ್‌ಟಿ ಇಳಿಕೆ ಬೆನ್ನಲ್ಲೇ ದರ ಇಳಿಕೆಗೆ ಸಜ್ಜಾಗಿರುವ ಕೆಎಂಎಫ್ ಈ ಬಗ್ಗೆ ನಿನ್ನೆ ಕೆಎಂಎಫ್ ಅಧಿಕಾರಿಗಳು ಸಭೆ ಮಾಡಿದ್ದಾರೆ. ಸಭೆಯಲ್ಲಿ ಯಾವುದರ ದರ ಎಷ್ಟು ಇಳಿಕೆ ಎಂಬುವುದನ್ನು ನಿರ್ಧಾರ ಮಾಡಲಾಗಿದೆ. ತುಪ್ಪ, ಬೆಣ್ಣೆ, ಲಸ್ಸಿ ಸೇರಿ ಹಲವು ಉತ್ಪನ್ನಗಳ ದರ ಇಳಿಕೆ ಆಗಿದೆ.

ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಬಿ ಶಿವಸ್ವಾಮಿ ಅವರು ಪ್ರತಿನಿಧಿ ಜೊತೆಗೆ ಮಾತನಾಡಿ, ತುಪ್ಪ, ಚೀಸ್, ಖಾರದ ಪುಡಿಗಳಂತಹ ವಸ್ತುಗಳ ಮೇಲಿನ ಶೇಕಡಾ 12 ಜಿಎಸ್‌ಟಿಯನ್ನು ಶೇಕಡಾ 5ಕ್ಕೆ ಇಳಿಸಲಾಗುವುದು. ಈ ಹಿಂದೆ ಶೇಕಡಾ 18 ಜಿಎಸ್‌ಟಿ ಹೊಂದಿದ್ದ ಐಸ್ ಕ್ರೀಮ್‌ಗಳು, ಮಫಿನ್‌ಗಳು, ಕೇಕ್‌ಗಳು, ಕುಕೀಸ್, ಚಾಕೊಲೇಟ್‌ಗಳು ಶೇ. 5ಕ್ಕೆ ಇಳಿಕೆಯಾಗುತ್ತದೆ.

ಹಾಲು ಮತ್ತು ಮೊಸರಿನ ದರಗಳಲ್ಲಿ ಯಾವುದೇ ಪರಿಷ್ಕರಣೆ ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಹಾಲಿನ ಮೇಲೆ ಯಾವುದೇ ಜಿಎಸ್‌ಟಿ ವಿಧಿಸಲಾಗಿಲ್ಲವಾದರೂ, ಮೊಸರು 5% ಜಿಎಸ್‌ಟಿಯನ್ನು ಹೊಂದಿರುತ್ತದೆ. ಖರೀದಿ ಶುಲ್ಕಗಳು ಬದಲಾಗದೆ ಇರುವುದರಿಂದ ಇದು ರೈತರ ಮೇಲೆ ಪರಿಣಾಮ ಬೀರುವುದಿಲ್ಲ.

## ಹೊಸ ಹೆಲಿಕಾಪ್ಟರ್ ಖರೀದಿಸಿದ ಸತೀಶ್ ಜಾರಕಿಹೊಳಿ! ಬೆಲೆ ಎಷ್ಟು ಗೊತ್ತಾ?

• ಉದಯವಾಹಿನಿ, ಬೆಂಗಳೂರು

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೊಸ ಹೆಲಿಕಾಪ್ಟರ್ ಖರೀದಿಸಿದ್ದು, ರಾಜ್ಯ ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಕೆರಳಿಸಿದೆ. ಸತೀಶ್ ಜಾರಕಿಹೊಳಿ ಅವರು ತಮ್ಮ ಹಳೆಯ ಸಿಂಗಲ್ ಇಂಜಿನ್ ಹೆಲಿಕಾಪ್ಟರ್ ಅನ್ನು ಮಾರಾಟ ಮಾಡಿ, ಜರ್ಮನಿಯ ಅಗಸ್ಟಾ ಕಂಪೆನಿಯ ಆತ್ಯಾಧುನಿಕ ಡಬಲ್ ಇಂಜಿನ್ ಹೆಲಿಕಾಪ್ಟರ್ ಖರೀದಿಸಿದ್ದಾರೆ.


ಉದಯವಾಹಿನಿ ಚಿತ್ರ

ಬೆಂಗಳೂರು ಸಮೀಪದ ಜಕ್ಕೂರು ಏರೋಡ್ರೋಮ್‌ನಲ್ಲಿ ತಮ್ಮ ಹೊಸ ಹೆಲಿಕಾಪ್ಟರ್ ಅನ್ನು ಸತೀಶ್ ಜಾರಕಿಹೊಳಿ ಅವರು ಪರಿಶೀಲಿಸಿದರು. ಪಕ್ಷ ಸಂಘಟನೆ, ಚುನಾವಣಾ ಸಿದ್ಧತೆಗೆ ಹೆಲಿಕಾಪ್ಟರ್ ಖರೀದಿ ಮಾಡಿದ್ದಾರೆ ಎನ್ನಲಾಗಿದೆ.


**ವಿಶೇಷ ಹೆಲಿಕಾಪ್ಟರ್:** ಈ ಡಬಲ್ ಇಂಜಿನ್ ಹೆಲಿಕಾಪ್ಟರ್ ಆಧುನಿಕ ಸುರಕ್ಷಾ ವ್ಯವಸ್ಥೆಯನ್ನು ಹೊಂದಿದ್ದು, ಐವರು ಪ್ರಯಾಣಿಕರು ಇಬ್ಬರು ಪೈಲಟ್‌ಗಳು ಪ್ರಯಾಣಿಸಬಹುದಾಗಿದೆ. ಚಾಪರ್ ಸೀಟ್ ಸೌಲಭ್ಯವಿರುವ ಈ ಹೆಲಿಕಾಪ್ಟರ್ ಅಪಘಾತದ ಪ್ರಯಾಣಿಕರಿಗೆ ಸುರಕ್ಷತೆ ಒದಗಿಸುತ್ತದೆ. ಇದರ ಜೊತೆಗೆ, ಸುಧಾರಿತ ವೈರ್‌ಲೆಸ್ ಸಂವಹನ ವ್ಯವಸ್ಥೆಯನ್ನೂ ಹೊಂದಿದೆ. ಸತೀಶ್ ಜಾರಕಿಹೊಳಿ ಅವರು ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ, ಫೋಟೋ ಮತ್ತು ವಿಡಿಯೋ ಹಂಚಿಕೊಂಡಿದ್ದು, ಶೀಘ್ರವೇ ನಮ್ಮ ಹೊಸ ಹೆಲಿಕಾಪ್ಟರ್ ಹಾರಾಟಕ್ಕೆ ಸಿದ್ಧವಾಗಲಿದೆ, ಎಂದು ಬರೆದುಕೊಂಡಿದ್ದಾರೆ. ಈ ವೇಳೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುನೀಲ್ ಹನಮಣ್ಣರ ಮತ್ತು ಅಲಿ ಗೊರವನಕೊಳ್ಳ ಉಪಸ್ಥಿತರಿದ್ದರು.

## ಕ್ಷೇತ್ರದಲ್ಲಿ ವಾರದೊಳಗೆ ಗುಂಡಿ ಮುಚ್ಚುವ ಕಾರ್ಯ ಆರಂಭ

• ಉದಯವಾಹಿನಿ, ಬೆಂಗಳೂರು

ಹೆಬ್ಬಾಳ ಕ್ಷೇತ್ರದಲ್ಲಿರುವ ರಸ್ತೆ ಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಇನ್ನೊಂದು ವಾರದಲ್ಲಿ ಆರಂಭಿಸಲಾಗುವುದು ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ಕ್ಷೇತ್ರದ ಕುಂದುಕೊರತೆಗಳ ಪರಿಹಾರಕ್ಕೆ ಶನಿವಾರ ಆಯೋಜಿಸಿದ್ದ ಜನಸ್ಪಂದನ ಸಭೆಯಲ್ಲಿ ಅವರು ಮಾತನಾಡಿದರು.

ಒಳಚರಂಡಿ ಕಾಮಗಾರಿಗಾಗಿ ರಸ್ತೆಯನ್ನು ಅಗೆದು ಬಿಡಲಾಗಿದೆ. ಬೀದಿ ದೀಪಗಳ ಸಮಸ್ಯೆ, ಇ- ಖಾತಾ ವಿತರಣೆಯಲ್ಲಿ ವಿಳಂಬ ಸೇರಿದಂತೆ ಹಲವು ಸಮಸ್ಯೆಗಳನ್ನು ನಾಗರಿಕರು ಸಚಿವರ ಮುಂದಿಟ್ಟರು. ಕಳೆದ ಹಲವು ದಿನಗಳಿಂದ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ರಸ್ತೆ ಗುಂಡಿಗಳನ್ನು ಮುಚ್ಚಲು ಸಾಧ್ಯವಾಗುತ್ತಿಲ್ಲ. ಇನ್ನು ಒಂದೆರಡು ದಿನಗಳಲ್ಲಿ ಮಳೆಯ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಇದ್ದು, ಮಳೆ ಬಿಟ್ಟ ತಕ್ಷಣ ಗುಂಡಿ ಮುಚ್ಚುವ ಕಾಮಗಾರಿಯನ್ನು ಮೊದಲ ಆದ್ಯತೆಯಾಗಿ ಕೈಗೆತ್ತಿಕೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು. ಕಸ ವಿಲೇವಾರಿಯಲ್ಲಿ ಆಗುತ್ತಿರುವ ಲೋಪಗಳ ಬಗ್ಗೆ ಜನರು ದೂರು ತೋಡಿಕೊಂಡ ಬಗ್ಗೆ ಪ್ರತಿಕ್ರಿಯೆ ನೀಡಿದ ಸಚಿವರು, 'ಕೂಡಲೇ ಈ ಲೋಪ ಎಸಗಿದ ಕಸ ವಿಲೇವಾರಿ ಗುತ್ತಿಗೆದಾರನಿಗೆ ನೊಟೀಸ್ ನೀಡಿ ದಂಡ ವಿಧಿಸಬೇಕು' ಎಂದು ಬಿಬಿಎಂಪಿ ಅಧಿಕಾರಿಗಳಿಗೆ ಆದೇಶ ನೀಡಿದರು. ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಅಲ್ಲಲ್ಲಿ ರಸ್ತೆಯನ್ನು ಅಗೆಯಲಾಗಿತ್ತು. ಆದರೆ, ಕಾಮಗಾರಿ ಮುಗಿದು ಹಲವು ತಿಂಗಳುಗಳು ಕಳೆದಿದ್ದರೂ ರಸ್ತೆ ದುರಸ್ತಿ ಮಾಡದ ಜಲಮಂಡಳಿ ಮತ್ತು ಬಿಬಿಎಂಪಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಇಂತಹ ಸ್ಥಳಗಳಲ್ಲಿ ರಸ್ತೆ ದುರಸ್ತಿ ಮಾಡಿ ಡಾಂಬರೀಕರಣ ಮಾಡುವ ಕಾಮಗಾರಿಯನ್ನು ಸೋಮವಾರದೊಳಗೆ ಪೂರ್ಣಗೊಳಿಸಬೇಕು. ಇದಕ್ಕೆ ವಿಫಲರಾದ ಅಧಿಕಾರಿಗಳನ್ನು ನಿರ್ದಾಕ್ಷಿಣ್ಯವಾಗಿ ಅಮಾನತು ಮಾಡಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಪಾದಚಾರಿ ಮಾರ್ಗಗಳಲ್ಲಿ ಅಂಗಡಿ ಮುಗ್ಗಟ್ಟುಗಳನ್ನು ಇಟ್ಟುಕೊಂಡು ಪಾದಚಾರಿಗಳಿಗೆ ಅಡಚಣೆ ಆಗುತ್ತಿರುವ ಹಿನ್ನೆಲೆಯಲ್ಲಿ ಮುಂದಿನ ವಾರ ಅಂತಹ ಅಂಗಡಿಗಳನ್ನು ತೆರವುಗೊಳಿಸುವ ಕಾರ್ಯಾಚರಣೆಯನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಬೀದಿ ದೀಪಗಳ ನಿರ್ವಹಣೆ, ಕುಡಿಯುವ ನೀರಿನ ಪೂರೈಕೆ, ಭದ್ರತಾ ವ್ಯವಸ್ಥೆ ಸೇರಿದಂತೆ ಇನ್ನಿತರ ವಿಚಾರಗಳಿಗೆ ಸಂಬಂಧಿಸಿದ ಅಹವಾಲುಗಳನ್ನು ಆಲಿಸಿದ ಸಚಿವರು, ಕಾಲಮಿತಿಯಲ್ಲಿ ಸಮಸ್ಯೆಗಳನ್ನು ಪರಿಹರಿಸುವಂತೆ ಅಧಿಕಾರಿಗಳಿಗೆ ಗಡುವು ವಿಧಿಸಿದರು.

# ಕೆಎಸ್‌ಆರ್‌ಟಿಸಿಯಿಂದ ಸಿಹಿ ಸುದ್ದಿ; 2,900ಕ್ಕೂ ಹೆಚ್ಚು ವಿಶೇಷ ಬಸ್ ವ್ಯವಸ್ಥೆ

## ರಾಜ್ಯದ ಮತ್ತು ಅಂತಾರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ಅ.2 ಹಾಗೂ ಅ.5 ವಿಶೇಷ ವಾಹನಗಳನ್ನು ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ದಸರಾ ಹಬ್ಬದ ಹಿನ್ನೆಲೆಯಲ್ಲಿ ಪ್ರಯಾಣಿಕರಿಗೆ ಕೆಎಸ್‌ಆರ್‌ಟಿಸಿ ಗುಡ್ ನ್ಯೂಸ್ ನೀಡಿದೆ. ನವರಾತ್ರಿಯಲ್ಲಿ ಮೈಸೂರು ಅಥವಾ ರಾಜ್ಯ, ನೆರೆರಾಜ್ಯದ ವಿವಿಧ ಸ್ಥಳಗಳಿಗೆ ಹೋಗುವವರಿಗೆ ಅನುಕೂಲವಾಗಲು ಕೆಎಸ್‌ಆರ್‌ಟಿಸಿಯಿಂದ 2,900ಕ್ಕೂ ಹೆಚ್ಚು ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಪ್ರಸ್ತುತ ಕಾರ್ಯಾಚರಣೆ ಮಾಡಲಾಗುತ್ತಿರುವ ಕರ್ನಾಟಕ ಸಾರಿಗೆ (ವೇಗದೂತ), ರಾಜಹಂಸ, ಸ್ಲೀಪರ್, ಐರಾವತ, ಐರಾವತ ಕ್ಲಬ್ ಕ್ಲಾಸ್ (ಮಲ್ಟಿ ಆಕ್ಸಲ್) ಹಾಗೂ ಅಂಬಾರಿ ಕ್ಲಬ್ ಕ್ಲಾಸ್, ಪಲ್ಲಕ್ಕಿ ಸ್ಲೀಪರ್, ಅಶ್ವಮೇಧ ಸಾರಿಗೆ ಸೇವೆಗಳ ಜೊತೆಗೆ ಹೆಚ್ಚುವರಿ ಬಸ್‌ಗಳ ವಿಶೇಷ ಸಾರಿಗೆ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ.

**ದಸರಾ ರಜೆ ಪ್ರಯುಕ್ತ 2300ಕ್ಕೂ ಹೆಚ್ಚು ವಿಶೇಷ ಬಸ್**

ದಸರಾ ಹಬ್ಬದ ರಜೆಗಳ ಪ್ರಯುಕ್ತ ಕೆಎಸ್‌ಆರ್‌ಟಿಸಿ, ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಸೆ.26, 27 ಹಾಗೂ 30 ರಂದು ಬೆಂಗಳೂರಿನಿಂದ ರಾಜ್ಯದ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಗೆ 2300ಕ್ಕೂ ಹೆಚ್ಚು ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಿದೆ. ಈ ವಾಹನಗಳು ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ ಮತ್ತು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ನಡೆಸಲಿವೆ. ನಂತರ ರಾಜ್ಯದ ಮತ್ತು ಅಂತಾರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ಅ.2 ಹಾಗೂ ಅ.5 ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು.


ಉದಯವಾಹಿನಿ ಚಿತ್ರ

ರಾಜ್ಯದ ಧರ್ಮಸ್ಥಳ, ಕುಕ್ಕೆಸುಬ್ರಹ್ಮಣ್ಯ, ಶೃಂಗೇರಿ, ಹೊರನಾಡು, ಶಿವಮೊಗ್ಗ, ಮಡಿಕೇರಿ, ಮಂಗಳೂರು, ದಾವಣಗೆರೆ, ಗೋಕರ್ಣ, ಕೊಲ್ಲೂರು, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಕಾರವಾರ, ಬಳ್ಳಾರಿ, ಹೊಸಪೇಟೆ, ಕಲಬುರಗಿ, ರಾಯಚೂರು ಮುಂತಾದ ಸ್ಥಳಗಳಿಗೆ ಹಾಗೂ ನೆರೆರಾಜ್ಯಗಳಲ್ಲಿನ ಹೈದರಾಬಾದ್, ಚೆನ್ನೈ, ಊಟಿ, ಕೊಡೈಕೆನಾಲ್, ಸೇಲಂ, ತಿರುಚಿನಾಪಳ್ಳಿ, ಪುದುಕೋಟೆ, ಮಧುರೈ, ಪಣಜಿ, ಶಿರಡಿ, ಪೂನಾ, ಏರ್ನಾಕುಲಂ, ಪಾಲ್ಘಾಟ್ ಹಾಗೂ ಇತರೆ ಸ್ಥಳಗಳಿಗೆ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುವುದು.

ಈ ಪ್ಯಾಕೇಜ್‌ಗಳನ್ನು ಸೆ.27 ರಿಂದ ಅ.7ರವರೆಗೆ ಕಾರ್ಯಾಚರಿಸಲಾಗುವುದು

ಈ ಮೇಲ್ಕಂಡ ಪ್ಯಾಕೇಜ್ ಸಾರಿಗೆಗಳು ಬೆಳಗ್ಗೆ ಮೈಸೂರಿನಿಂದ ಹೊರಟು ಮೇಲ್ಕಂಡ ವಿವಿಧ ಸ್ಥಳಗಳನ್ನು ಸಂದರ್ಶಿಸಿದ ನಂತರ ಸಾಯಂಕಾಲ ಮೈಸೂರಿಗೆ ವಾಪಸ್ಸಾಗುತ್ತವೆ. ಸಾರ್ವಜನಿಕ ಪ್ರಯಾಣಿಕರು ಕರ್ನಾಟಕ ಹಾಗೂ ನೆರೆರಾಜ್ಯಗಳಿಗೆ ತೆರಳಲು ಇ-ಟಿಕೇಟ್ ಬುಕಿಂಗ್‌ನ್ನು www.ksrtc.karnataka.gov.in ವೆಬ್ ಸೈಟ್ ಅಥವಾ ಮೊಬೈಲ್ ಮುಖಾಂತರ ಮಾಡಬಹುದಾಗಿದೆ.

**ಶೇ.10ರವರೆಗೆ ರಿಯಾಯಿತಿ:** ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟ್ ಕಾಯ್ದಿರಿಸಿದ್ದಲ್ಲಿ ಶೇಕಡ 5 ರಷ್ಟು ರಿಯಾಯಿತಿ ನೀಡಲಾಗುವುದು. ಹೋಗುವ ಮತ್ತು ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ ಶೇಕಡ 10 ರಷ್ಟು ರಿಯಾಯಿತಿ ನೀಡಲಾಗುವುದು.

### ಒಂದು ದಿನದ ವಿಶೇಷ ಪ್ರವಾಸ ಸಾರಿಗೆ

ಮೈಸೂರಿಗೆ ಬರುವ ಪ್ರವಾಸಿಗರ ಅನುಕೂಲಕ್ಕಾಗಿ ಕರ್ನಾಟಕ ಸಾರಿಗೆ ವಾಹನಗಳಿಂದ ಒಂದು ದಿನದ ವಿಶೇಷ ಪ್ರವಾಸ ಸಾರಿಗೆಗಳ ಕಾರ್ಯಾಚರಣೆ

ಗಿರಿದರ್ಶಿನಿ: ಬಂಡೀಪುರ, ಗೋಪಾಲಸ್ವಾಮಿ ಬೆಟ್ಟ, ಬಿಳಿಗಿರಿರಂಗನ ಬೆಟ್ಟ, ನಂಜನಗೂಡು ಮತ್ತು ಚಾಮುಂಡಿ ಬೆಟ್ಟ (ಪ್ರಯಾಣ ದರ ವಯಸ್ಕರಿಗೆ: ರೂ. 450/- ಮತ್ತು ಮಕ್ಕಳಿಗೆ: ರೂ.300/-)

ಜಲದರ್ಶಿನಿ: ಗೋಲ್ಡನ್ ಟೆಂಪಲ್ (ಬೈಲಕುಪ್ಪೆ), ದುಬಾರೆ ಅರಣ್ಯ, ನಿಸರ್ಗಧಾಮ, ರಾಜಾಸೀಟ್, ಹಾರಂಗಿ ಜಲಾಶಯ ಮತ್ತು ಕೆ.ಆರ್.ಎಸ್. (ಪ್ರಯಾಣ ದರ ವಯಸ್ಕರಿಗೆ: ರೂ.500/- ಮತ್ತು ಮಕ್ಕಳಿಗೆ: ರೂ.350)

ದೇವದರ್ಶಿನಿ : ನಂಜನಗೂಡು, ಬ್ಲಫ್, ಮುಡುಕುತೊರೆ, ತಲಕಾಡು, ಸೋಮನಾಥಪುರ, ಶ್ರೀರಂಗಪಟ್ಟಣ (ಪ್ರಯಾಣ ದರ ವಯಸ್ಕರಿಗೆ: ರೂ.330/-ಮತ್ತು ಮಕ್ಕಳಿಗೆ: ರೂ.225/-)

### ದಸರಾ ಪ್ರಯುಕ್ತ 610 ವಿಶೇಷ ಬಸ್/ಪ್ಯಾಕೇಜ್

ಬೆಂಗಳೂರಿನ ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರಿಗೆ ಪ್ರತ್ಯೇಕವಾಗಿ 260 ಹೆಚ್ಚುವರಿ ವಾಹನಗಳ ಕಾರ್ಯಾಚರಣೆ ಹಾಗೂ ಮೈಸೂರಿನ ಸುತ್ತಮುತ್ತಲಿನ ಪ್ರೇಕ್ಷಣೀಯ, ಧಾರ್ಮಿಕ ಹಾಗೂ ಪ್ರವಾಸಿ ತಾಣಗಳಾದ ಚಾಮುಂಡಿ ಬೆಟ್ಟ, ಕೆ.ಆರ್.ಎಸ್.ಅಣೆಕಟ್ಟು/ಬೃಂದಾವನ, ಶ್ರೀರಂಗಪಟ್ಟಣ, ನಂಜನಗೂಡು ಸೇರಿದಂತೆ ಮಡಿಕೇರಿ, ಮಂಡ್ಯ, ಮಳವಳ್ಳಿ, ಎಚ್.ಡಿ.ಕೋಟೆ, ಚಾಮರಾಜನಗರ, ಹುಣಸೂರು, ಕೆ.ಆರ್.ನಗರ, ಗುಂಡ್ಲುಪೇಟೆ ಇತ್ಯಾದಿ ಸ್ಥಳಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸಲು 350 ಹೆಚ್ಚುವರಿ ವಾಹನಗಳು ಸೇರಿ ಒಟ್ಟಾರೆ 610 ದಸರಾ ವಿಶೇಷ ವಾಹನಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದೆ. ಇನ್ನು ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಮೈಸೂರಿಗೆ ಫ್ಲೈ ಬಸ್' ಮೂಲಕ ನೇರ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ.

# ದಲಿತರ ಸಮಸ್ಯೆಗೆ ಸ್ಪಂದಿಸದ ತಹಶೀಲ್ದಾರ್ ವಿರುದ್ದ ಆಕ್ರೋಶ

## ತಾಲ್ಲೂಕು ಕಚೇರಿಯ ಮುಂಭಾಗದಲ್ಲಿ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಅಹೋ ರಾತ್ರಿ ಧರಣಿ ಸತ್ಯಾಗ್ರಹ

• **ಉದಯವಾಹಿನಿ, ಕುಣಿಗಲ್,**

ತಹಶೀಲ್ದಾರ್ ರಶ್ಮಿ ಅವರು ದಲಿತರ ಯಾವುದೇ ಸಮಸ್ಯೆಗಳಿಗೆ ಸ್ಪಂದಿಸದೆ ಬೇಜವಾಬ್ದಾರಿ ತೋರುತ್ತಿರುವುದರಿಂದ ಕೂಡಲೇ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ ಪರಿಶಿಷ್ಟ ಜಾತಿ, ದೌರ್ಜನ್ಯ ಕಾಯ್ದೆಯಡಿ ಪ್ರಕರಣ ದಾಖಲು ಮಾಡುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ವಿ. ಶಿವಶಂಕರ್ ಹಾಗೂ ವಿವಿಧ ದಲಿತ ಸಂಘಟನೆ ಮುಖಂಡರು ಆಗ್ರಹಿಸಿದ್ದಾರೆ.

ಇಲ್ಲಿನ ತಾಲ್ಲೂಕು ಕಚೇರಿಯ ಮುಂಭಾಗದಲ್ಲಿ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಅಹೋ ರಾತ್ರಿ ಧರಣಿ ಸತ್ಯಾಗ್ರಹ ನಡೆಸಿದ ದಲಿತ ಮುಖಂಡರುಗಳು ಕೂಡಲೇ ತಹಶೀಲ್ದಾರ್ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಶಿವಶಂಕರ್, ತಹಶೀಲ್ದಾರ್ ಕಳೆದ ಒಂದು ವರ್ಷದಿಂದಲೂ ದಲಿತರ ಹಿತ ರಕ್ಷಣಾ ಸಭೆಗಳನ್ನು ಸಮರ್ಪಕವಾಗಿ ನಡೆಸದೆ ದಲಿತರ ಕುಂದು ಕೊರತೆಗಳ ಬಗ್ಗೆ ಉದಾಸೀನ, ಅಸಡ್ಡೆ, ದಲಿತ


ಉದಯವಾಹಿನಿ ಚಿತ್ರ

ಮುಖಂಡರ ಬಗ್ಗೆ ನಿರ್ಲಕ್ಷ್ಯತೆ ತೋರುತ್ತಿರುವ ತಹಶೀಲ್ದಾರ್ ನಡೆಯನ್ನು ತೀವ್ರವಾಗಿ ಖಂಡಿಸಿ, ಸರ್ಕಾರ ಕೂಡಲೇ ಇವರನ್ನು ಅಮಾನತನಲ್ಲಿಟ್ಟು ದಲಿತರ ದೌರ್ಜನ್ಯ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲು ಮಾಡಬೇಕು ಎಂದು ಒತ್ತಾಯಿಸಿದರು.

ತಾಲ್ಲೂಕಿನಲ್ಲಿ ಹಲವಾರು ಹಳ್ಳಿಗಳಲ್ಲಿ ಅನೇಕ ಸಮಸ್ಯೆಗಳಲ್ಲಿನ ಬೆಣಚಕಲ್ಲು, ತೆರೆದಕುಪ್ಪೆ, ಗುನ್ನಗರೆ, ಕೊಡುವತ್ತಿ, ಮಲ್ಲಾಪುರ, ಇಪ್ಪಾಡಿ, ಗೋವಿಂದಯ್ಯನ ಪಾಳ್ಯ, ವಾಣ್ಗೆರೆ, ನಾಗಲಾಪುರ ಗ್ರಾಮಗಳಲ್ಲಿ ದಲಿತರ ಜಮೀನಿಗೆ ಹೋಗುವ ರಸ್ತೆಗಳು ಬಲಾಢ್ಯರ

**ದಲಿತ ಹಿತ ರಕ್ಷಣಾ ಸಮಿತಿಯಲ್ಲಿ ಸಭೆಯಲ್ಲಿ 150ಕ್ಕೂ ಹೆಚ್ಚು ಸಮಸ್ಯೆಗಳನ್ನು ಕಳೆದ 4 ವರ್ಷಗಳಿಂದಲೂ ಬಗೆಹರಿಸದೆ ದಲಿತ ವಿರೋಧಿ ನೀತಿ ಅನುಸರಿಸುತ್ತಿದ್ದಾರೆ. ಡಿ. ಹೊಸಳ್ಳಿ, ಉಜ್ಜನಿ, ಗೋವಿಂದಯ್ಯನ ಪಾಳ್ಯ ಸ್ಮಶಾನ ಒತ್ತುವರಿ ಮಾಡಿಕೊಂಡು ಅಂತ್ಯ ಸಂಸ್ಕಾರ ಮಾಡಲು ಅಡ್ಡಿ ಪಡಿಸುತ್ತಿರುವ, ಒತ್ತುವರಿ ಮಾಡಿಕೊಂಡಿರುವವರನ್ನು ತೆರವುಗೊಳಿಸಲು ವಿಫಲಗೊಂಡಿದ್ದು, ಹೊಸಕೆರೆ, ಇಪ್ಪಾಡಿ, ಹೊಸಪಾಳ್ಯ, ಉರ್ಕೊಳ್ಳಿ ದಲಿತರಿಗೆ ನಿವೇಶನ ನೀಡಲು ಭೂಮಿ ಸ್ವಾಧೀನ ಮಾಡಿ ಕೊಂಡಿದ್ದು ಈ ಜಾಗವನ್ನು ಸಹ ಬಲಿಷ್ಠರು ಕಾನೂನನ್ನು ಗಾಳಿಗೆ ತೂರಿ ಉಳುಮೆ ಮಾಡಿ ಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದರು.**

ಪಾಲಾಗಿ ಭೂಮಿ ಉಳುಮೆಗೆ ಅಡ್ಡಿಪಡಿಸುತ್ತಿದ್ದಾರೆ. ದಲಿತರ ಜಮೀನುಗಳಿಗೆ ಉಳುಮೆ ಮಾಡಲು ಸವರ್ಣೀಯರು ಅಡ್ಡಿ

**ದಲಿತ ಮುಖಂಡರಾದ ಬಿ.ಡಿ. ಕುಮಾರ್, ದಲಿತ್ ನಾರಾಯಣ್, ರಾಮಕೃಷ್ಣ ಮಾತನಾಡಿ, ತಹಶೀಲ್ದಾರ್ ಅವರು ದಲಿತ ವಿರೋಧಿ ನೀತಿ ಅನುಸರಿಸುತ್ತಿದ್ದು, ನಮ್ಮ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುತ್ತಿಲ್ಲ. ಇಂತಹ ತಹಶೀಲ್ದಾರ್ ನಮ್ಮ ತಾಲ್ಲೂಕಿಗೆ ಅಗತ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.**

ಪಡಿಸುತ್ತಿದ್ದು, ಈ ಬಗ್ಗೆ ಕ್ರಮ ತೆಗೆದುಕೊಳ್ಳದ ದಲಿತ ವಿರೋಧಿ ನೀತಿ ಅನುಸರಿಸುತ್ತಿರುವ ಬಗ್ಗೆ ತೀವ್ರವಾಗಿ ಖಂಡಿಸಿದರು.

ಈಗಾಗಲೇ ಉಪವಿಭಾಗಾಧಿಕಾರಿಗೆ ಮನವಿ ಸಲ್ಲಿಸಲಾಗಿದೆ. ದಲಿತರಿಗೆ ನೀಡಬೇಕಾದ ರಕ್ಷಣೆ ನೀಡಲು ವಿಫಲಗೊಂಡು ಸವರ್ಣೀಯರ ಪರವಾಗಿ ನಿಂತಿದ್ದಾರೆ ಎಂದು ದೂರಿದರು.

ಪ್ರತಿಭಟನೆಯಲ್ಲಿ ರಂಗಸ್ವಾಮಿ ರಾಮಲಿಂಗಯ್ಯ, ದೇವರಾಜ್, ಶೆಟ್ಟಿಗೆಹಳ್ಳಿ ಸಿದ್ದರಾಜ್, ವನಜ, ಅನುಸೂಯ, ಮಾಯಮ್ಮ, ದೊಡ್ಡ ಚನ್ನಯ್ಯ, ರಂಗಸ್ವಾಮಿ, ಸಿದ್ದಗಂಗಯ್ಯ, ಅಂಜನ್ ಮೂರ್ತಿ ಮತ್ತಿತರರು ಪಾಲ್ಗೊಂಡಿದ್ದರು.

# ನಗರಗಳನ್ನು ಕಸ ಮುಕ್ತವಾಗಿಸಲು ಶ್ರಮಿಸಿ: ಪಿ.ಎನ್ ರವೀಂದ್ರ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಸಾರ್ವಜನಿಕರು ಗೃಹ ಆಧಾರಿತ ತ್ಯಾಜ್ಯವನ್ನು ಹಸಿ ಒಣ ಕಸವಾಗಿ ಮೂಲದಲ್ಲೇ ವಿಂಗಡಿಸಿ ಕಸ ಸಂಗ್ರಹಣೆ ವಾಹನಗಳಿಗೆ ನೀಡಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಮನವಿ ಮಾಡಿದರು. ಇಲ್ಲಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ನಗರಾಭಿವೃದ್ಧಿ ಕೋಶ, ಪೌರಾಡಳಿತ ನಿರ್ದೇಶನಾಲಯ ಸಹಯೋಗದಲ್ಲಿ ನಡೆದ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಕಮ್ಯುನಿಟಿ ಮೊಬಿಲೈಸರ್‌ಗಳಿಗೆ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

ಏಕ ಬಳಕೆ ಪ್ಲಾಸ್ಟಿಕ್ ಮತ್ತು ಪ್ಲಾಸ್ಟಿಕ್ ತ್ಯಾಜ್ಯದ ನಿರ್ವಹಣೆಯನ್ನು ಸೂಕ್ತವಾಗಿ ವಿಲೇವಾರಿ ಮಾಡಬೇಕು. ಕಟ್ಟಡ ನಿರ್ಮಾಣ ಮತ್ತು ಹಳೆ ಕಟ್ಟಡ ಕೆಡವಿದ್ದರಿಂದ ಉಂಟಾಗುವ ತ್ಯಾಜ್ಯವನ್ನು ಮಾರ್ಗಸೂಚಿ ಅನ್ವಯವೇ ವಿಲೇವಾರಿ ಮಾಡಬೇಕು. ಆ ನಿಟ್ಟಿನಲ್ಲಿ ಸಾರ್ವಜನಿಕರನ್ನು ಸಹ ಜಾಗೃತಗೊಳಿಸಬೇಕು.

ಒಟ್ಟಾರೆ ಜಿಲ್ಲೆಯ ನಗರಗಳನ್ನು ಕಸಮುಕ್ತ


ಉದಯವಾಹಿನಿ ಚಿತ್ರ

ಗೊಳಿಸುವುದು. ಸಮಗ್ರ ತ್ಯಾಜ್ಯ,ಕಸವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು. ತ್ಯಾಜ್ಯ ಪುನರ್ಬಳಕೆ, ಮರುಬಳಕೆ ತತ್ವಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.ಕಮ್ಯುನಿಟಿ ಮೊಬಿಲೈಸರ್‌ಗಳು ತಮ್ಮ ವ್ಯಾಪ್ತಿಯ 3 ವಾರ್ಡ್‌ಗಳನ್ನು ವಿಂಗಡಣೆ ಮಾಡಿಕೊಂಡು ಪ್ರತಿ ದಿನಕ್ಕೆ 10ರಿಂದ 15 ಮನೆಗಳಿಗೆ ಭೇಟಿ ನೀಡಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸಬೇಕು.

ಪ್ರತಿ ವಾರ್ಡ್‌ಗಳಲ್ಲೂ ಸಮುದಾಯ ಸಭೆ ಏರ್ಪಡಿಸಿ ತ್ಯಾಜ್ಯ ವಿಲೇವಾರಿ ಸ್ವಚ್ಛತಾ ಅಭಿಯಾನದ ಬಗ್ಗೆ ಅರಿವು ಮೂಡಿಸಬೇಕು ಎಂದು ಸೂಚಿಸಿದರು. ಕಸವನ್ನು ಕಡಿಮೆ

**ನಮ್ಮ ಆರೋಗ್ಯ ಕಾಪಾಡಿಕೊಳ್ಳುವುದು ನಮ್ಮ ಕೈಯಲ್ಲಿಯೇ ಇದೆ. ಹಸಿ ಕಸ, ಒಣ ಕಸವನ್ನು ಬೇರ್ಪಡಿಸುವಂತೆ ಪ್ರತಿಯೊಬ್ಬ ಸಾರ್ವಜನಿಕರಿಗೂ ಮನವರಿಕೆ ಮಾಡುವುದು ಅತಿಮುಖ್ಯ. ನಗರ ವ್ಯಾಪ್ತಿಯ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಹಾಗೂ ಮಳಿಗೆಗಳ ಮತ್ತು ಬೀದಿಬದಿ ವ್ಯಾಪಾರಿಗಳಿಗೂ ತಿಳಿ ಹೇಳುವ ಮೂಲಕ ಅರಿವು ಮಾಡಿಸಬೇಕು ಎಂದು ತಿಳಿಸಿದರು.**

ಮಾಡುವ ಹಾಗೂ ಪುನರ್ಬಳಕೆ ಮಾಡುವ ಮತ್ತು ಮರುಬಳಕೆ ಮಾಡುವ ತತ್ವಗಳನ್ನು ಅನುಷ್ಠಾನಗೊಳಿಸಲು ಮತ್ತು ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಲು ಆಧುನಿಕ ತಂತ್ರಜ್ಞಾನವನ್ನು ಬೆಂಬಲಿಸಬೇಕು.

ಕಸವನ್ನು ಎಲ್ಲೆಂದರೆ ಅಲ್ಲಿ ಎಸೆಯದೆ ಸರಿಯಾಗಿ ವಿಲೇವಾರಿ ಮಾಡಬೇಕು. ಈ ವಿಚಾರವಾಗಿ ಜನರ ವರ್ತನೆಯನ್ನು ಬದಲಾಯಿಸಬೇಕು ಎಂದರು.

# ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

• **ಉದಯವಾಹಿನಿ, ತುಮಕೂರು**

ಜಿಲ್ಲಾ ಆಡಳಿತದಿಂದ ದಸರಾ ಪ್ರಯುಕ್ತ ನಗರದ ವಿವಿಧೆಡೆ ಅಳವಡಿಸಿರುವ ಫ್ಲೆಕ್ಸ್‌ಗಳಲ್ಲಿ ಶಾಸಕ ಕೆ.ಎನ್.ರಾಜಣ್ಣ, ವಿಧಾನ ಪರಿಷತ್ ಸದಸ್ಯ ಆರ್.ರಾಜೇಂದ್ರ ಭಾವಚಿತ್ರ ಹಾಕದಿರುವುದಕ್ಕೆ ವಾಲ್ಮೀಕಿ ಸಮುದಾಯದ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ ನಡೆಯಿತು.

ಮುಖಂಡ ಕುಪ್ಪರು ಶ್ರೀಧರ್ ಮಾತನಾಡಿ ಶಾಸಕರ ಭಾವಚಿತ್ರ ಕೈಬಿಟ್ಟಿರುವುದನ್ನು ಖಂಡಿಸಿದರು. ವಾಲ್ಮೀಕಿ ಅಧ್ಯಯನ ಪೀಠಕ್ಕೆ 10 ಎಕರೆ ಜಾಗ ಗುರುತಿಸಿ, ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಕೇಂದ್ರ ತೆರೆಯುವಂತೆ 2023ರಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದ್ದರು. ಈ ನಿಟ್ಟಿನಲ್ಲಿ ಏನು ಬೆಳವಣಿಗೆಯಾಗಿದೆ ಎಂಬ ಮಾಹಿತಿಯೇ ಇಲ್ಲ.


ಉದಯವಾಹಿನಿ ಚಿತ್ರ

ಜಯಂತಿಯ ಒಳಗೆ ಈ ಕುರಿತು ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು. ಪ್ರಸ್ತುತ ಜಯಂತಿ ಪ್ರಯುಕ್ತ ಕೇವಲ ಇಬ್ಬರಿಗೆ ಪ್ರೋತ್ಸಾಹ ಧನ ನೀಡುತ್ತಿದ್ದು, ಅದನ್ನು 10ಕ್ಕೆ ಹೆಚ್ಚಿಸಬೇಕು. ಕನಿಷ್ಠ ತಾಲ್ಲೂಕಿಗೆ ಒಬ್ಬರಂತೆ 10 ಸಾಧಕರನ್ನು ಗುರುತಿಸಿ ಸನ್ಮಾನಿಸಬೇಕು. ಜಯಂತಿ ದಿನ ಟೌನ್ ಹಾಲ್ ವೃತ್ತದ ಅಂಬೇಡ್ಕರ್ ಪ್ರತಿಮೆಯಿಂದ ಬಾಲ ಭವನದ ವರೆಗೆ ಮೆರವಣಿಗೆ ನಡೆಸಬೇಕು' ಎಂದು ಮುಖಂಡರು ಒತ್ತಾಯಿಸಿದರು.

# ಕಳೆದ ವರ್ಷ ಪಟ್ಟಣದ ಬಿಡಿಸಿಸಿ ಬ್ಯಾಂಕ್ ನಕಲಿ ಚಿನ್ನ ಸಾಲ ಹಗರಣ: ದೂರು

• **ಉದಯವಾಹಿನಿ, ಕುದೂರು**

ಕಳೆದ ವರ್ಷ ಪಟ್ಟಣದ ಬಿಡಿಸಿಸಿ ಬ್ಯಾಂಕ್‌ನಲ್ಲಿ ನಕಲಿ ಚಿನ್ನ ಅಡವಿಟ್ಟು ಕೋಟ್ಯಂತರ ರೂಪಾಯಿ ಸಾಲ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಬಿಡಿಸಿಸಿ ಬ್ಯಾಂಕ್‌ನ ಕೇಂದ್ರ ಕಚೇರಿ ಆಂತರಿಕ ವಿಭಾಗದ ಅಧಿಕಾರಿ ಮಲ್ಲಿಕಾರ್ಜುನ್ ಅವರು ಕುದೂರು ಠಾಣೆಗೆ ದೂರು ನೀಡಿದ್ದಾರೆ.

ಕುದೂರು ಶಾಖೆ ಬಿಡಿಸಿ ಬ್ಯಾಂಕ್ ವ್ಯವಸ್ಥಾಪಕ ಹರ್ಷ, ಬ್ಯಾಂಕ್‌ನ ಚಿನ್ನ ಪರೀಕ್ಷಕ ನಾಗೇಂದ್ರ ಮತ್ತು ಅವರ ಪತ್ನಿ ನಿರ್ಮಲಾ ವಿರುದ್ಧ ದೂರು ನೀಡಲಾಗಿದೆ. ನಾಗೇಂದ್ರ ಮತ್ತು ಅವರ ಪತ್ನಿ ನಿರ್ಮಲ, ಬ್ಯಾಂಕ್‌ನ ನಿಯಮಗಳನ್ನು ಪಾಲಿಸದ ಅಕ್ಟೋಬರ್ 11, 2023ರಿಂದ ಜನವರಿ 15, 2025ರವರೆಗೆ ತೆರೆದಿದ್ದ 937 ಖಾತೆಗಳಲ್ಲಿ 238 ಖಾತೆಗಳಿಗೆ ನಕಲಿ ಚಿನ್ನ ಅಡಮಾನವಾಗಿಟ್ಟುಕೊಂಡು ರೂ 4.77 ಕೋಟಿ ಸಾಲ ನೀಡಿ ಮೋಸ ಮಾಡಿದ್ದಾರೆ. ಈ ಸಾಲವನ್ನು ಬ್ಯಾಂಕ್‌ನ ಉನ್ನತ ಅಧಿಕಾರಿಗಳ ಗಮನಕ್ಕೆ ತರದೆ, ಸಂಸ್ಥೆಗೆ ಮೋಸ ಮಾಡಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

**ಹಗರಣ ಬೆಳಕಿಗೆ ಬಂದ ವಿಧಾನ:** ಬಿಡಿಸಿಸಿ ಬ್ಯಾಂಕ್ ಕುದೂರು ಶಾಖೆಯಲ್ಲಿ ಮೊದಲು ವ್ಯವಸ್ಥಾಪಕರಾಗಿದ್ದವರು ವರ್ಗಾವಣೆಯಾಗಿದ್ದರು. ಅವರು ಹೋಗುವ ಮುನ್ನ, ಶಾಖೆಯ ಹಿರಿಯ ಸಹಾಯಕಿ ರೂಪಾ ಬಿ.ಆರ್.ಅವರಿಗೆ ಪ್ರಭಾರ ಹೊಣೆ ವಹಿಸಿ ಕರ್ತವ್ಯದಿಂದ ಬಿಡುಗಡೆ ಪಡೆದಿದ್ದರು.


ಉದಯವಾಹಿನಿ ಚಿತ್ರ

ಆ ಸ್ಥಾನಕ್ಕೆ ಎನ್.ಶಿವಣ್ಣ ಅವರು 2024 ನವೆಂಬರ್ 4ರಂದು ಸಹಾಯಕ ಪ್ರಧಾನ ವ್ಯವಸ್ಥಾಪಕರಾಗಿ ವರದಿ ಮಾಡಿಕೊಂಡಿದ್ದರು.

ಬ್ಯಾಂಕ್ ವಹಿವಾಟು ಪರಿಶೀಲಿಸಿದ ಅವರು, ಚಿನ್ನದ ಅಡಮಾನ ಸಾಲದ ವಹಿವಾಟಿನಲ್ಲಿ ಅಕ್ರಮ ನಡೆದಿರುವ ಬಗ್ಗೆ ಅನುಮಾನಿಸಿದ್ದರು. 2025ರ ಜನವರಿ ಅಂತ್ಯದಲ್ಲಿ ಶಾಖೆಯಲ್ಲಿ ರೂ.1.09 ಕೋಟಿ ಮೊತ್ತ ವಸೂಲಿ ಆಗದೆ ಇರುವುದನ್ನು ಗಮನಿಸಿದ್ದರು. ಈ ಬಗ್ಗೆ ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಫೆಬ್ರವರಿ 1ರಂದು ಶಿವಣ್ಣ ಪತ್ರ ಬರೆದು, ಚಿನ್ನದ ಸಾಲ ಮತ್ತು ಬಾಕಿಯನ್ನು ಪರಿಶೀಲಿಸುವಂತೆ ಕೋರಿದ್ದರು. ಇದರ ಮೂಲಕ ಬ್ಯಾಂಕ್‌ನಲ್ಲಿ ಚಿನ್ನದ ಸಾಲದ ಹೆಸರಿನಲ್ಲಿ ಅಕ್ರಮ ನಡೆದಿರುವ ಆರೋಪಕ್ಕೆ ಪುಷ್ಟಿ ಸಿಕ್ಕಿತು.

ಕೋಟ್ಯಂತರ ರೂಪಾಯಿ ಈ ಹಗರಣದ ಬಗ್ಗೆ ಮಾಜಿ ಶಾಸಕ ಎ.ಮಂಜುನಾಥ್ ಅವರು ಈ ಹಿಂದೆ ತನಿಖೆ ನಡೆಸಬೇಕೆಂದು ಆಗ್ರಹಿಸಿದ್ದರು.

ಅಕ್ರಮದ ಆರೋಪದ ಹಿನ್ನೆಲೆಯಲ್ಲಿ ಬ್ಯಾಂಕ್ ಅಧ್ಯಕ್ಷ ಎಂ.ಡಿ.ವಿಜಯದೇವ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪುಂಡಲಿಕ ಎಲ್. ಸಾಧುರ ಸೇರಿದಂತೆ ಉನ್ನತ ಅಧಿಕಾರಿಗಳ ತಂಡ ಕುದೂರು ಶಾಖೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿತ್ತು.

# ಹೊರ ರಾಜ್ಯದ ಎಂಟು ಮಂದಿ ಬಂಧನ

• **ಉದಯವಾಹಿನಿ, ಕೋಲಾರ**

ನಗರ ಹೊರವಲಯದ ಟಮಕ ಕೈಗಾರಿಕಾ ಪ್ರದೇಶದ ಬಾಲಾಜಿ ರೈಸ್ ಮಿಲ್ ಮುಂಭಾಗ ಕಾರಿನಲ್ಲಿ ಗಾಂಜಾ ಸಾಗಿಸುತ್ತಿದ್ದ ಹೊರರಾಜ್ಯದ ಎಂಟು ಮಂದಿಯನ್ನು ವಿಶೇಷ ಪೊಲೀಸ್ ತಂಡ ಬಂಧಿಸಿದೆ. ಆರೋಪಿಗಳಿಂದ 7 20 ಲಕ್ಷ ಬೆಲೆಯ 20 ಕೆ.ಜಿ 580 ಗ್ರಾಂ ಗಾಂಜಾ ಹಾಗೂ 10 ಲಕ್ಷ ಮೌಲ್ಯದ ಕಾರು ವಶಪಡಿಸಿಕೊಳ್ಳಲಾಗಿದೆ.

ಹರಿಯಾಣದ ಮೊಹಮ್ಮದ್ ಆಜಾದ್ (45), ವಾರಿಸ್ (30), ರಾಜು (32), ಮುಬಾರಕ್ (32), ಹಸೀಬ್ (20), ಜಾವೀದ್ (26), ರಾಹಿಲ್ (28) ಮತ್ತು ರಾಜಸ್ಥಾನದ ಮೊಹಮ್ಮದ್ ಅಪ್ಸರ್ (30) ಬಂಧಿತ ಆರೋಪಿಗಳು. ಅಕ್ರಮ ಗಾಂಜಾ ಸಾಗಾಟ, ಮಾರಾಟ ತಡೆಯುವ ಸಲುವಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ., ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್, ಜಗದೀಶ್ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಎಂ.ಎಚ್. ನಾಗೆ ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿತ್ತು.

ಗಾಂಜಾ ಸಾಗಾಟದ ಮಾಹಿತಿಯ ಮೇರೆಗೆ ದಾಳಿ ನಡೆಸಲಾಯಿತು. ಈ ವೇಳೆ ಪ್ರಮುಖ ಆರೋಪಿ ಕೋಲಾರ ನಗರದ ನ್ಯಾಮತ್ ಬೀ ದರ್ಗಾ ನಿವಾಸಿ ನಿಜಾಮುದ್ದೀನ್ ಅಲಿಯಾಸ್ ಜೋರ್ ನಿಜಾಮ್, ಮುಬಾರಕ್


ಉದಯವಾಹಿನಿ ಚಿತ್ರ

ತಲೆಮರೆಸಿಕೊಂಡರು. ಕಾರಿನಲ್ಲಿ ಇದ್ದ ಹರಿಯಾಣ ಮತ್ತು ರಾಜಸ್ಥಾನದ ಎಂಟು ಮಂದಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ಗಾಂಜಾ ಸಾಗಾಟ ಮತ್ತು ಮಾರಾಟ. ನಂಬರ್ ಪ್ಲೇಟ್ ಬದಲಾಯಿಸಿ ಹಸು ಕಳ್ಳತನ ಮಾಡುತ್ತಿದ್ದರು ಎಂದಿದ್ದಾರೆ. ಕಾರ್ಯಾಚರಣೆಯಲ್ಲಿ ಗಲ್‌ಪೇಟೆ ಪೊಲೀಸ್ ಠಾಣೆ ಸರ್ಕಲ್ ಇನ್ಸ್‌ಪೆಕ್ಟರ್ ಲೋಕೇಶ್ ಎಂ.ಜೆ. ಪಿಎಸ್‌ಐ ವಿಠಲ್ ವೈ ತಳವಾರ್, ಸಿಬ್ಬಂದಿ ಮುನಿವೆಂಕಟಸ್ವಾಮಿ, ಷಫೀವುಲ್ಲಾ, ಸುಜ್ಞಾನ್ ಕುಮಾರ್ ಮಂಜುನಾಥ ಇವಿ, ಶಿವಕುಮಾರ್, ವಿಠಲ್ ಬಿ ಕುಂಬಾರ್ ನಾಗರಾಜ ಇದ್ದರು. ಸಿಬ್ಬಂದಿಯನ್ನು ಎಸ್‌ಪಿ ನಿಖಿಲ್ ಶ್ಲಾಘಿಸಿದ್ದಾರೆ.

# ಬ್ಯಾನರ್ ಹಿಡಿದು ಸಾಗಿದ ಡಿ.ಸಿ, ಸಿಇಒ!

• **ಉದಯವಾಹಿನಿ, ಕೋಲಾರ**

ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಸೆ.22 ರಿಂದ ಅ.7 ರವರೆಗೆ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆಯಲಿದ್ದು, ಈ ಪ್ರಯುಕ್ತ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸಲು ವಾಕಥಾನ್ ಹಮ್ಮಿಕೊಳ್ಳಲಾಗಿತ್ತು.

ವಾಕಥಾನ್‌ಗೆ ಶಾಸಕ ಕೊತ್ತೂರು ಜಿ.ಮಂಜುನಾಥ್ ಹಾಗೂ ಜಿಲ್ಲಾಧಿಕಾರಿ ಎಂ.ಆರ್.ರವಿ ಚಾಲನೆ ನೀಡಿದರು. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಸಿಇಒ ಡಾ.ಪ್ರವೀಣ್ ಪಿ.ಬಾಗೇವಾಡಿ ಬ್ಯಾನರ್ ಹಿಡಿದು ಸಾಗಿದ್ದು ಗಮನ ಸೆಳೆಯಿತು. ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರಿಗೆ ಖುದ್ದಾಗಿ ಕರಪತ್ರ ಹಂಚುವ ಮೂಲಕ ಅರಿವು ಮೂಡಿಸಿದರು.

ಅಧಿಕಾರಿಗಳು, ವಿವಿಧ ಇಲಾಖೆಯ ನೌಕರರು, ಸಿಬ್ಬಂದಿ, ಕಾರ್ಯಕರ್ತರು, ವಿದ್ಯಾರ್ಥಿಗಳು ವಿವಿಧ ರಸ್ತೆಗಳಲ್ಲಿ ಬಿತ್ತಿಪತ್ರ ಹಿಡಿದು ಸಾಗಿದರು. ಕೆಲವೆಡೆ ಮಾನವ ಸರಪಳಿ ರಚಿಸಿದರು. ಸಮೀಕ್ಷೆಯಲ್ಲಿ ಎಲ್ಲರೂ ತಪ್ಪದೆ ಪಾಲ್ಗೊಂಡು ಸರಿಯಾದ ಮಾಹಿತಿ ನೀಡಬೇಕು ಎಂದು ಕೋರಿದರು.

ಎಸ್‌ಎನ್‌ಆರ್ ಜಿಲ್ಲಾಸ್ಪತ್ರೆ ವೃತ್ತದಿಂದ ಡೂಂಲೈಟ್ ಸರ್ಕಲ್, ಕ್ಲಾಕ್ ಟವರ್, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಮೂಲಕ ಮೆಕ್ಕೆ ವೃತ್ತದವರೆಗೆ ವಾಕಥಾನ್ ನಡೆಯಿತು.


ಉದಯವಾಹಿನಿ ಚಿತ್ರ

ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ವಾಕಥಾನ್ ಹಮ್ಮಿಕೊಂಡಿದ್ದು ಸಮೀಕ್ಷೆಯಲ್ಲಿ ಪ್ರತಿಯೊಂದು ಕುಟುಂಬವೂ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಸಮೀಕ್ಷೆ ವೇಳೆ ಆಧಾರ್ ಕಾರ್ಡ್ ಮುಖ್ಯವಾಗಿದ್ದು, ನೋಂದಾಯಿಸಿರುವ ಫೋನ್ ನಂಬರ್‌ಗೆ ಒಟಿಪಿ ಬರಲಿದೆ. ನಂತರ ಮಾಹಿತಿಯನ್ನು ಕಲೆಹಾಕಲಿದ್ದಾರೆ. ಈ ಸಮೀಕ್ಷೆಯು ಸರ್ವರ್ ಮೂಲಕ ನಡೆಯುವ ಸಮೀಕ್ಷೆಯಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ., ಹೆಚ್ಚುವರಿ ಜಿಲ್ಲಾಧಿಕಾರಿ ಎಸ್.ಎಂ.ಮಂಗಳಾ, ಉಪವಿಭಾಗಾಧಿಕಾರಿ ಡಾ.ಮೈತ್ರಿ, ತಹಶೀಲ್ದಾರ್ ಡಾ.ನಯನಾ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಗೀತಮ್ಮ, ಜಿಲ್ಲಾ ಸಾಂಖ್ಯಿಕ ಅಧಿಕಾರಿ ರಮೇಶ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಎಂ.ಶ್ರೀನಿವಾಸನ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ವೈ. ಶಿವಕುಮಾರ್, ನಗರಸಭೆ ಅಧ್ಯಕ್ಷೆ ಲಕ್ಷ್ಮಿದೇವಮ್ಮ, ತಾಲ್ಲೂಕು ಇಒ ಮಂಜುನಾಥ್, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಆರ್.ಗೀತಾ, ವೆಂಕಟಚಲಪತಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗಿಯಾಗಿದ್ದರು.

**ಎಂ.ಆರ್.ರವಿ ಮಾತನಾಡಿ. 'ಜಿಲ್ಲೆಯಲ್ಲಿ 4.17 ಲಕ್ಷ ಮನೆಗಳಿದ್ದು, ಸಮೀಕ್ಷೆಗೆ ಈಗಾಗಲೇ ಸಿದ್ಧತೆ ಮಾಡಿಕೊಳ್ಳಲಾಗಿದೆ. ಬೆಸ್ಕಾಂ ಸಿಬ್ಬಂದಿ ಪ್ರತಿ ಮನೆಗಳಿಗೆ ಸ್ಟಿಕ್ಕರ್ ಅಂಟಿಸಿ ಜಿಯೋ ಟ್ಯಾಗಿಂಗ್ ಮಾಡಿದ್ದಾರೆ. ಆರೋಗ್ಯ ಇಲಾಖೆಯ ಆಶಾ ಕಾರ್ಯಕರ್ತೆಯರು, ನಗರಸಭೆಯ ಅಧಿಕಾರಿಗಳು ಪ್ರತಿ ಮನೆಗಳಿಗೆ ಭೇಟಿ ನೀಡಿ ಸಮೀಕ್ಷೆಗೆ ಸಂಬಂಧಪಟ್ಟ ದಾಖಲೆಗಳು ಹಾಗೂ ಪ್ರಶ್ನೆಯ ನಮೂನೆಗಳ ಬಗ್ಗೆ ಮಾಹಿತಿ ನೀಡುತ್ತಿದ್ದಾರೆ' ಎಂದರು.**

# ಬಿಜೆಪಿ ಇದೀಗ ಒಡೆದ ಮನೆ, ಲೋಕ ಗೆದ್ರೂ ಲೋಕಲ್‌ನಲ್ಲಿ ಕಿತ್ತಾಟ

## ಕೇಂದ್ರ ಸಚಿವ ವಿ.ಸೋಮಣ್ಣ ಮತ್ತು ಜಿಲ್ಲಾ ಬಿಜೆಪಿಯೇ ಬೇರೆ ಬೇರೆ ಅನ್ನೋದು ಜಗಜ್ಜಾಹೀರ

• **ಉದಯವಾಹಿನಿ, ತುಮಕೂರು**

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ತುಮಕೂರಲ್ಲಿ ಅತಿ ಹೆಚ್ಚು ಕಾಂಗ್ರೆಸ್ ಶಾಸಕರನ್ನು ಹೊಂದಿದ್ದರೂ ಲೋಕಸಭಾ ಚುನಾವಣೆಯಲ್ಲಿ ಟಕ್ಕರ್ ಕೊಟ್ಟಿದ್ದ ಜಿಲ್ಲಾ ಬಿಜೆಪಿ ಇದೀಗ ಮತ್ತೆ ಒಡೆದ ಮನೆ! ಲೋಕ ಗೆದ್ರೂ ಲೋಕಲ್‌ನಲ್ಲಿ ಕಿತ್ತಾಟ ಜೋರಾಗಿದೆ. ಅದರಲ್ಲೂ ಕೇಂದ್ರ ಸಚಿವ ವಿ.ಸೋಮಣ್ಣ ಮತ್ತು ಜಿಲ್ಲಾ ಬಿಜೆಪಿಯೇ ಬೇರೆ ಬೇರೆ ಅನ್ನೋದು ಜಗಜ್ಜಾಹೀರವಾಗಿದೆ. ಕೇಂದ್ರ ಸಚಿವ ವಿ.ಸೋಮಣ್ಣ ಮತ್ತು ಜಿಲ್ಲಾ ಬಿಜೆಪಿ ನಡುವೆ ಮುಸುಕಿನ ಗುದ್ದಾಟಯಿದೆ.

ಇತ್ತೀಚೆಗೆ ನಡೆದ ಪ್ರಧಾನಿ ನರೇಂದ್ರ ಮೋದಿ ಹುಟ್ಟುಹಬ್ಬ ಆಪರೇಷನ್ ಸಿಂಧೂರ ವಿಜಯೋತ್ಸವವೇ ತಾಜಾ ಸಾಕ್ಷಿ ಪ್ರಧಾನಿ ನರೇಂದ್ರ ಮೋದಿ ಜನ್ಮದಿನದ ಕಾರ್ಯಕ್ರಮವನ್ನು ವಿ.ಸೋಮಣ್ಣ ಪ್ರತ್ಯೇಕವಾಗಿ ಆಚರಿಸಿದ್ದರು. ಜಿಲ್ಲಾ ಬಿಜೆಪಿಯೇ ಪ್ರತ್ಯೇಕವಾಗಿ ಆಚರಿಸಿತ್ತು. ಜಿಲ್ಲಾ ಬಿಜೆಪಿಯಿಂದ ಅಂತರ ಕಾಯ್ದುಕೊಂಡಿರುವ ಮಾಜಿ ಸಚಿವ ಸೊಗಡು ಶಿವಣ್ಣ ನೇತೃತ್ವದಲ್ಲಿ ನಡೆದ ಆಪರೇಷನ್ ಸಿಂಧೂರ ವಿಜಯೋತ್ಸವದಲ್ಲಿ ವಿ.ಸೋಮಣ್ಣ ಭಾಗಿಯಾಗಿದ್ದರು. ಜಿಲ್ಲಾಧ್ಯಕ್ಷ ಹೆಬ್ಬಾಕ ರವಿಶಂಕರ್, ನಗರ ಶಾಸಕ ಜಿ.ಬಿ.ಜ್ಯೋತಿಗಣೇಶ್ ಇರಲಿಲ್ಲ.

**ಕಾಂಗ್ರೆಸ್ ನಾಯಕರ ಹೊಗಳಿಕೆ :** ವಿ.ಸೋಮಣ್ಣ



ಪದೇ ಪದೆ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಶಾಸಕ ಕೆ.ಎನ್. ರಾಜಣ್ಣ ಅವರನ್ನು ಹೊಗಳುವುದು ಕೂಡ ಬಿಜೆಪಿ ನಾಯಕರು, ಕಾರ್ಯಕರ್ತರಿಗೆ ಬೇಸರ ತರಿಸಿದೆ.

**ಎಕ್ಸ್‌ಪ್ರೆಸ್ ಕೆನಾಲ್ ವಿಚಾರದಲ್ಲಿ ಅಪಸ್ವರ:** ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ವಿರುದ್ಧದ ಹೋರಾಟಕ್ಕೆ ವಿ.ಸೋಮಣ್ಣ ಮುಂದೆ ಬರಬೇಕೆಂಬ ಆಗ್ರಹವಿದೆ. ಬಿಜೆಪಿ, ಜೆಡಿಎಸ್ ನಾಯಕರಲ್ಲೂಈ ಬಗ್ಗೆ ಅಪಸ್ವರವಿದೆ. ಸೋಮಣ್ಣ ಸಂಸದರಾಗಿ

### ದೋಸ್ತಿಗೂ ಅಸಮಾಧಾನ

**ವಿ.ಸೋಮಣ್ಣ ಮೇಲೆ ದೋಸ್ತಿ ಜೆಡಿಎಸ್ ನಾಯಕರೂ ಅಸಮಾಧಾನಗೊಂಡಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಚಿಕ್ಕನಾಯಕನಹಳ್ಳಿಯಲ್ಲಿ ಜೆ.ಸಿ.ಮಾಧುಸ್ವಾಮಿ ಪ್ರಚಾರಕ್ಕೆ ಬರದೇ ಇದ್ದಾಗ ಜತೆಗಿದ್ದು ಶಕ್ತಿ ತುಂಬಿದ್ದ ಜೆಡಿಎಸ್ ಶಾಸಕ ಸಿ.ಬಿ.ಸುರೇಶ್ ಬಾಬುಗೆ ಪ್ರಚಾರದ ವೇಳೆ ಮುತ್ತಿಕ್ಕಿ ಕೃತಜ್ಞತೆ ಸಲ್ಲಿಸಿದ್ದರು ಸೋಮಣ್ಣ. ಆದರೆ ಆ ಸ್ನೇಹ ಈಗಿಲ್ಲ. ಚಿಕ್ಕನಾಯಕನಹಳ್ಳಿಯಲ್ಲಿಇತ್ತೀಚೆಗೆ ನಡೆದ ಸಮಾರಂಭದಲ್ಲಿ ಸುರೇಶ್ ಬಾಬು ಗೈರಾಗಿದ್ದರು, ಸೋಮಣ್ಣ ಬೇಸರವನ್ನೂ ವ್ಯಕ್ತಪಡಿಸಿದ್ದರು. ಅಂತೆಯೇ ತುರುವೇಕೆರೆ ಜೆಡಿಎಸ್ ಶಾಸಕ ಎಂ.ಟಿ.ಕೃಷ್ಣಪ್ಪ, ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ಹೋರಾಟಕ್ಕೆ ವಿ.ಸೋಮಣ್ಣ ಬರಬೇಕೆಂದು ಬಹಿರಂಗವಾಗಿ ಹೇಳಿದ್ದಾರೆ.**

### ಚುನಾವಣೆಗೆ ಮೊದಲೇ ಬೇಸರ

**ವಿ.ಸೋಮಣ್ಣ ತುಮಕೂರು ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುವುದಕ್ಕೆ ಬಿಜೆಪಿ ನಾಯಕರ ವಿರೋಧ ಇತ್ತು. ತೀವ್ರ ವಿರೋಧದ ನಡುವೆಯೂ ಟಿಕೆಟ್ ಪಡೆದಿದ್ದರು. ಆ ನಂತರ ದೋಸ್ತಿ ನಾಯಕರ ಪಕ್ಷನಿಷ್ಠಾ ಬೆಂಬಲದಲ್ಲಿದಾಖಲೆ ಗೆಲುವು ಪಡೆದಿದ್ದು, ಇತಿಹಾಸ. ಚುನಾವಣೆ ವೇಳೆ ನೇರವಾಗಿ ವಿರೋಧಿಸಿದ್ದ ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ಇವತ್ತಿಗೂ ಅಂತರ ಕಾಯ್ದುಕೊಂಡಿದ್ದಾರೆ.**

ಹೋರಾಟಕ್ಕೆ ಬರಲೆಂದು ಜೆಡಿಎಸ್ ಶಾಸಕ ಎಂ.ಟಿ.ಕೃಷ್ಣಪ್ಪ ಇತ್ತೀಚೆಗೆ ಬಹಿರಂಗವಾಗಿಯೇ ಹೇಳಿದ್ದಾರೆ.

**ಕಾರ್ಯಕರ್ತರ ಕಡೆಗಣನೆ:** ಕೇಂದ್ರ ಸರಕಾರದ ರೈಲ್ವೆ ಸಲಹಾ ಸಮಿತಿಗೆ ರೈಲ್ವೆ ಸಹಾಯಕ ಸಚಿವ ವಿ.ಸೋಮಣ್ಣ ಬಿಜೆಪಿ ಕಾರ್ಯಕರ್ತರನ್ನು ಕಡೆಗಣಿಸಿ, ಸರ್ವಪಕ್ಷಗಳ ಕಾರ್ಯಚಟುವಟಿಕೆಯಲ್ಲಿ ಸಕ್ರಿಯರಾಗಿರುವ ಮೂವರಿಗೆ ಮಣೆ ಹಾಕಿದ್ದಾರೆಂಬುದು ಕೂಡ ಬಿಜೆಪಿ ನಾಯಕರು, ಕಾರ್ಯಕರ್ತರಲ್ಲಿ ಅಸಮಾಧಾನ ತಂದಿದೆ.

## ಮಿನಿ ನ್ಯೂಸ್

### ಸ್ವಂತ ಹಣದಲ್ಲಿ ಚರಂಡಿ ಸ್ವಚ್ಛತೆ

• **ಉದಯವಾಹಿನಿ, ಹಾರೋಹಳ್ಳಿ**

ಹಾರೋಹಳ್ಳಿ ಪಟ್ಟಣ ಪಂ. ವ್ಯಾಪ್ತಿಯ ಕೆಬ್ಬೆದೊಡ್ಡಿ ಗ್ರಾಮದಲ್ಲಿ ಗಬ್ಬೆದ್ದು ನಾರುತ್ತಿದ್ದ ಚರಂಡಿಗಳನ್ನು ಗ್ರಾಮಸ್ಥರೇ ತಮ್ಮ ಸ್ವಂತ ಹಣದಲ್ಲಿ ಸ್ವಚ್ಛ ಮಾಡಿಸಿಕೊಂಡರು. ತಮ್ಮ ಗ್ರಾಮದಲ್ಲಿ ಚರಂಡಿಗಳಲ್ಲಿ ಕಸ, ಕಡ್ಡಿ ನಿಂತುಕೊಂಡಿದ್ದು, ಕೊಳಚೆ ನೀರು ಸರಾಗವಾಗಿ ಹರಿಯದೆ ಚರಂಡಿ ಗಬ್ಬು ನಾರುತ್ತಿದೆ. ಈ ಚರಂಡಿಗಳನ್ನು ದುರಸ್ತಿಗೊಳಿಸುವಂತೆ ಅಧಿಕಾರಿಗಳಿಗೆ ಮನವಿ ಮಾಡಲಾಯಿತು. ಆದರೆ, ಯಾವುದೇ ಪ್ರಯೋಜನವಾಗಲಿಲ್ಲ. ಇದರಿಂದಾಗಿ ಗ್ರಾಮಸ್ಥರೇ ಹಣ ಸಂಗ್ರಹಿಸಿ, ಚರಂಡಿಯನ್ನು ಶುಚಿ ಮಾಡಿಕೊಂಡಿದ್ದೇವೆ ಎಂದು ಗ್ರಾಮಸ್ಥರು ಹೇಳಿದರು. ಗ್ರಾಮಸ್ಥರಾದ ವೀಣಾ ಮಾತನಾಡಿ. ಕೆಬ್ಬೆದೊಡ್ಡಿ ಗ್ರಾಮಸ್ಥರು ಹಲವು ವರ್ಷಗಳಿಂದ ಚರಂಡಿಯಲ್ಲಿ ನೀರು ಹರಿಯದೆ ಗಬ್ಬು ನಾರುತ್ತಿವೆ. ಚರಂಡಿಗಳು ತುಂಬಿಕೊಂಡು ರಸ್ತೆಯ ಮೇಲೆಲ್ಲಾ ಕೊಳಚೆ ನೀರು ಹರಿಯುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರೂ, ಯಾವುದೇ ಪ್ರಯೋಜನವಾಗಿಲ್ಲ. ಒಂದು ನಲ್ಲಿಗೆ ತಲಾ 18,000 ತೆರಿಗೆ ಹಾಕಿದ್ದಾರೆ. ಆದರೆ, ಹಣವನ್ನು ಮಾತ್ರ ಜನರಿಗೆ ಮೂಲ ಸೌಕರ್ಯ ಕಲ್ಪಿಸಲು ವಿನಿಯೋಗಿಸುತ್ತಿಲ್ಲ ಎಂದು ದೂರಿದರು.

### 10 ಅಡಿ ಉದ್ದದ ಹೆಬ್ಬಾವು ಪತ್ತೆ

• **ಉದಯವಾಹಿನಿ, ಚನ್ನಪಟ್ಟಣ**

ತಾಲ್ಲೂಕಿನ ದೇವರಹೊಸಹಳ್ಳಿ ಗ್ರಾಮದ ಬಳಿ ತೋಟವೊಂದರಲ್ಲಿ 10 ಅಡಿ ಉದ್ದದ ಹೆಬ್ಬಾವು ಪತ್ತೆಯಾದ ಘಟನೆ ನಡೆದಿದೆ. ಎಲೆಕೇರಿ ರವೀಶ್ ಎಂಬುವರು ತಮ್ಮ ಜಮೀನನ್ನು ಜೆಸಿಬಿ ಮೂಲಕ ಸಮತಟ್ಟು ಮಾಡಿಸುತ್ತಿದ್ದರು. ವೇಳೆ ಪೊದೆಯೊಂದರಲ್ಲಿ ಹೆಬ್ಬಾವು ಕಾಣಿಸಿಕೊಂಡಿದೆ. ತಕ್ಷಣ ಅವರು ವಲಯ ಅರಣ್ಯಾಧಿಕಾರಿ ರಾಂಪುರ ಮಲ್ಲೇಶ್ ಅವರಿಗೆ ವಿಷಯ ಮುಟ್ಟಿಸಿದ್ದಾರೆ.

ತಕ್ಷಣವೇ ತಮ್ಮ ಸಿಬ್ಬಂದಿ ಜೊತೆ ಸ್ಥಳಕ್ಕೆ ಬಂದ ರಾಂಪುರ ಮಲ್ಲೇಶ್ ಅವರು ಹೆಬ್ಬಾವನ್ನು ಸುರಕ್ಷಿತವಾಗಿ ಹಿಡಿದು, ಅದನ್ನು ರಕ್ಷಣೆ ಮಾಡಿದರು. ಆನಂತರ ಅದನ್ನು ಕಾಡಿಗೆ ಬಿಡಲಾಯಿತು. ಜಮೀನಿನ ಮೇಲ್ಭಾಗದಲ್ಲಿ ಅರಣ್ಯ ಪ್ರದೇಶ ಇದ್ದು, ಅಲ್ಲಿಂದ ಆಹಾರ ಹುಡುಕಿಕೊಂಡು ಈ ಹೆಬ್ಬಾವು ತೋಟಕ್ಕೆ ಬಂದಿರಬಹುದು. ಇಂತಹ ಪ್ರಕರಣಗಳು ಕಂಡುಬಂದರೆ ಸಾರ್ವಜನಿಕರು ಅವುಗಳ ಮೇಲೆ ಪ್ರಹಾರ ಮಾಡದೆ ಅರಣ್ಯ ಇಲಾಖೆಗೆ ಸುದ್ದಿ ಮುಟ್ಟಿಸಿದರೆ ಅದನ್ನು ಸುರಕ್ಷಿತ ಮಾಡಲಾಗುವುದು ಎಂದು ಮಲ್ಲೇಶ್ ಅವರು ತಿಳಿಸಿದ್ದಾರೆ.

### ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಶಿವಲಿಂಗೇಗೌಡ ಚಾಲನೆ

• **ಉದಯವಾಹಿನಿ, ಅರಸೀಕೆರೆ,**

ತಾಲ್ಲೂಕಿನ ಕಣಕಟ್ಟೆ ಹೋಬಳಿಯ ದೊಡ್ಡ ಮೇಟಿಕುರ್ಕೆ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯ ಕಾಮಗಾರಿ 04.05 ಕೋಟಿ ವೆಚ್ಚದ ರಸ್ತೆ ಅಗಲೀಕರಣ, ವಿಭಜಕ, ಹೈಮಾಸ್ಕ್ ಲೈಟ್ ಕಾಮಗಾರಿಗಳಿಗೆ ಶಾಸಕ ಶಿವಲಿಂಗೇಗೌಡ ಗುದ್ದಲಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಸ್ವಾಮಿ, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ, ಹಾಲಿ ಸದಸ್ಯ ರಾಮಪುರ ಸುರೇಶ್, ದೊಡ್ಡ ಮೇಟಿಕುರ್ಕೆ ಗ್ರಾಮದ ಮುಖಂಡರಾದ ಸುರೇಶ್, ಮೈಲಾರಪ್ಪ, ಊರಿನ ಹಿರಿಯ ಮುಖಂಡರಾದ ಮರಳಪ್ಪ, ಗುತ್ತಿಗೆದಾರರಾದ ಬಸವರಾಜು, ಲೋಕೋಪಯೋಗಿ ಇಲಾಖೆಯ ಇಂಜಿನಿಯರ್ ಅಧಿಕಾರಿಗಳು ಹಾಗೂ, ಕಣಕಟ್ಟೆ ಹೋಬಳಿಯ ಮುಖಂಡರು ಮೇಟಿ ಕುರ್ಕೆ, ಗ್ರಾಮ ಪಂಚಾಯ್ತಿ ಅಧ್ಯಕ್ಷರು, ಸದಸ್ಯರುಗಳು, ಸ್ಥಳೀಯ ಕಾರ್ಯಕರ್ತರು ಪಾಲ್ಗೊಂಡಿದ್ದರು. ಆಸ್ಪತ್ರೆಯಿಂದ ಶಿಬಿರ ಆಯೋಜಿಸಲಾಗಿದೆ' ಎಂದರು.

### ಜಿಲ್ಲೆಯ ವಿವಿಧೆಡೆ ಭಾರಿ ಮಳೆ: ದ್ರಾಕ್ಷಿ ತೋಟ, ಸೇತುವೆ ಜಲಾವೃತ

• **ಉದಯವಾಹಿನಿ, ಚಿಕ್ಕಬಳ್ಳಾಪುರ:**

ಜಿಲ್ಲೆಯ ವಿವಿಧೆಡೆ ಭಾರಿ ಮಳೆ ಸುರಿದಿದೆ. ನಗರದಿಂದ ಮಂಚನಬಲೆ ಗ್ರಾಮಕ್ಕೆ ಸಾಗುವ ರಸ್ತೆಯ ಕೆಳಸೇತುವೆ ಜಲಾವೃತವಾಗಿದೆ. ಇಲ್ಲಿ ಕಾರುಗಳು, ಬೈಕ್‌ಗಳು ಸಿಲುಕಿದ್ದು ಚಾಲಕರು ಹೊರ ಬರಲು ಹರಸಾಹಸಪಟ್ಟರು. ಈ ಮಾರ್ಗದಲ್ಲಿ ಸಂಚಾರ ವ್ಯತ್ಯಯವಾಯಿತು. ತಾಲ್ಲೂಕಿನ ಗ್ರಾಮೀಣ ಭಾಗಗಳಲ್ಲಿ ದ್ರಾಕ್ಷಿ ತೋಟ, ಹೂ ತೋಟಗಳಿಗೆ ನೀರು ನುಗ್ಗಿದೆ. ವಾಪಸಂದ್ರದ ಮುಖ್ಯ ರಸ್ತೆ ಜಲಾವೃತವಾಗಿದ್ದು, ಮತ್ತು ದೊಡ್ಡಮೋರಿ ತುಂಬಿ ಹರಿಯಿತು. ನೀರಿನಲ್ಲಿ ಕೊಚ್ಚಿ ಹೋದ ವ್ಯಕ್ತಿ **ಬರೂರು (ಬೀದರ್ ಜಿಲ್ಲೆ):** ಮಳೆ ನೀರಿನಿಂದ ಮುಳುಗಿದ್ದ ಸೇತುವೆ ದಾಟುವಾಗ, ಗ್ರಾಮದ ಗದ್ದಾಮಿಧಿ ಪ್ರಭಾಕರ ರೆಡ್ಡಿ (65) ಎಂಬವರು ಕೊಚ್ಚಿಕೊಂಡು ಹೋದ ಘಟನೆ ತಾಲ್ಲೂಕಿನ ಬರೂರು ಸಮೀಪ ನಡೆದಿದೆ. ಗ್ರಾಮದಿಂದ ಗಂಗವಾರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿನ ಸೇತುವೆ ದಾಟುವಾಗ ಹಳ್ಳದ ನೀರಿನ ರಭಸಕ್ಕೆ ಕೊಚ್ಚಿಕೊಂಡು ಹೋಗಿದ್ದಾರೆ.ಅಗ್ನಿಶಾಮಕ ಸಿಬ್ಬಂದಿ, ಮೀನುಗಾರರು ಶೋಧ ಕಾರ್ಯ ಕೈಗೊಂಡಿದ್ದು, ಪ್ರಭಾಕರ ರೆಡ್ಡಿ ಪತ್ತೆಯಾಗಿರಲಿಲ್ಲ.

### ರಸ್ತೆ ಡಾಂಬರೀಕರಣ ಕಾಮಗಾರಿ ವೀಕ್ಷಿಸಿದ ಶಾಸಕಿ ರೂಪಕಲಾ



• **ಉದಯವಾಹಿನಿ, ಬೇತಮಂಗಲ**

ಸುವರ್ಣಹಳ್ಳಿ ಗ್ರಾಮದಿಂದ ವೆಂಗಸಂದ್ರ ಕ್ರಾಸ್‌ವರೆಗೆ ರಸ್ತೆ ಡಾಂಬರೀಕರಣಕ್ಕೆ ಸುಮಾರು 24 ಕೋಟಿ ಅನುದಾನ ಮಂಜೂರು ಮಾಡಲಾಗಿದೆ ಎಂದು ಶಾಸಕಿ ರೂಪಕಲಾ ತಿಳಿಸಿದರು.

ಸುವರ್ಣಹಳ್ಳಿ ಗ್ರಾಮದಿಂದ ವೆಂಗಸಂದ್ರ ಕ್ರಾಸ್‌ವರೆಗೂ ಸುಮಾರು 2.5 ಕಿ.ಮೀ ಡಾಂಬರು ರಸ್ತೆ ಕಾಮಗಾರಿ ಯನ್ನು ಈಚೆಗೆ ಪರಿಶೀಲನೆ ನಡೆಸಿ ಮಾತನಾಡಿದರು. ಸುವರ್ಣಹಳ್ಳಿ ಗ್ರಾಮದಿಂದ ವೆಂಗಸಂದ್ರ ಕ್ರಾಸ್‌ವರೆಗೆ ರಸ್ತೆಯು ತುಂಬಾ ಗುಂಡಿಗಳಿಂದ ಕೂಡಿದ್ದು, ವಾಹನ ಸವಾರರಿಗೆ ತೊಂದರೆ ಯಾಗುತ್ತಿತ್ತು. ಹಾಗಾಗಿ ರಸ್ತೆ ಡಾಂಬರೀಕರಣ ಹಾಗೂ ಎರಡು ಕಡೆ ಚರಂಡಿ ನಿರ್ಮಿಸಲಾಗುವುದು. ಎಪಿಎಂಸಿ ಅಧ್ಯಕ್ಷ ವಿಜಯ ರಾಘವ್ ರೆಡ್ಡಿ, ಸುರೇಂದ್ರ ಗೌಡ, ದಶರತ್ ರೆಡ್ಡಿ, ಯಶೋದಮ್ಮ ಶ್ರೀನಿವಾಸ್ ರೆಡ್ಡಿ, ಕೃಷ್ಣಪ್ಪ, ನಾರಾಯಣಸ್ವಾಮಿ ಸೇರಿದಂತೆ ಇತರರು ಇದ್ದರು.


ಅಂತರಾಳದಿಂದ..
EDITORIAL

# ಶರಾವತಿ ಕೊಳ್ಳದ ಹೊಸ ಯೋಜನೆ; ಹಳೆಯ ತಪ್ಪುಗಳು ಮರುಕಳಿಸದಿರಲಿ

ಪರಿಸರ ಸಾರ್ವಜನಿಕ ಅಹವಾಲು ಸಭೆಯಲ್ಲಿ ಯೋಜನೆಯನ್ನು ವಿರೋಧಿಸಿ ಸುಮಾರು 10 ಸಾವಿರ ಅಹವಾಲುಗಳು ಸಲ್ಲಿಕೆಯಾಗಿವೆ. 2000 ಮೆ.ವಾ ಸಾಮರ್ಥ್ಯದ ಈ ಜಲವಿದ್ಯುತ್ ಯೋಜನೆಯು ರಾಜ್ಯಕ್ಕೆ ಶುದ್ಧ ಇಂಧನ ಹಾಗೂ ಗ್ರಿಡ್ ಸ್ಥಿರತೆಯನ್ನು ಒದಗಿಸಲಿದೆ ಎನ್ನುವುದು 'ಕೆಪಿಸಿಎಲ್' ನೀಡುತ್ತಿರುವ ಭರವಸೆ, ಸೌರಶಕ್ತಿ ಅಥವಾ ಪವನಶಕ್ತಿಯನ್ನು ಬಳಸುವ ಮೂಲಕ ಗೇರುಸೊಪ್ಪ ಜಲಾಶಯದಿಂದ ಮೇಲಿನ ತಲಕಳಲೆ ಜಲಾಶಯಕ್ಕೆ ನೀರನ್ನು ಪಂಪ್ ಮಾಡಿ. ಆ **ನೀರನ್ನು ಟರ್ಬೈನ್‌ಗಳ ಮೂಲಕ ಹಾಯಿಸಿ ವಿದ್ಯುತ್ ಉತ್ಪಾದಿಸಲಾಗುವುದು:** ಆ ಮೂಲಕ ಅತ್ಯಧಿಕ ಬೇಡಿಕೆ ಇರುವ ಸಮಯದಲ್ಲಿ ಗುಣಮಟ್ಟದ ವಿದ್ಯುತ್ ಪೂರೈಸುವುದು ಸಾಧ್ಯವಾಗಲಿದೆ ಎಂದು ಹೇಳಲಾಗುತ್ತಿದೆ. ಕಾಗದದ ಮೇಲೇನೋ ಉದ್ದೇಶಿತ ಯೋಜನೆ ಆಕರ್ಷಕವಾಗಿ ಕಾಣಿಸುತ್ತಿದೆ. ಲಭ್ಯ ಮೂಲ ಸೌಕರ್ಯಗಳನ್ನು ಬಳಸಿಕೊಂಡು ಹಾಗೂ ಜಲವಿದ್ಯುತ್ ಅವಲಂಬನೆಯ ಮೂಲಕ ರಾಜ್ಯದ ವಿದ್ಯುತ್ ಜಾಲವನ್ನು ಬಲಪಡಿಸುವ ಆಶ್ವಾಸನೆಯ ಜೊತೆಗೆ, ಪಳೆಯುಳಿಕೆ ಇಂಧನಗಳನ್ನು ಸುಡದಿರುವ ಭರವಸೆಯನ್ನೂ ಯೋಜನೆ ನೀಡುತ್ತಿದೆ. 'ಪಿಎಸ್‌ಪಿ' ಯೋಜನೆಗೆ ಸಂಬಂಧಿಸಿದಂತೆ ಸಾಕಷ್ಟು ಭರವಸೆ ಗಳನ್ನು ಕೆಪಿಸಿಎಲ್ ನೀಡುತ್ತಿದೆ ಯಾದರೂ, ಆ ಭರವಸೆಗಳ ಹಿಂದೆ ನಿರ್ಲಕ್ಷಿಸಲಾಗದಷ್ಟು ಗಂಭೀರವಾದ ಸಂಗತಿಗಳಿವೆ. ಯುನೆಸ್ಕೋದ ವಿಶ್ವ ಪಾರಂಪರಿಕ ತಾಣಗಳ ಪಟ್ಟಿಯಲ್ಲಿರುವ ಪಶ್ಚಿಮ ಘಟ್ಟಗಳ ವ್ಯಾಪ್ತಿಗೆ ಸೇರಿದ 'ಸಿಂಹ ಬಾಲದ ಸಿಂಗಳೀಕಗಳ ಅಭಯಾರಣ್ಯ ಪ್ರದೇಶದಲ್ಲಿ ಉದ್ದೇಶಿತ ಯೋಜನೆ ಅಸ್ತಿತ್ವಕ್ಕೆ ಬರಲಿದೆ. ವಿದ್ಯುತ್ ಯೋಜನೆಗಾಗಿ ಸುರಂಗ ನಿರ್ಮಾಣ, ಸ್ಫೋಟದಂಥ ಚಟುವಟಿಕೆಗಳು ಹಾಗೂ 16 ಸಾವಿರಕ್ಕೂ ಹೆಚ್ಚು ಅಮೂಲ್ಯ ಮರಗಳನ್ನು ಕಡಿಯುವುದು ಈ ಭಾಗದ ಸೂಕ್ಷ್ಮ ಪರಿಸರ ಹಾಗೂ ಜೀವವೈವಿಧ್ಯದ ಮೇಲೆ ಉಂಟು ಮಾಡಬಹುದಾದ ದುಷ್ಪರಿಣಾಮಗಳ ಬಗ್ಗೆ ಪರಿಸರವಾದಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ಯೋಜನೆಗೆ ಸಂಬಂಧಿಸಿದ ಪರಿಸರ ಪರಿಣಾಮ ಮೌಲ್ಯಮಾಪನ ದೋಷಗಳಿಂದ ಕೂಡಿದೆ ಹಾಗೂ ಪಾರದರ್ಶಕವಾಗಿಲ್ಲ ಎಂದು ಪರಿಸರವಾದಿಗಳು ಆರೋಪಿಸಿದ್ದಾರೆ. ಪ್ರಸಕ್ತ ಯೋಜನೆಯು ಹಳೆಯ ಗಾಯಗಳನ್ನು ಕೆದಕುವ ಪ್ರಯತ್ನವಾಗಿದೆ; 1960ರ ದಶಕದಲ್ಲಿ ಲಿಂಗನಮಕ್ಕಿ ಜಲಾಶಯ ನಿರ್ಮಾಣದ ಸಂದರ್ಭದಲ್ಲಿ ನಿರ್ವಸಿತರಾಗಿದ್ದ ಕುಟುಂಬವರ್ಗಗಳಿಗೆ ಸೇರಿದವರು ಮತ್ತೊಮ್ಮೆ ಅಂತಹುದೇ ಸವಾಲನ್ನು ಎದುರಿಸಬೇಕಾಗುತ್ತದೆ ಎಂದು ಹೇಳಲಾಗುತ್ತಿದೆ. ಲಿಂಗನಮಕ್ಕಿ ಜಲಾಶಯ ನಿರ್ಮಾಣದಲ್ಲಿ ಭೂಮಿ ಕಳೆದುಕೊಂಡವರಿಗೆ ದೊರೆಯಬೇಕಿದ್ದ ನ್ಯಾಯಯುತ ಪರಿಹಾರ ಹಾಗೂ ಮೂಲಸೌಕರ್ಯಗಳ ಭರವಸೆಗಳು ಪೂರ್ಣ ಪ್ರಮಾಣದಲ್ಲಿ ಈಡೇರಿಲ್ಲ. ಭೂಮಿಯನ್ನು ಕಳೆದುಕೊಂಡಿದ್ದರ ಜೊತೆಗೆ, ನಂಬಿಕೆದ್ರೋಹಕ್ಕೂ ಒಳಗಾದ ನೋವು ಅವರದು. ಹಳೆಯ ಗಾಯಗಳು ಮಾಯದಿರುವ ಸಮುದಾಯಗಳನ್ನು ಮತ್ತೊಮ್ಮೆ ತ್ಯಾಗ ಮಾಡುವಂತೆ ಒತ್ತಾಯಿಸಲಾಗುತ್ತಿದೆ ಹಾಗೂ ಹಳೆಯ ತಪ್ಪುಗಳು ಮರುಕಳಿಸುವುದಿಲ್ಲ ಎಂದು ಹೇಳಲಾಗುತ್ತಿದೆ. ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಯನ್ನು ಕೈಬಿಡುವುದೇ ಸೂಕ್ತ ಎಂದು ಪರಿಸರವಾದಿಗಳು ಅಭಿಪ್ರಾಯಪಟ್ಟಿದ್ದಾರೆ. ಬ್ಯಾಟರಿ ಶಕ್ತಿ ಶೇಖರಣಾ ವ್ಯವಸ್ಥೆ, ಸೌರಶಕ್ತಿಯಿಂದ ತಾರಸಿ ವಿದ್ಯುತ್ ಯೋಜನೆ ಹಾಗೂ ಸೂಕ್ಷ್ಮ ಜಲವಿದ್ಯುತ್ ಯೋಜನೆಯಂಥ ಪರ್ಯಾಯಗಳನ್ನು ಕಂಡುಕೊಳ್ಳುವ ಸಲಹೆಗಳೂ ವ್ಯಕ್ತವಾಗಿವೆ. ವಿದ್ಯುತ್ ಉತ್ಪಾದನೆಯ ಹೆಸರಿನಲ್ಲಿ ಭವಿಷ್ಯದಲ್ಲಿ ಬೆಂಗಳೂರಿಗೆ ನೀರು ಸಾಗಿಸುವ ಯೋಜನೆ ಇದಾಗಲಿದೆ ಎನ್ನುವ ಶಂಕೆಯೂ ಜನರಲ್ಲಿದೆ. ಒಂದು ವೇಳೆ, ಯೋಜನೆಯನ್ನು ಜಾರಿಗೊಳಿಸುವುದೇ ಆದಲ್ಲಿ, ಯೋಜನೆಯಿಂದ ಪರಿಸರದ ಮೇಲಾಗುವ ಪರಿಣಾಮಗಳ ಕುರಿತಂತೆ ಸ್ವತಂತ್ರ್ಯ ಪರಿಸರ ಮೌಲ್ಯಮಾಪನವನ್ನು ಸರ್ಕಾರ ಹೊಸತಾಗಿ ನಡೆಸುವುದು ಅಗತ್ಯ. ಜೀವವೈವಿಧ್ಯ ತಾಣಗಳನ್ನು ಸಂರಕ್ಷಿಸುವ ಬದ್ಧತೆಯೊಂದಿಗೆ ಮುಕ್ತ ಸಮಾಲೋಚನೆ ನಡೆಯಬೇಕಾಗಿದೆ. ಎಲ್ಲಕ್ಕಿಂತಲೂ ಮುಖ್ಯವಾಗಿ, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ವ್ಯವಸ್ಥೆ ಕಾಯ್ದೆ 2013ರ ಅನ್ವಯ ಸಂತ್ರಸ್ತ ಕುಟುಂಬಗಳಿಗೆ ನ್ಯಾಯಯುತ ಪರಿಹಾರ ದೊರಕಿಸಿಕೊಡುವುದರ ಜೊತೆಗೆ ಜೀವನೋಪಾಯಕ್ಕೆ ಅಗತ್ಯವಾದ ಎಲ್ಲಾ ನೆರವು ನೀಡಬೇಕಾಗಿದೆ. ಗುಣಮಟ್ಟದ ವಿದ್ಯುತ್‌ನ ಆಗತ್ಯ ರಾಜ್ಯಕ್ಕಿದೆ ಎನ್ನುವುದರಲ್ಲಿ ಅನುಮಾನವಿಲ್ಲ. ಆದರೆ, ಈ ಅಗತ್ಯ ಪೂರೈಕೆಗಾಗಿ ಅಮೂಲ್ಯ ಪರಿಸರ ಹಾಗೂ ನಾಗರಿಕರ ಘನತೆಯ ಬೆಲೆ ತೆರುವಂತೆ ಆಗಬಾರದು.

**ಅಪೂರ್ವ ಅರಣ್ಯ ಪ್ರದೇಶ, ಜೀವವೈವಿಧ್ಯ ಹಾಗೂ ವಿಶ್ವಪ್ರಸಿದ್ಧ ಜೋಗ ಜಲಪಾತ ಒಳಗೊಂಡಿರುವ ಶಿವಮೊಗ್ಗ ಜಿಲ್ಲೆಯ ಶರಾವತಿ ಕಣಿವೆಯ ಪ್ರದೇಶ, 'ಅಭಿವೃದ್ಧಿಯೋ ಸಂರಕ್ಷಣೆಯೋ' ಎನ್ನುವ ಆಯ್ಕೆಯ ಸಂಘರ್ಷಕ್ಕೆ ಮತ್ತೊಮ್ಮೆ ಗುರಿಯಾಗಿದೆ. ಕರ್ನಾಟಕ ವಿದ್ಯುತ್ ನಿಗಮ ನಿಯಮಿತ' (ಕೆಪಿಸಿಎಲ್) ಯೋಜಿಸಿರುವ, ಶರಾವತಿ ಪಂಪ್ಡ್ ಸ್ಟೋರೇಜ್ ಪ್ರಾಜೆಕ್ಟ್' (ಪಿಎಸ್‌ಪಿ) ಅನುಷ್ಠಾನಕ್ಕೆ ಸ್ಥಳೀಯರು ಹಾಗೂ ಪರಿಸರವಾದಿಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಯೋಜನೆಯ ವಿರುದ್ಧ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.**





# ರಾಮಾಯಣ

## ಖರನು ದುರ್ನಿಮಿತ್ತಗಳನ್ನು ಕಂಡದ್ದು

ಹಿಂದಿನ ಸಂಚಿಕೆಯಿಂದ

120 ನೆಯ ಅಧ್ಯಾಯ

ನನ್ನ ಕೊಡಲಿಯ ಪೆಟ್ಟಿನಿಂದ ಗಾಯವಡೆದು ಭೂಮಿಯ ಮೇಲೆ ಬೀಳುವ ರಾಮನ ಬಿಸಿರಕ್ತವನ್ನು ನೀನು ಪಾನಮಾಡುವೆ ಎಂದು ಪರಾಕ್ರಮದ ಮಾತುಗಳನ್ನು ನುಡಿದನು. ಆ ಮಾತನ್ನು ಕೇಳಿ ಶೂರ್ಪಣಖಿಯು ಮೂರ್ಖತನದಿಂದ ಹಿಗ್ಗಿ ಖರನನ್ನು ಬಹಳವಾಗಿ ಕೊಂಡಾಡಿದಳು. ಆಗ ಉಬ್ಬಿಕೊಬ್ಬಿದ ಖರನು ತನ್ನ ಸೇನಾಪತಿಯಾದ ದೂಷಣನನ್ನು ಕುರಿತು ಹೀಗೆ ಆಜ್ಞಾಪಿಸಿದನು : ಎಲೈ ದೂಷಣ ನನ್ನ ಆಜ್ಞೆಯಂತೆ ನಡೆಯುವ ಮಹಾ ಪರಾಕ್ರಮಿಗಳಾದ ಹದಿನಾಲ್ಕು ಸಾವಿರವಂದಿ ರಾಕ್ಷಸರನ್ನು ಸಂನದ್ಧರಾಗಲು ಆಜ್ಞೆ ಮಾಡಿ ಶೀಘ್ರಗತಿಯುಳ್ಳ ನನ್ನ ರಥವನ್ನು ಮೇಚ್ಚಿಸು. ಬಿಲ್ಲು ಬಾಣ ಖಡ್ಗ ಶಕ್ತಿ ಮೊದಲಾದ ಆಯುಧಗಳನ್ನು ತರಿಸು. ಪುಲಸ್ತ್ಯ ಬ್ರಹ್ಮನ ವಂಶದಲ್ಲಿ ಹುಟ್ಟಿ ಮಹಾತ್ಮರಾದ ರಾಕ್ಷಸರಿಗೆ ನಾನು ಆಗ್ರೇಸರನಾಗಿ ವಧೆಗೆ ಸಿದ್ಧನಾಗಿದ್ದೇನೆ. ರಾಮಲಕ್ಷ್ಮಣರನ್ನು ಕೊಲ್ಲುವುದಕ್ಕೆ ನಾವು ಈಗ ಹೋಗೋಣ ಎಂದು ಹೇಳಿದನು.

ದೂಷಣನು ಮಹಾಪ್ರಸಾದವೆಂದು ಅಂಗೀಕರಿಸಿ ಸುವರ್ಣಮಯವಾದ ಮಹಾ ರಥವನ್ನು ಧೂಮ್ರವರ್ಣವಾದ ಕುದುರೆಗಳಿಂದ ಸಜ್ಜು ಮಾಡಿ ತಂದು ಖರನಿಗೆ ತಿಳಿಸಿದನು. ಆತನು ರತ್ನ ಖಚಿತವಾಗಿಯೂ ಅತ್ಯುನ್ನತವಾದ ಧ್ವಜಸ್ತಂಭವುಳ್ಳದ್ದಾಗಿಯೂ ಚಿನ್ನದ ಕಿರುಘಂಟೆಗಳಿಂದ ಆಲಂಕರಿಸಲ್ಪಟ್ಟದ್ದಾಗಿ ಯೂ ಉತ್ತಮಾಶ್ವಗಳಿಂದ ಮೇಲ್ವಿಸಿಯೂ ಇದ್ದ ರಥವನ್ನೇರಿಕೊಂಡು ಶ್ರೀರಾಮನೊಡನೆ ಯುದ್ಧಾರ್ಥವಾಗಿ ರಾಮಲಕ್ಷ್ಮಣರನ್ನು ವಧಿಸುವುದಕ್ಕೆ ಸಿದ್ಧನಾಗಿದ್ದೇನೆಂದು ಖರನು ಅಭಿಪ್ರಾಯ. ನನ್ನ ವಧೆಗೆ ನಾನು ಸಿದ್ಧನಾಗಿದ್ದೇನೆ' ಎಂಬ ಅರ್ಥವೂ ಇಲ್ಲಿ ತೋರುತ್ತದೆ, ಇದು ದೈವವಿಲಾಸ,ಹೊರಟನು. ಸಮಸ್ತ ರಾಕ್ಷಸರೂ ತನ್ನ ರಥದ ಸುತ್ತಲೂ ನಿಂತಿರಲು ಅವರನ್ನು ಯುದ್ಧ ಸಂನದ್ಧರಾಗಿ ಹೊರಟುಬರಹೇಳಿ ಮುಷ್ಕರ, ಪಟ್ಟಸ, ತ್ರಿಶೂಲ, ವರಶು, ಕೊಡಲಿ, ಖಡ್ಗ, ಚಿತ್ರ, ತೋಮರ, ಶಕ್ತಿ, ಪರಿಘ, ಭಿಂದಿವಾಲ, ಬಿಲ್ಲು, ಗದೆ, ವಜ್ರ, ಮೊದಲಾದ ಆಯುಧಗಳನ್ನು ತೆಗೆದು ಕೊಂಡು ಹದಿನಾಲ್ಕು ಸಾವಿರ ಮಂದಿ ರಾಕ್ಷಸರು ಹಿಂದೆ ಬರುತ್ತಿರಲು ಜನಸ್ಥಾನದಿಂದ ಶ್ರೀರಾಮನು ಇದ್ದೆಡೆಗೆ ಹೊರಟನು. ಆಗ ಸಾರಥಿಯು ಖರನ ಕೋಪಾಟೋಪವನ್ನೂ ಆತನ ವ್ಯಗ್ರತೆಯನ್ನೂ ತಿಳಿದು ರಥಕ್ಕೆ ಕಟ್ಟಿದ ಕುದುರೆಗಳನ್ನು ಚಬುಕುಮಾಡಲು ಆ ಕುದುರೆಗಳು ಅತಿವೇಗದಿಂದ ಹೊರಟವು. ಈ ರೀತಿಯಲ್ಲಿ ಖರನು ಸಮಸ್ತ ಬಲಗಳನ್ನೂ ಕೂಡಿಕೊಂಡು ಶ್ರೀರಾಮನಮೇಲೆ ಯುದ್ಧಕ್ಕೆ ಬರುವಾಗ ದುರ್ನಿಮಿತ್ತ ಸೂಚಕವಾದ ಅನೇಕ ಉತ್ಪಾತಗಳಾದವು. ಮೇಘವು ಹೇಸರಕತ್ತೆಯ ರೋಮಗಳಂತೆ ಧೂಮ್ರವರ್ಣವಾಗಿ ಖರನ ಬಲದಮೇಲೆ ರಕ್ತದ ಮಳೆಯನ್ನು ಕರೆಯಿತು.

ಮುಂದುವರಿಯುವುದು...

# ನವರಾತ್ರಿಯಲ್ಲಿ ದೇವಿಯ ಆರಾಧನೆ

ಉದಯವಾಹಿನಿ, ವಿಶೇಷ

ಶ್ರೀ. ವಿನೋದ ಕಾಮತ್,

ನವರಾತ್ರಿಯ ಆರಂಭದ ತಿಥಿಯ ಕುರಿತು ದೇವಿಪುರಾಣದಲ್ಲಿ ಮುಂದಿನ ಸಂದರ್ಭವನ್ನು ಕೊಡಲಾಗಿದೆ,

**ಅಮಾಯುಕ್ತಾ ನ ಕರ್ತವ್ಯಾ ಪ್ರತಿಪತ್ಪೂಜನೆ ಮಮ ।**



**ಮುಹೂರ್ತಮಾತ್ರಾ ಕರ್ತವ್ಯಾ ದ್ವಿತೀಯಾದಿಗುಣಾನ್ವಿತಾ ॥**

**ಅರ್ಥ :** ಅಮವಾಸ್ಯೆಯುಕ್ತ ಪಾಡ್ಯದಂದು ನವರಾತ್ರಿಯ ವ್ರತ ಮತ್ತು ಪೂಜೆಯನ್ನು ಮಾಡಬಾರದು. ಇಂತಹ ಸಮಯದಲ್ಲಿ ಪಾಡ್ಯಯುಕ್ತ ಬಿದಿಗೆಯಂದು ವ್ರತವನ್ನು ಪ್ರಾರಂಭಿಸಿ ಪೂಜೆಯನ್ನು ಮಾಡುವುದು ಉತ್ತಮ. ಹಸ್ತ ನಕ್ಷತ್ರಯುಕ್ತ ಪಾಡ್ಯದಂದು ಕಲಶವನ್ನು ಸ್ಥಾಪನೆ ಮಾಡುವುದು ಉತ್ತಮ. ತಮ್ಮ ಕುಲಾಚಾರಕ್ಕನುಸಾರ ಅಷ್ಟಮಿ ಅಥವಾ ನವಮಿ ತಿಥಿಗೆ ಹವನವನ್ನು ಮಾಡಬೇಕು. ಅನಂತರ ಅನ್ನಗ್ರಹಣ ಮಾಡಬೇಕು. ಸಂಪೂರ್ಣ ಪೂಜಾಸಾಮಗ್ರಿಗಳ, ಹಾಗೆಯೇ ದೇವಿಯ ಪ್ರತಿಮೆಯನ್ನು ಅದೇ ದಿನ ವಿಸರ್ಜನೆ ಮಾಡಬೇಕು. ದೇವಿಯ ಪೂಜೆಯಲ್ಲಿ ಅರಿಶಿಣ-ಕುಂಕುಮ, ಬಿಲ್ವಪತ್ರೆ ಮುಂತಾದವುಗಳಿರುವುದು ಉತ್ತಮ. ದೇವಿಯ ಪೂಜೆಯಲ್ಲಿ ತುಳಸಿ ಮತ್ತು ಗರಿಕೆಗಳನ್ನು ಉಪಯೋಗಿಸುವಂತಿಲ್ಲ.

**ಮುಂದಿನಂತೆ ಯಾವುದಾದರೂಂದು ಪ್ರಕಾರದ ಉಪಾಸನೆಯನ್ನು ಮಾಡಬಹುದು :** ಶ್ರೀ ದುರ್ಗಾಸಪ್ತಶತಿಯನ್ನು ಪಠಿಸುವುದು, ಪ್ರತಿದಿನ 15 ಬಾರಿ ಶ್ರೀಸೂಕ್ತದ ಪಠಣವನ್ನು ಮಾಡಬೇಕು. ಅದಕ್ಕಿಂತ ಮೊದಲು ಸೂರ್ಯಮಂತ್ರದ ಒಂದು ಮಾಲೆ ಜಪವನ್ನು ಮಾಡಬೇಕು.

**ಶ್ರೀಸೂಕ್ತದ ತಾಂತ್ರಿಕ ಉಪಾಸನೆ :** ಈ ಉಪಾಸನೆಯನ್ನು ಪ್ರತಿದಿನ ಮುಂಜಾನೆ 2.30 ಕ್ಕೆ ಪ್ರಾರಂಭ ಮಾಡಬೇಕು. ಮೊದಲು ವಿನಿಯೋಗ, ನ್ಯಾಸ ಮುಂತಾದವುಗಳನ್ನು ಮಾಡಬೇಕು. ಅನಂತರ ಶ್ರೀಯಂತ್ರದ ಮೇಲೆ ಶ್ರೀಲಕ್ಷ್ಮಿಯ ಮೂರ್ತಿಯನ್ನು ಇಟ್ಟು ಶ್ರೀಸೂಕ್ತವನ್ನು 21 ಬಾರಿ ಪಠಿಸಿ ಅಭಿಷೇಕ ಮಾಡಬೇಕು. ಬಳಿಕ 11 ಬಾರಿ ಶ್ರೀಸೂಕ್ತವನ್ನು ಪಠಿಸಿ ತುಪ್ಪ ಮತ್ತು ಗುಗ್ಗುಳಗಳಿಂದ ಹವನವನ್ನು ಮಾಡಬೇಕು. ಇದರಿಂದ ಲಕ್ಷ್ಮೀಮಾತೆಯು ಪ್ರತ್ಯಕ್ಷ ದರ್ಶನ ನೀಡುವಳು. ಅವಳಿಗೆ ಪ್ರತಿನಿತ್ಯವೂ ತಮ್ಮ ಮನೆಯಲ್ಲಿಯೇ ಉಳಿಯಲು ಪ್ರಾರ್ಥನೆ ಮಾಡಬೇಕು.

**ಮಂತ್ರಜಪದ ಪದ್ಧತಿ :** ಗುರುಗಳು ಯಾವುದೇ ದೇವಿಯ ಮಂತ್ರವನ್ನು ಕೊಟ್ಟಿದ್ದರೂ, ಅದನ್ನು ಪ್ರತಿದಿನ 1 ಮಾಲೆ ಜಪವನ್ನು ರಕ್ತಚಂದನದ ಮಾಲೆಯಿಂದ ಮಾಡಬೇಕು. ಎರಡು ಮಂತ್ರಜಪಗಳಲ್ಲಿ ಸ್ವಲ್ಪ ಅಂತರವನ್ನು ಇಡಬೇಕು. ಜಪವನ್ನು ಮಾಡುವಾಗ ನಾನೇ ಅವ್ಯಯ ಅವಿನಾಶಿ ಭಗವತಿಯಾಗಿದ್ದೇನೆ, ಎಂಬ ಭಾವವನ್ನು ಇಟ್ಟುಕೊಳ್ಳಬೇಕು. ಎರಡು ಮಂತ್ರಜಪಗಳಲ್ಲಿನ ಅಂತರವನ್ನು ಎಷ್ಟು ಹೆಚ್ಚಿಗೆ ಇಡಲು ಸಾಧ್ಯವಾಗುತ್ತದೆಯೋ, ಅಷ್ಟು ಹೆಚ್ಚಿಗೆ ಇಡಬೇಕು, ಇದರಿಂದ ಭಾವವೃದ್ಧಿಯಾಗುತ್ತದೆ ಮತ್ತು ತಾನು ಸ್ವತಃ ಜಗದಂಬೆಯಾಗಿದ್ದೇನೆ ಎಂಬ ಅನುಭೂತಿ ಬರುತ್ತದೆ. ಶಕ್ತಿ-ಉಪಾಸಕರು ಇದೇರೀತಿ ಉಪಾಸನೆಯನ್ನು ಮಾಡಿ ಅನುಭೂತಿಯನ್ನು ಪಡೆಯುತ್ತಿರುತ್ತಾರೆ; ಆದರೆ ಅವರು ವಿನಿಯೋಗ, ನ್ಯಾಸ, ಮುದ್ರೆ ಮುಂತಾದ ಕಠಿಣ ಕ್ರಿಯೆಗಳನ್ನು ಮೊದಲು ಮಾಡುತ್ತಾರೆ. ಭಗವತಿಯ ಸಾನ್ನಿಧ್ಯವನ್ನು ಪ್ರಾಪ್ತ ಮಾಡಿಕೊಂಡು ಸಂಪೂರ್ಣ ದೇಹವನ್ನು ಮಂತ್ರ ಮಯಗೊಳಿಸಿ ಅವರು ಈ ಉಪಾಸನೆಯನ್ನು ಮಾಡುತ್ತಾರೆ. ನವಾರ್ಣ ಮಂತ್ರದ ದೀಕ್ಷೆಯನ್ನು ಪಡೆದಿದ್ದರೆ, ಅದನ್ನು ಪ್ರತಿದಿನ 1 ಸಾವಿರ ಸಲ ಪಠಿಸಬೇಕು. ದೀಕ್ಷೆ ಪಡೆಯದಿರುವವರು, ಮಂತ್ರದ ಉತ್ಕೀಲನ ಮತ್ತು ಸಂಜೀವನ ಕ್ರಿಯೆಗಳನ್ನು ಮೊದಲು ಮಾಡಿ ನಂತರ ಜಪ ಮಾಡಬೇಕು. ನವರಾತ್ರಿಯಲ್ಲಿ ನವನಾಥ ಪಂಥದವರು ನವನಾಥರ ಉಪಾಸನೆಯನ್ನು ಮಾಡುತ್ತಾರೆ.

# ಬೆಳಗಾವಿಯಲ್ಲಿ ವೆಂಕಟೇಶ್ವರ ದೇಗುಲ ನಿರ್ಮಾಣ: ಟಿಟಿಡಿ



ಉದಯವಾಹಿನಿ, ಬೆಂಗಳೂರು

ಉತ್ತರ ಕರ್ನಾಟಕ, ಗೋವಾ, ಮಹಾರಾಷ್ಟ್ರದ ಭಕ್ತರಿಗೆ ಅನುಕೂಲವಾಗುವ ಉದ್ದೇಶದಿಂದ ಬೆಳಗಾವಿಯಲ್ಲಿ ಹೊಸ ವೆಂಕಟೇಶ್ವರ ದೇವಾಲಯ ನಿರ್ಮಾಣಕ್ಕೆ ಅನುಮೋದನೆ ನೀಡಿರುವುದಾಗಿ ಟಿಟಿಡಿ ಮಂಡಳಿ ತಿಳಿಸಿದೆ.

ಮಲ್ಲೇಶ್ವರಂನ ವೆಂಕಟೇಶ್ವರ ದೇವಸ್ಥಾನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ತಿರುಮಲ ತಿರುಪತಿ ದೇವಸ್ಥಾನ ಮಂಡಳಿಯ ಸದಸ್ಯ ಎಸ್ ನರೇಶ್ ಕುಮಾರ್ ಈ ಘೋಷಣೆ ಮಾಡಿದ್ದಾರೆ. ಸೆಪ್ಟೆಂಬರ್ 16 ರಂದು ನಡೆದ ಮಂಡಳಿಯ ಸಭೆಯಲ್ಲಿ ಈ ನಿರ್ಣಯವನ್ನು ಅಂಗೀಕರಿಸಲಾಗಿದೆ ಎಂದು ಟಿಟಿಡಿ ಹೇಳಿಕೆಯಲ್ಲಿ ತಿಳಿಸಿದೆ. ಬೆಂಗಳೂರು ಮತ್ತು ದೇಶದ ಇತರ ಭಾಗಗಳಲ್ಲಿ ಈಗಾಗಲೇ ಸ್ಥಾಪಿಸಲಾದ ದೇವಾಲಯಗಳಂತೆ, ಬೆಳಗಾವಿ ದೇವಾಲಯವು ಈ ಪ್ರದೇಶದ ಭಕ್ತರಿಗೆ ವೆಂಕಟೇಶ್ವರನನ್ನು ಹತ್ತಿರ ತರುತ್ತದೆ. ಪ್ರತಿ ಬಾರಿ ತಿರುಮಲಕ್ಕೆ ಪ್ರಯಾಣಿಸುವ ಬದಲು, ಭಕ್ತರಿಗೆ ಸ್ಥಳೀಯವಾಗಿ ಸ್ವಾಮಿಯ ಆಶೀರ್ವಾದ ಸಿಗುತ್ತದೆ ಎಂದು ಹೇಳಿದರು.

ಬೆಳಗಾವಿಯಲ್ಲಿ ಸುವರ್ಣ ಸೌಧದ ಬಳಿ ಈ ದೇವಾಲಯವನ್ನು ನಿರ್ಮಿಸಲು ಪ್ರಸ್ತಾಪಿಸಲಾಗಿದ್ದು, ಶ್ರೀವಾಣಿ ಟ್ರಸ್ಟ್ ಮೂಲಕ ಇದನ್ನು ನಿರ್ಮಿಸಲಾಗುವುದು ಎಂದು ಅವರು ಹೇಳಿದರು. ಟಿಟಿಡಿ ಅಧ್ಯಕ್ಷ ಬಿಆರ್ ನಾಯ್ಡು ಅವರು ಶೀಘ್ರದಲ್ಲೇ ಬೆಳಗಾವಿಗೆ ಭೇಟಿ ನೀಡಿ ಸ್ಥಳ ಪರಿಶೀಲಿಸುವ ಮತ್ತು ಮುಂದಿನ ಹಂತಗಳ ಮೇಲ್ವಿಚಾರಣೆ ನಡೆಸುವ ನಿರೀಕ್ಷೆಯಿದೆ ಎಂದು ನರೇಶ್ ಕುಮಾರ್ ಹೇಳಿದರು.

# ಮಧುಮೇಹಕ್ಕೆ ರಾಮಬಾಣ ರಂಬುಟಾನ್ ಹಣ್ಣು



ರಂಬುಟಾನ್ ಹಣ್ಣಿನಲ್ಲಿ ಅಧಿಕ ಪ್ರಮಾಣದ ವಿಟಮಿನ್ ಸಿ ಮತ್ತು ಉತ್ಕರ್ಷಣ ನಿರೋಧಕಗಳು ಇದ್ದು, ಇದು ಒಟ್ಟಾರೆ ಆರೋಗ್ಯವನ್ನು ಬೆಂಬಲಿಸುತ್ತದೆ ಮತ್ತು ಆಕ್ಸಿಡೇಟಿವ್ ಒತ್ತಡ ವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಪ್ರಮುಖವಾಗಿ ಮಧುಮೇಹದಿಂದ ಬಳಲುತ್ತಿರುವ ಜನರಿಗೆ ಶುಗರ್ ಲೆವೆಲ್ ಕಂಟ್ರೋಲ್ ಮಾಡಲು ನೆರವಿಗೆ ಬರುತ್ತದೆಮನುಷ್ಯನಿಗೆ ಎಲ್ಲಾ ಭಾಗ್ಯಗಳಿಗಿಂತ ಆರೋಗ್ಯ ಭಾಗ್ಯ ತುಂಬಾ ದೊಡ್ಡದು.

ಸಾಮಾನ್ಯವಾಗಿ ಸಣ್ಣ ಪುಟ್ಟ ಯಾವುದೇ ಆರೋಗ್ಯ ಸಮಸ್ಯೆಗಳು ಬಂದರೂ ಕೂಡ ಅದರಿಂದ ಆದಷ್ಟು ಬೇಗನೆ ಗುಣ ಕಾಣುವಂತಹ ಇಮ್ಯೂನಿಟಿ ಪವರ್ ಮನುಷ್ಯನ ರಕ್ತದಲ್ಲಿ ಇರುತ್ತದೆ. ಆದರೆ ಮಧುಮೇಹ ಕಾಣಿಸಿಕೊಂಡರೆ, ಜೀವನ ಪರ್ಯಂತ ಈ ಕಾಯಿಲೆಯೊಂದಿಗೆ ಜೀವನ ನಡೆಸಬೇಕಾದ ಪರಿಸ್ಥಿತಿ ಎದುರಾಗುತ್ತದೆ. ಹೀಗಾಗಿ ಈ ಕಾಯಿಲೆ ಬರದಂತೆ ತಡೆಯಲು ಆರೋಗ್ಯಕಾರಿ ಜೀವನಶೈಲಿ ಮತ್ತು ಆಹಾರಪದ್ಧತಿಯನ್ನು ಅನುಸರಿಸುವುದರಿಂದ, ಈ ಕಾಯಿಲೆಯ ಅಪಾಯದಿಂದ ಪಾರಾಗಬಹುದು

**ಈ ಕಾಯಿಲೆಯ ಬಗ್ಗೆ ತಜ್ಞರು ಹೇಳುವ ಪ್ರಕಾರ**

ಇನ್ನು ಈ ಕಾಯಿಲೆಯ ಬಗ್ಗೆ ತಜ್ಞರು ಹೇಳುವ ಪ್ರಕಾರ ದೇಶದಲ್ಲಿ ಮಧು ಮೇಹ ರೋಗಿಗಳ ಸಂಖ್ಯೆ ವೇಗವಾಗಿ ಹೆಚ್ಚುತ್ತಿದೆ. ಈ ಕಾರಣದಿಂದಾಗಿ, ಭಾರತವನ್ನು ಮಧುಮೇಹ ರಾಜಧಾನಿ ಎಂದೂ ಕರೆಯ ಲಾಗುತ್ತದೆ. ಇದು ಗುಣಪಡಿಸಲಾಗದ ಕಾಯಿಲೆಯಾಗಿದ್ದು, ಒಮ್ಮೆ ಸೋಂಕಿಗೆ ಒಳಗಾದ ನಂತರ ಜೀವನಪರ್ಯಂತ ನಿಮ್ಮೊಂದಿಗೆ ಇರುತ್ತದೆ. ರಕ್ತದಲ್ಲಿನ ಸಕ್ಕರೆ ಮಟ್ಟವು ಹೆಚ್ಚಾಗುತ್ತದೆ, ಆದರೆ ಮೇದೋಜ್ಜೀರಕ ಗ್ರಂಥಿಯ ಇನ್ಸುಲಿನ್ ಸ್ರವಿಸುವಿಕೆಯು ಕಡಿಮೆಯಾಗುತ್ತದೆ ಅಥವಾ ನಿಲ್ಲುತ್ತದೆ.

**ಮಧುಮೇಹ ಕಾಯಿಲೆಯಿಂದ ಬಳಲುತ್ತಿರುವವರು**

ಇನ್ನು ಈಗಾಗಲೇ ಮಧುಮೇಹ ಕಾಯಿಲೆಯಿಂದ ಬಳಲುತ್ತಿರುವವರು ತಮ್ಮ ದೈನಂದಿನ ಆಹಾರಪದ್ಧತಿಯಲ್ಲಿ ಬದಲಾವಣೆ ಮಾಡಿ ಕೊಳ್ಳುವುದು ಬಹಳ ಮುಖ್ಯ ಎಂದು ತಜ್ಞರು ಕೂಡ ಸಲಹೆ ನೀಡುತ್ತಾರೆ. ಆದರೆ ಶುಗರ್ ಇರುವವರಿಗೆ ಆಹಾರ ಪದ್ಧತಿಯಲ್ಲಿ ಬಹಳಷ್ಟು ಎಚ್ಚರಿಕೆ ವಹಿಸ ಬೇಕಾದ ಕಾರಣ, ಯಾವ ಬಗೆಯ ಆಹಾರ ತಿನ್ನಬೇಕು ಯಾವು ದನ್ನು ತಿನ್ನಬಾರದು ಎನ್ನುವ ಗೊಂದಲವಿರುತ್ತದೆ. ಆದರೆ ನಿಮಗೆ ಗೊತ್ತಿರಲಿ ಮೊದಲಿಗೆ ವೈದ್ಯರ ಸಲಹೆ ಪಡೆದು, ಅವರು ನೀಡಿರುವ ಮಾತ್ರೆಗಳನ್ನು ಪ್ರತಿ ದಿನ ಸೇವನೆ ಮಾಡುವ ಜೊತೆಗೆ ರಂಬುಟಾನ್ ಎನ್ನುವ ಹಣ್ಣನ್ನು ಕೂಡ ಮಿತಪ್ರಮಾಣದಲ್ಲಿ ಸೇವನೆ ಮಾಡುವ ಅಭ್ಯಾಸ ಮಾಡಿ ಕೊಂಡರೆ ಒಳ್ಳೆಯದು. ಯಾಕೆಂದ್ರೆ ಈ ಹಣ್ಣು ಮಧುಮೇಹ ರೋಗಿಗಳಿಗೆ ಪ್ರಬಲ ಔಷಧವಾಗಿದೆ ಎಂದು ಹಲವಾರು ಅಧ್ಯಯನಗಳು ತೋರಿಸಿವೆ, ಇದು ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ರಂಬುಟಾನ್ ಅನ್ನು ಶತಮಾನ ಗಳಿಂದ ಔಷಧಿಯಾಗಿ ಬಳಸಲಾಗುತ್ತಿದೆ.

**ರಂಬುಟಾನ್ ಹಣ್ಣು:** ಇದು ಉಷ್ಣವಲಯದ ಪ್ರದೇಶಗಳಲ್ಲಿ ಕಂಡುಬರುವ ಒಂದು ರೀತಿಯ ಹಣ್ಣು. ರಂಬುಟಾನ್ ಹಣ್ಣುಗಳು ವಿಶೇಷವಾಗಿ ದಕ್ಷಿಣ ಏಷ್ಯಾದ ದೇಶಗಳಲ್ಲಿ ಹೇರಳವಾಗಿವೆ. ರಂಬುಟಾನ್ ಹಣ್ಣುಗಳು ಮೊಟ್ಟೆಯ ಆಕಾರದ ಹಣ್ಣುಗಳಾಗಿದ್ದು, ಅವು ಅನೇಕ ಬಣ್ಣಗಳಲ್ಲಿ ಕಂಡುಬರುತ್ತವೆ. ಅವು ಆರೋಗ್ಯಕ್ಕೆ ಪ್ರಯೋಜನಕಾರಿಯಾದ ಅನೇಕ ಔಷಧೀಯ ಗುಣಗಳನ್ನು ಹೊಂದಿವೆ. ಆಯುರ್ವೇದದಲ್ಲಿ ಅವುಗಳನ್ನು ಔಷಧಿಯಾಗಿ ಬಳಸಲಾಗುತ್ತದೆ. ಇದನ್ನು ವಿಶೇಷವಾಗಿ ಮಧುಮೇಹ ರೋಗಿಗಳಿಗೆ ರಾಮಬಾಣವೆಂದು ಪರಿಗಣಿಸಲಾಗುತ್ತದೆ. ಇದನ್ನು ಸೇವಿಸುವುದು ಮಧುಮೇಹಕ್ಕೆ ಪ್ರಯೋಜನಕಾರಿಯಾಗಿದೆ. ಹೆಚ್ಚುವರಿಯಾಗಿ, ರಂಬುಟಾನ್‌ನಲ್ಲಿರುವ ಹೆಚ್ಚಿನ ಫೈಬರ್ ರಕ್ತ ಪ್ರವಾಹಕ್ಕೆ ಗ್ಲೂಕೋಸ್ ಹೀರಿಕೊಳ್ಳುವಿಕೆಯನ್ನು ನಿಧಾನಗೊಳಿಸುವ ಮೂಲಕ ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ರಂಬುಟಾನ್‌ನಲ್ಲಿ ಹೆಚ್ಚಿನ ವಿಟಮಿನ್ ಸಿ ಮತ್ತು ಉತ್ಕರ್ಷಣ ನಿರೋಧಕಗಳು ಇದ್ದು ಅದು ಒಟ್ಟಾರೆ ಆರೋಗ್ಯವನ್ನು ಬೆಂಬಲಿಸುತ್ತದೆ ಮತ್ತು ಆಕ್ಸಿಡೇಟಿವ್ ಒತ್ತಡವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಮತ್ತು ಮಧುಮೇಹದಿಂದ ಹೋರಾಡುತ್ತಿರುವ ಜನರಿಗೆ ಇದು ಅತ್ಯಂತ ಮುಖ್ಯವಾಗಿದೆ.

# ಪಿತೃಪಕ್ಷದಲ್ಲಿ ಪಿತೃಗಳು ಮನೆಗೆ ಬಂದರೆ ಈ ಕೆಳಗಿನ ಚಿಹ್ನೆಗಳನ್ನು ಕಾಣಬಹುದು..!

ವಿಶ್ವಾಸ್.ಡಿ.ಗೌಡ

ಉದಯವಾಹಿನಿ, ವಿಶೇಷ



ವಿಷ್ಣುಪುರಾಣದ ಪ್ರಕಾರ, ಕಾಗೆಯನ್ನು ಪೂರ್ವಜರ ಸಂಕೇತವೆಂದು ಪರಿಗಣಿಸಲಾಗುತ್ತದೆ, ಶ್ರಾದ್ಧ ಪಕ್ಷದಲ್ಲಿ ಕಾಗೆಯನ್ನು ನೋಡುವುದು ಬಹಳ ವಿಶೇಷವೆಂದು ಪರಿಗಣಿಸಲಾಗುತ್ತದೆ.

ಪಿತೃ ಪಕ್ಷದಲ್ಲಿ ಕಾಗೆಗಳಿಗೆ ಹೆಚ್ಚಿನ ಭಕ್ತಿ ಮತ್ತು ವಿನಮ್ರತೆಯಿಂದ ಆಹಾರವನ್ನು ನೀಡುವುದಕ್ಕೂ ಕೂಡ ಇದೇ ಕಾರಣವಾಗಿದೆ. ಕಾಗೆಯ ಮೂಲಕವೇ ಪೂರ್ವಿಕರು ತಮ್ಮ ಆಗಮನವನ್ನು ಸೂಚಿಸುತ್ತಾರೆ ಎಂದು ನಂಬಲಾಗಿದೆ.

**ಕಾಗೆಯ ಬಾಯಿಯಲ್ಲಿ ಹುಲ್ಲು...** ಶ್ರಾದ್ಧ ಪಕ್ಷದ ಸಮಯದಲ್ಲಿ ಕಾಗೆ ನಿಮ್ಮ ಮನೆಯ ಛಾವಣಿಯ ಮೇಲೆ ಒಣ ಒಣಹುಲ್ಲಿನೊಂದಿಗೆ ಕುಳಿತರೆ, ಪೂರ್ವಿಕರು ನಿಮ್ಮ ಮನೆಗೆ ಬರಲಿದ್ದಾರೆ ಎನ್ನುವ ಸೂಚನೆಯಾಗಿದೆ, ಕಾಗೆ ಈ ರೂಪದಲ್ಲಿ ಕಾಣಿಸಿಕೊಳ್ಳುವುದು ಸಂಪತ್ತಿನ ಆಗಮನದ ಸಂಕೇತವಾಗಿದೆ.

**ಕಾಗೆ ಮರದ ಮೇಲೆ ಕುಳಿತಿದ್ದರೆ..**

ಯಾವುದೋ ಒಂದು ಕಾಗೆ ಇದ್ದಕ್ಕಿದ್ದಂತೆ ಬಂದು ನಿಮ್ಮ ಮನೆಯ ಎದುರಿರುವ ಮರದ ಮೇಲೆ ಕುಳಿತುಕೊಂಡರೆ ಅದನ್ನು ಪೂರ್ವಜರ ಆಗಮನದ ಸಂಕೇತವೆಂದು ಪರಿಗಣಿಸಲಾಗುತ್ತದೆ. ಹಸಿರು ಮರದ ಮೇಲೆ ಕಾಗೆ ಕುಳಿತಿರುವುದರ ಅರ್ಥವೇನೆಂದರೆ ನಿಮ್ಮ ಮನೆ ಪೂರ್ವಜರಿಂದ ಆಶೀರ್ವಾದ ಪಡೆದಿದೆ ಮತ್ತು ಶೀಘ್ರದಲ್ಲೇ ನಿಮ್ಮ ಮನೆ ಸಂಪತ್ತು ಮತ್ತು ವೈಭವದಿಂದ ತುಂಬಿರುತ್ತದೆ ಎನ್ನುವುದನ್ನು ಹೇಳುತ್ತದೆ. ನಿಮ್ಮ ಮನೆಯ ಸುತ್ತಲೂ ಕಾಗೆ ಹೂವುಗಳು ಮತ್ತು ಎಲೆಗಳನ್ನು ಬಾಯಿಯಲ್ಲಿ ಕಚ್ಚಿತಂದು ಬೀಳಿಸಿರುವುದನ್ನು ನೀವು ನೋಡಿದರೆ, ಪೂರ್ವಜರು ನಿಮ್ಮ ಸುತ್ತ ಇದ್ದಾರೆ ಮತ್ತು ನಿಮ್ಮೊಂದಿಗೆ ತುಂಬಾ ಸಂತೋಷವಾಗಿದ್ದಾರೆ ಎಂದು ಅರ್ಥಮಾಡಿಕೊಳ್ಳಿ. ಅವರ ಆಶೀರ್ವಾದದಿಂದ ಶೀಘ್ರದಲ್ಲೇ ನಿಮ್ಮ ಎಲ್ಲಾ ತೊಂದರೆಗಳು ದೂರವಾಗುತ್ತವೆ ಮತ್ತು ನಿಮ್ಮ ಎಲ್ಲಾ ಆಸೆಗಳು ಈಡೇರುತ್ತವೆ.

ಹಸುವಿನ ಬೆನ್ನ ಮೇಲೆ ಕಾಗೆ ಕುಳಿತಿರುವುದನ್ನು ನೀವು ನೋಡಿದರೆ, ಈಗ ನಿಮ್ಮ ಮನೆಯಲ್ಲಿ ಸಮೃದ್ಧಿ ಬರುತ್ತದೆ, ನಿಮ್ಮ ಎಲ್ಲಾ ತೊಂದರೆಗಳು ಶೀಘ್ರದಲ್ಲೇ ಕೊನೆಗೊಳ್ಳುತ್ತದೆ ಎನ್ನುವುದನ್ನು ಅರ್ಥೈಸಿಕೊಳ್ಳುತ್ತದೆ. ಪೂರ್ವಜರ ಆಶೀರ್ವಾದದಿಂದ ನೀವು ಸಂಪತ್ತನ್ನು ಪಡೆಯುತ್ತೀರಿ.

ಆಹಾರ ಸೇವಿಸಿದ ನಂತರ ಕಾಗೆ ಬಲಭಾಗದಿಂದ ಬಂದು ಎಡಕ್ಕೆ ಹೋದರೆ, ನೀವು ಪೂರ್ವಜರಿಗೆ ನೀಡಿದ ಪ್ರಸಾದವನ್ನು ಅವರು ಸ್ವೀಕರಿಸಿದ್ದಾರೆ ಎಂದು ಅರ್ಥಮಾಡಿಕೊಳ್ಳಿ. ಇಂತಹ ಪರಿಸ್ಥಿತಿಯಲ್ಲಿ, ನಿಮ್ಮ ಪೂರ್ವಜರ ಶ್ರಾದ್ಧ ಕರ್ಮವು ಯಶಸ್ವಿಯಾಗಿದೆ ಎಂದು ಪರಿಗಣಿಸಲಾಗುತ್ತದೆ ಮತ್ತು ನೀವು ಅವರ ಆಶೀರ್ವಾದವನ್ನು ಪಡೆಯುತ್ತೀರಿ ಅಂತ ತಿಳಿಯಬೇಕು..



# ಮದ್ಯವ್ಯಸನ: ಒಂದು ಕುಟುಂಬದ ದುರಂತ, ಸಾಮಾಜಿಕ ಅಗೌರವ


ಅನಿಲ್ ಕುಮಾರ್ ಮ.ತೇಲಂಗಿ
ಮುದ್ದೇಬಿಹಾಳ

ಉದಯವಾಹಿನಿ, ವಿಶೇಷ

ಮದ್ಯಪಾನವೆಂದರೆ ಕೆಲವರಿಗೆ ಇದೊಂದು ಕೇವಲ ಹವ್ಯಾಸ, ಅಥವಾ ತಮ್ಮ ಒತ್ತಡಗಳನ್ನು ಮರೆಯಲು ಒಂದು ದಾರಿ. ಆದರೆ ಅರಿವಿಲ್ಲದೆ ಇದೇ ಹವ್ಯಾಸ ಜೀವನದ ನಾಶಕ್ಕೆ ಕಾರಣವಾಗುತ್ತದೆ. ಆರಂಭದಲ್ಲಿ ಕುಡಿದಾಗ ಸಿಗುವ ಆನಂದ, ನಂತರ ಇಡೀ ಬದುಕನ್ನು ಆವರಿಸಿಕೊಳ್ಳುವ ಕರಾಳತೆಯಾಗಿ ಪರಿಣಮಿಸುತ್ತದೆ. ಮದ್ಯವ್ಯಸನವು ಕೇವಲ ವ್ಯಸನಿಯ ದೇಹವನ್ನು ಮಾತ್ರವಲ್ಲದೆ, ಇಡೀ ಕುಟುಂಬದ ಭವಿಷ್ಯವನ್ನೇ ಹಾಳು ಮಾಡುತ್ತದೆ.

ಇದು ಕೇವಲ ವೈಯಕ್ತಿಕ ಸಮಸ್ಯೆಯಲ್ಲ, ಬದಲಿಗೆ ಇಡೀ ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುವ ಒಂದು ಸಾಮಾಜಿಕ ಪಿಡುಗು.

ಕುಟುಂಬಕ್ಕೆ ಅಗೌರವ ತರುವ ಮದ್ಯವ್ಯಸನ



ಮದ್ಯವ್ಯಸನಿಗಳು ತಮ್ಮನ್ನು ತಾವು ಕಳೆದುಕೊಳ್ಳುವುದರ ಜೊತೆಗೆ, ತಮ್ಮ ಕುಟುಂಬದ ಗೌರವವನ್ನೂ ಹಾಳುಮಾಡುತ್ತಾರೆ. ಮನೆಯ ಯಜಮಾನನೇ ಮದ್ಯವ್ಯಸನಿಯಾಗಿದ್ದರೆ, ಆ ಮನೆಯಲ್ಲಿ ಶಾಂತಿ ಮತ್ತು ನೆಮ್ಮದಿ ಇರುವುದಿಲ್ಲ. ಕುಡಿದು ಬಂದು ರಂಪಾಟ ಮಾಡುವುದು, ಕುಟುಂಬ ಸದಸ್ಯರ ಮೇಲೆ ದೌರ್ಜನ್ಯ ನಡೆಸುವುದು, ಮತ್ತು ಹಣವನ್ನು ಅನಗತ್ಯವಾಗಿ ಕುಡಿತಕ್ಕೆ ಖರ್ಚು ಮಾಡುವುದು ಸಾಮಾನ್ಯವಾಗುತ್ತದೆ. ಇದು ಮನೆಯ ಆರ್ಥಿಕ ಸ್ಥಿತಿಯನ್ನು ಹದಗೆಡಿಸುತ್ತದೆ, ಮಕ್ಕಳ ಶಿಕ್ಷಣದ ಮೇಲೆ ಪರಿಣಾಮ ಬೀರುತ್ತದೆ, ಮತ್ತು ಕುಟುಂಬ ಸದಸ್ಯರು ಸಮಾಜದಲ್ಲಿ ತಲೆ ಎತ್ತಿ ನಡೆಯಲು ಕಷ್ಟಪಡುವಂತೆ ಮಾಡುತ್ತದೆ. ಮದ್ಯಪಾನಿಯ ತಪ್ಪುಗಳಿಗೆ ಇಡೀ ಕುಟುಂಬವೇ ತಲೆತಗ್ಗಿಸಬೇಕಾಗುತ್ತದೆ. ಒಬ್ಬ ವ್ಯಸನಿಯ ನಡವಳಿಕೆ ಕುಟುಂಬದ ಸದಸ್ಯರಿಗೆ ಮುಜುಗರ ತರುತ್ತದೆ. ನೆರೆಹೊರೆಯವರ ಮುಂದೆ, ಸಂಬಂಧಿಕರ ಮುಂದೆ ಗೌರವ ಕಳೆದುಕೊಳ್ಳುತ್ತಾರೆ. ಮಕ್ಕಳು ತಮ್ಮ ಗೆಳೆಯರೊಂದಿಗೆ ಮುಕ್ತವಾಗಿ ಬೆರೆಯಲು ಹೆದರುತ್ತಾರೆ, ಏಕೆಂದರೆ ತಮ್ಮ ತಂದೆಯ ವರ್ತನೆ ಅವರಿಗೆ ಅವಮಾನ ತರಬಹುದು ಎಂಬ ಭಯ ಕಾಡುತ್ತದೆ. ಮದ್ಯಪಾನವೆಂದರೆ **ನೆಪ ಬೇಕೇ ಬೇಕು:** ಸ್ನೇಹಿತರು ಸಿಕ್ಕರೆ, ಖುಷಿಯಾದರೆ, ದುಃಖವಾದರೆ, ಹಬ್ಬ ಆದರೆ – ಯಾವುದೇ ಸನ್ನಿವೇಶವಿರಲಿ, ಕುಡಿಯಲು ಒಂದು ಕಾರಣ ಸಿಗುತ್ತದೆ. ಈ ನೆಪಗಳು ಕ್ರಮೇಣ ಅವಶ್ಯಕತೆಯಾಗಿ ಮಾರ್ಪಟ್ಟು, ವ್ಯಸನವಾಗಿ ಬೆಳೆಯುತ್ತವೆ.

**ದೇಹದ ಮೇಲಿನ ಮಾರಕ ಪರಿಣಾಮಗಳು:** ಮದ್ಯಪಾನವು ದೇಹದ ಮೇಲೆ ಮಾರಕ ಪರಿಣಾಮಗಳನ್ನು ಬೀರುತ್ತದೆ. ದೀರ್ಘಕಾಲದ ಮದ್ಯಪಾನದಿಂದ ಯಕೃತ್ತು (liver), ಹೃದಯ, ಮೆದುಳು, ಮತ್ತು ಮೇದೋಜೀರಕ ಗ್ರಂಥಿ (pancreas) ಹಾಳಾಗುತ್ತವೆ.

**ಯಕೃತ್ತು:** ಮದ್ಯದ ವಿಷಕಾರಿ ಅಂಶಗಳನ್ನು ಯಕೃತ್ತು ಸಂಸ್ಕರಿಸಬೇಕಾಗುತ್ತದೆ. ಅತಿಯಾದ ಮದ್ಯಪಾನವು ಯಕೃತ್ತಿನ ಉರಿಯೂತ (hepatitis) ಫ್ಯಾಟಿ ಲಿವರ್, ಮತ್ತು ಕೊನೆಗೆ ಯಕೃತ್ತಿನ ಸಿರೋಸಿಸ್ (cirrhosis)ನಂತಹ ಮಾರಣಾಂತಿಕ ಕಾಯಿಲೆಗಳಿಗೆ ಕಾರಣವಾಗುತ್ತದೆ. ಯಕೃತ್ತಿನ ಕಾರ್ಯಕ್ಷಮತೆ ಕಡಿಮೆಯಾದಾಗ, ದೇಹದ ವಿಷಕಾರಿ ಅಂಶಗಳು ಹೊರಹಾಕಲಾಗದೆ ವ್ಯಸನಿಯು ಸಾವಿನ ಅಂಚಿಗೆ ಹೋಗುತ್ತಾನೆ.

**ಹೃದಯ:** ಅತಿಯಾದ ಕುಡಿತವು ರಕ್ತದೊತ್ತಡ ಹೆಚ್ಚಿಸುವುದರಿಂದ ಹೃದಯಾಘಾತ ಮತ್ತು ಪಾರ್ಶ್ವವಾಯು ಅಪಾಯವನ್ನು ಹೆಚ್ಚಿಸುತ್ತದೆ.

**ಮೆದುಳು:** ಮದ್ಯಪಾನವು ಮೆದುಳಿನ ಜೀವಕೋಶಗಳನ್ನು ನಾಶಪಡಿಸುತ್ತದೆ, ಇದರಿಂದಾಗಿ ನೆನಪಿನ ಶಕ್ತಿ ಕಡಿಮೆಯಾಗುವುದು, ಸರಿಯಾದ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಾಗದೆ ಇರುವುದು, ಖಿನ್ನತೆ ಉಂಟಾಗುತ್ತದೆ.

**ಕ್ಯಾನ್ಸರ್ ಅಪಾಯ:** ಮದ್ಯಪಾನವು ಬಾಯಿ, ಗಂಟಲು, ಅನ್ನನಾಳ, ಯಕೃತ್ತಿನ ಕ್ಯಾನ್ಸರ್‌ಗೆ ಕಾರಣವಾಗಬಹುದು.

**ಸಂದೇಶ:** ಹೊಸ ಬದುಕಿಗೆ ಹೆಜ್ಜೆ ಹಾಕಿ ಮದ್ಯವ್ಯಸನದಿಂದ ಹಣ ಖರ್ಚು ಗೌರವ ಹಾಳು, ಮನೆಯ ಸ್ವಾಸ್ಥ್ಯ ಹಾಳು, ಆರೋಗ್ಯದ ನಾಶ ಖಚಿತ. ಆದರೆ ಈ ದುರಂತದಿಂದ ಹೊರಬರಲು ಇನ್ನೂ ದಾರಿಯಿದೆ. ಮದ್ಯವ್ಯಸನವನ್ನು ಬಿಡುವುದು ಸುಲಭವಲ್ಲ, ಆದರೆ ಅಸಾಧ್ಯವೇನಲ್ಲ. ನೀವು ಮದ್ಯವ್ಯಸನಿಯಾಗಿದ್ದರೆ, ಅಥವಾ ನಿಮ್ಮ ಮನೆಯಲ್ಲಿ ಯಾರಾದರೂ ವ್ಯಸನಿಯಾಗಿದ್ದರೆ, ಸಹಾಯ ಪಡೆಯುವುದು ಅತ್ಯಂತ ಮುಖ್ಯ. ಮಾನಸಿಕ ತಜ್ಞರು, ನಶೆಮುಕ್ತ ಕೇಂದ್ರಗಳು, ಮತ್ತು ಕುಟುಂಬದ ಬೆಂಬಲದಿಂದ ಈ ವ್ಯಸನದಿಂದ ಹೊರಬರಬಹುದು. ನಿಮ್ಮನ್ನು ನಂಬಿದ ಜೀವಗಳನ್ನು ಬಿಟ್ಟು ಹೋಗುವ ದಾವಂತದಲ್ಲಿ ಬದುಕಬೇಡಿ. ನಿಮ್ಮ ಪೋಷಕರು, ಪತ್ನಿ, ಮಕ್ಕಳ ಭವಿಷ್ಯ ನಿಮ್ಮ ಕೈಯಲ್ಲಿದೆ. ಮದ್ಯಪಾನವನ್ನು ಬಿಟ್ಟು, ನೀವು ಆರೋಗ್ಯಕರ ಜೀವನ ನಡೆಸಬಹುದು ನಿಮ್ಮ ಕುಟುಂಬದ ಗೌರವವನ್ನು ಮರಳಿ ಗಳಿಸಬಹುದು. ಇದು ನಿಮ್ಮ ಬದುಕಿನ ಹೊಸ ಆರಂಭಕ್ಕೆ ನಾಂದಿಯಾಗಲಿದೆ. ನೆನಪಿಡಿ, ಮದ್ಯಪಾನವು ನಿಮ್ಮ ತಾತ್ಕಾಲಿಕ ಸಂತೋಷಕ್ಕೆ ಕಾರಣವಾಗಬಹುದು, ಆದರೆ ಅದು ನಿಮ್ಮ ಜೀವನದ ಶಾಶ್ವತ ನಾಶಕ್ಕೆ ದಾರಿಮಾಡಿ ಕೊಡುತ್ತದೆ. ನಿಮ್ಮ ನಿಮ್ಮ ಕುಟುಂಬದ ಭವಿಷ್ಯವನ್ನು ರಕ್ಷಿಸಿಕೊಳ್ಳಲು ಮದ್ಯವ್ಯಸನವನ್ನು ತ್ಯಜಿಸಿ.

# ತಹಶೀಲ್ದಾರರ ನೇತೃತ್ವದಲ್ಲಿ ಎಸ್‌ಎಫ್‌ಐ ಮುಖಂಡರ ಸಭೆ, ಬೇಡಿಕೆ ಈಡೇರಿಸಲು ಭರವಸೆ

• ಉದಯವಾಹಿನಿ ಸುದ್ದಿ

**ಕಾರಟಗಿ:** ಎಸ್‌ಎಫ್‌ಐ ಗಂಗಾವತಿ, ತಾಲ್ಲೂಕು ಸಮಿತಿ ಕಾರಟಗಿಯಲ್ಲಿ ಬೃಹತ್ ಪ್ರತಿಭಟನೆ ಮಾಡಿ ಮಾನ್ಯ ಸಿದ್ದರಾಮಯ್ಯನವರು ಮುಖ್ಯಮಂತ್ರಿಗಳು ಕರ್ನಾಟಕ ಸರ್ಕಾರ ಇವರಿಗೆ, ಮಾನ್ಯ ಶಿವರಾಜ್ ಎಸ್ ತಂಗಡಗಿ ಮಾನ್ಯ ಹಿಂದುಳಿದ ವರ್ಗಗಳ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಿಗೆ ಹೋರಾಟದ ಮನವಿಯನ್ನ ಮಾನ್ಯ ತಹಶೀಲ್ದಾರರ ಮುಖಾಂತರ ಸಲ್ಲಿಸಿತ್ತು, ಈ ಬಗ್ಗೆ ಕಾರಟಗಿಯಲ್ಲಿ ಮಾನ್ಯ ಕುಮಾರಸ್ವಾಮಿಯವರು ತಹಶೀಲ್ದಾರರು ನೇತೃತ್ವದಲ್ಲಿ ವಿವಿಧ ಇಲಾಖೆ ಅಧಿಕಾರಿಗಳ ಸಭೆ ಕರೆದು ಈ ಬೇಡಿಕೆಗಳನ್ನು ಚರ್ಚಿಸಲಾಯಿತು.


ಉದಯವಾಹಿನಿ ಚಿತ್ರ

1ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಬೇಕು
2 ವಿದ್ಯಾರ್ಥಿಗಳ ಅನುಗುಣವಾಗಿ ವಿವಿಧ ಹಾಸ್ಟೆಲ್‌ಗಳನ್ನು ಪ್ರಾರಂಭಿಸಲು
3 ಮತ್ತು ಶೈಕ್ಷಣಿಕ ಬೇಡಿಕೆಗಳಾದ ಹಳ್ಳಿಯಿಂದ ಬರುವಂತಹ ವಿದ್ಯಾರ್ಥಿಗಳಿಗೆ ಬಸ್ ಸೌಲಭ್ಯ ಕಲ್ಪಿಸಲು ಲೈಬ್ರರಿ ಶೌಚಾಲಯ ಊಟದ ಕೋಣೆಗಳು ಮೌಲಾನ ಆಜಾದ ಹೊಸ ಕಟ್ಟಡ ಕಾಮಗಾರಿ ಪೂರ್ಣಗೊಳಿಸಿ ವಿದ್ಯಾರ್ಥಿಗಳನ್ನು ಹೊಸ ಕಟ್ಟಡಕ್ಕೆ ಸ್ಥಳಾಂತರಿಸಬೇಕು ಮತ್ತು ಕೆಲ ವಿದ್ಯಾರ್ಥಿಗಳಿಗೆ ಶಿಕ್ಷಕರ ಕೊರತೆ ಇದ್ದು ಕೂಡಲೇ ಬಗೆಹರಿಸಬೇಕೆಂದು ಚರ್ಚಿಸಲಾಯಿತು ಮತ್ತು ತಕ್ಷಣ ಬಗೆಹರಿಯುವ ಸಮಸ್ಯೆಗಳು ಶೌಚಾಲಯ ಲೈಬ್ರರಿ ಊಟದ ಕೋಣೆಗಳು ಬಸ್ ಸೌಲಭ್ಯಗಳು ಶಿಕ್ಷಕರ ನೇಮಕ ಮಾಡುವುದು ಮಾನ್ಯ ತಹಶೀಲ್ದಾರರು ಕುಮಾರ ಸ್ವಾಮಿಯವರು ಭರವಸೆ ಕೊಟ್ಟರು ಹೊಸ ಪ್ರಥಮ ದರ್ಜೆ ಕಾಲೇಜು ಮತ್ತು ವಿವಿಧ ಹೊಸ ಹಾಸ್ಟೆಲ್ ಗಳನ್ನು ಪ್ರಾರಂಭಿಸಲು ಸರ್ಕಾರಕ್ಕೆ ಪತ್ರ ಬರೆಯುವುದಾಗಿ ತಿಳಿಸಿದರು, ಈ ಸಂದರ್ಭದಲ್ಲಿ ವಿವಿಧ ಇಲಾಖೆ ಅಧಿಕಾರಿಗಳಾದ ಬಿಸಿಎಂ ಇಲಾಖೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು, ಅಲ್ಪಸಂಖ್ಯಾತ ಇಲಾಖೆ ಅಧಿಕಾರಿಗಳು, ksrtc ಅಧಿಕಾರಿಗಳು, ಪುರಸಭೆಯ ಅಧಿಕಾರಿಗಳು, ಕಾಲೇಜಿನ ಪ್ರಾಂಶುಪಾಲರು ಮತ್ತು sfi ತಾಲ್ಲೂಕು ಅಧ್ಯಕ್ಷ ನಾಗರಾಜ ಯು ಕಾರ್ಯದರ್ಶಿ ಬಾಲಾಜಿ ಚಳ್ಳಾರಿ ಉಪಾಧ್ಯಕ್ಷ ಶರೀಫ್ ಸಹ ಕಾರ್ಯದರ್ಶಿ ಬಾಲಾಜಿ ಚಳ್ಳಾರಿ ಉಪಸ್ಥಿತಿಯಲ್ಲಿದ್ದರು,

# ಕಾಂಗ್ರೇಸ್ ಪಕ್ಷನಿಷ್ಠರಿಗೆ ಪಂಚಾಯಿತಿ ಚುನಾವಣೆ ಟಿಕೆಟ್

ಉದಯವಾಹಿನಿ ಚಿತ್ರ


• ಉದಯವಾಹಿನಿ, ಕಂಪ್ಲಿ

ಮುಂಬರುವ ತಾಲ್ಲೂಕು, ಜಿಲ್ಲಾ ಪಂಚಾಯಿತಿ ಚುನಾವಣೆಗಳಲ್ಲಿ ಪಕ್ಷನಿಷ್ಠ ಮತ್ತು ಕ್ರಿಯಾಶೀಲರಿಗೆ ಟಿಕೆಟ್ ನೀಡಲಾಗುವುದು ಎಂದು ಕೆಪಿಸಿಸಿ ಎಸ್ಸಿ ರಾಜ್ಯ ಘಟಕದ ಅಧ್ಯಕ್ಷ ಧರ್ಮಸೇನ ತಿಳಿಸಿದರು. ಇಲ್ಲಿಯ ಶಾಸಕರ ಜನಸಂಪರ್ಕ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಸಮುದಾಯದವರ ಕುಂದುಕೊರತೆ, ದೊರೆಯಬೇಕಾದ ಸೌಲಭ್ಯಗಳು, ಪಕ್ಷ ಸಂಘಟನೆಯಲ್ಲಿ ಎಸ್ಸಿಗಳ ಪಾತ್ರ ಕುರಿತ ಚರ್ಚೆಯಲ್ಲಿ ಅವರು ಮಾತನಾಡಿದರು. ಕನಿಷ್ಠ ಪ್ರತಿ ಮೂರು ತಿಂಗಳಿಗೊಮ್ಮೆ ಈ ರೀತಿಯ ಸಭೆ ನಡೆಸುವುದರ ಜೊತೆಗೆ ಕಾಂಗ್ರೇಸ್ ಪಕ್ಷದ ಸಿದ್ದಾಂತ, ನಾಯಕತ್ವ ಮತ್ತು ಸರ್ಕಾರ, ಪಕ್ಷದ ಕಾರ್ಯಕ್ರಮಗಳ ಬಗ್ಗೆ ಹೆಚ್ಚು ಪ್ರಚಾರಪಡಿಸಬೇಕು. ಪಕ್ಷದ ಪ್ರಗತಿ ಕುರಿತಂತೆ ಸಾಮಾಜಿಕ ಜಾಲತಾಣಗಳ ಸದ್ಬಳಕೆ ಕೌಶಲವು ಅಗತ್ಯ ಎಂದು ವಿವರಿಸಿದರು. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಹಣವನ್ನು ಅನ್ಯಕಾರ್ಯಕ್ಕೆ ಬಳಕೆ ಕುರಿತ ಬಿಜೆಪಿ ನಾಯಕರ ಅಪಾದನೆಯಲ್ಲಿ ಸತ್ಯಾಂಶವಿಲ್ಲ ಎಂದು ಸ್ಪಷ್ಟಪಡಿಸಿದರು. ಶಾಸಕ ಜೆ.ಎನ್. ಗಣೇಶ್ ಮಾತನಾಡಿ, ಗುತ್ತಿಗೆ ಆಧಾರಿತ ಹುದ್ದೆಗಳನ್ನು ಎಸ್.ಸಿ ಸೇರಿ ಆರ್ಥಿಕವಾಗಿ ಹಿಂದುಳಿದವರಿಗೆ ದೊರಕಿಸಿಕೊಡುವಲ್ಲಿ ಸರ್ಕಾರ ಮುಂದಾಗಬೇಕು ಎಂದು ಹೇಳಿದರು. ಕಾಂಗ್ರೇಸ್ ಎಸ್ಸಿ ಜಿಲ್ಲಾ ಅಧ್ಯಕ್ಷ ವೀರಾಂಜನೇಯಲು ಮಾತನಾಡಿ, ಒಳ ಮೀಸಲಿನಿಂದ ಎಸ್ಸಿಗಳಿಗೆ ಅನುಕೂಲವಾಗಿದೆ. ಇನ್ನಷ್ಟು ಅಭಿವೃದ್ಧಿಗೆ ವಿಶೇಷ ಯೋಜನೆ ರೂಪಿಸುವಂತೆ ಮನವಿ ಮಾಡಿದರು.

**ಮಹಿಳಾ ಪ್ರಾತಿನಿಧ್ಯಕ್ಕೆ ಅವಕಾಶ ಕಲ್ಪಿಸಿ:** ಸಭೆಗೆ ಮುನ್ನ ನಡೆದ ಚರ್ಚೆಯಲ್ಲಿ ಪರಿಶಿಷ್ಟ ಜನಾಂಗದವರ ಕುಂದುಕೊರತೆಗಳ ಬಗ್ಗೆ ಪ್ರಸ್ತಾಪಿಸಲಾಯಿತು. ಪಕ್ಷ ನಿಗಮ ಮುಂತಾದ ಉನ್ನತ ಸ್ಥಾನಗಳನ್ನು ಎಸ್ಸಿಗಳಿಗೆ ನೀಡಬೇಕು. ಮೂಲ ಕಾಂಗ್ರೇಸ್ ಕಾರ್ಯಕರ್ತರನ್ನು ಕಡೆಗಣಿಸಬಾರದು. ಮಹಿಳಾ ಪ್ರಾತಿನಿಧ್ಯಕ್ಕೆ ಅವಕಾಶ ಕಲ್ಪಿಸಿಕೊಡುವುದು ಸೇರಿದಂತೆ ಹಲವು ಸಮಸ್ಯೆಗಳ ಕುರಿತು ಮುಖಂಡರ ಗಮನಸೆಳೆಯಲಾಯಿತು.

## ಡಾ.ವಿಷ್ಣುವರ್ಧನ್ 75ನೇ ಜನ್ಮದಿನ ಅಂಗವಾಗಿ ಕಲಾವಿದರು ಲೇಖಕರಿಗೆ ಸನ್ಮಾನ, ಗೀತ ಗಾಯನ

# ನಟರು ತಮ್ಮ ಪಾತ್ರಗಳ ಮೂಲಕ ಸಮಾಜದ ಮೇಲೆ ದೊಡ್ಡ ಪ್ರಭಾವ

• ಉದಯವಾಹಿನಿ, ಚಿತ್ರದುರ್ಗ

ಭಾರತೀಯ ಯೋಗ ಶಿಕ್ಷಣ ಸಂಸ್ಥೆ, ಹಾಗೂ ಕೋಟೆ ವಾಯು ವಿಹಾರಿಗಳ ಸಂಘ ಚಿತ್ರದುರ್ಗ ಇವರು ಸಂಯುಕ್ತವಾಗಿ ಕನ್ನಡ ಚಿತ್ರರಂಗದ ಮೇರುನಟ ಡಾ. ವಿಷ್ಣುವರ್ಧನ ಅವರ 75ನೇ ಜನ್ಮದಿನದ ಅಮೃತ ಮಹೋತ್ಸವ ಅಂಗವಾಗಿ ಅವರ ಕರ್ಮ ಭೂಮಿಯದ ಚಿತ್ರದುರ್ಗ ಕೋಟೆ ಆವರಣದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದಲ್ಲಿ ಡಾ. ವಿಷ್ಣುವರ್ಧನ್ ಅವರ ಜೀವನ ಕುರಿತು ಹೊರತಂದಿರುವ ಆ ಕರ್ಣನಂತೆ ಪುಸ್ತಕದ ಲೇಖಕ ಸಿದ್ದಾಪುರ ಶಿವಕುಮಾರ್ ಹಾಗೂ ಚಿತ್ರಕಲಾವಿದ ಕ್ರಿಯೇಟಿವ್ ವೀರೇಶ್ ಅವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಲೇಖಕ ಸಿದ್ದಾಪುರ ಶಿವಕುಮಾರ್ ಡಾ. ವಿಷ್ಣುವರ್ಧನ್ ಅವರು ತಮ್ಮ ವೃತ್ತಿ ಜೀವನದಲ್ಲಿ ಮಾತ್ರವಲ್ಲದೆ, ವೈಯಕ್ತಿಕ ಜೀವನದಲ್ಲಿಯೂ ತಮ್ಮ ಮಾನವೀಯ ಮೌಲ್ಯಗಳಿಗಾಗಿ ಹೆಸರುವಾಸಿಯಾಗಿದ್ದರು. ಅಭಿಮಾನಿಗಳಿಂದ ಸಾಹಸಸಿಂಹ ಎಂದು ಕರೆಸಿಕೊಳ್ಳುತ್ತಿದ್ದರೂ, ಅವರ ನಿಜವಾದ ವ್ಯಕ್ತಿತ್ವ ಅತ್ಯಂತ ನಮ್ರತೆ ಮತ್ತು ನಿರ್ಗತರ ಕುರಿತು ದಯಾ ಭಾವನೆ, ಮಹಿಳೆಯರಿಗೆ, ಹಿರಿಯ ಮತ್ತು ಕಿರಿಯರಿಗೆ ನೀಡುತ್ತಿದ್ದ ಗೌರವ ನನಗೆ ಆ ಕರ್ಣನಂತೆ ಗ್ರಂಥ ರಚನೆಗೆ ಪ್ರೇರಣೆ ನೀಡಿತು ಎಂದು ತಿಳಿಸಿದರು.

ಇದಕ್ಕೂ ಮೊದಲು ಡಾಕ್ಟರ್ ವಿಷ್ಣುವರ್ಧನ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಚಿತ್ರದುರ್ಗ ನಗರಸಭೆ ಸದಸ್ಯ ಆರ್. ಶ್ರೀನಿವಾಸ್ ಮಾತನಾಡಿ ಯಾವುದೇ ನಟರು ತಮ್ಮ ಪಾತ್ರಗಳ ಮೂಲಕ ಸಮಾಜದ ಮೇಲೆ ದೊಡ್ಡ ಪ್ರಭಾವ ಬೀರಬಹುದು.

ಸ್ಪೂರ್ತಿದಾಯಕ ಪಾತ್ರಗಳು ಕೇವಲ ಮನರಂಜನೆ ನೀಡುವುದಲ್ಲದೆ, ಪ್ರೇಕ್ಷಕರಿಗೆ ಹೊಸ ಆಲೋಚನೆಗಳನ್ನು ಮತ್ತು ಸಕಾರಾತ್ಮಕ ಮೌಲ್ಯಗಳನ್ನು ಕಲಿಸುತ್ತವೆ. ಅಂತಹ ಪೂರ್ತಿದಾಯಕ, ಕೌಟುಂಬಿಕ ಚಲನಚಿತ್ರಗಳ ಮೂಲಕ ಅನೇಕ ಒಡೆದುಹೋದ ಕುಟುಂಬಗಳನ್ನು ಒಟ್ಟುಗೂಡಿಸಿದ ಹಿರಿಮೆ ಡಾ. ವಿಷ್ಣುವರ್ಧನ್ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ವೇದಿಕೆ ಕಾರ್ಯಕ್ರಮದ ಬಳಿಕ ಚಿತ್ರದುರ್ಗದ ಕರಡಿ ಸಿದ್ದಾಪುರ ಗ್ರಾಮದ ಗಾಯಕ ನಾಗಭೂಷಣ್ ಅವರು ನಡೆಸಿಕೊಟ್ಟ ಡಾಕ್ಟರ್ ವಿಷ್ಣುವರ್ಧನ್ ಅವರ ಚಲನಚಿತ್ರಗಳ ಗೀತಾ ಗಾಯನ ಪ್ರೇಕ್ಷಕರನ್ನು ರಂಜಿಸಿತು.

ಕಾರ್ಯಕ್ರಮದ ಆಯೋಜಕ ಹಾಗೂ ಯೋಗ ಪ್ರಚಾರಕ ರವಿ ಕೆ. ಅಂಬೇಕರ್ ನಿರೂಪಣೆ ಹೊಂದಿದ್ದ ಈ ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರಾದ ಕೂಬ ನಾಯಕ್, ನಿವೃತ್ತ ಪೊಲೀಸ್ ಅಧಿಕಾರಿ ಮಲ್ಲಿಕಾರ್ಜುನ ಚಾರ್, ನಿವೃತ್ತ ಪಾಚಾರ್ಯ ಡಾ. ಸಂಗೇನಹಳ್ಳಿ ಅಶೋಕ್ ಕುಮಾರ್ ಹಾಗೂ ಡಾಕ್ಟರ್ ವಿಷ್ಣುವರ್ಧನ್ ಅವರ ಅನೇಕ ಅಭಿಮಾನಿಗಳು ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

### ಚಿತ್ರದುರ್ಗದ ಮೇಲೆ ಅಪಾರ ಪ್ರೀತಿ

**ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೋಟೆ ವಾಯು ವಿಹಾರಿಗಳ ಸಂಘದ ಅಧ್ಯಕ್ಷ ಆರ್ ಸತ್ಯಣ್ಣನಟ ಡಾ. ವಿಷ್ಣುವರ್ಧನ್ ಅವರಿಗೆ ಅವರ ಕರ್ಮಭೂಮಿಯದ ಚಿತ್ರದುರ್ಗದ ಮೇಲೆ ಅಪಾರ ಪ್ರೀತಿ ಇತ್ತು. ಇದು ಕೇವಲ ಮಾತಿನಲ್ಲಿ ಮಾತ್ರವಲ್ಲ, ಅವರ ನಡೆ ಮತ್ತು ನುಡಿಗಳಲ್ಲಿಯೂ ಕಾಣುತ್ತಿತ್ತು. ಈ ನೆಲದ ಮೇಲೆ ಅವರಿಗಿದ್ದ ಪ್ರೀತಿಯನ್ನು ಹಲವಾರು ಸಂದರ್ಶನಗಳಲ್ಲಿ ಮತ್ತು ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ವ್ಯಕ್ತಪಡಿಸಿದ್ದರು ಎಂದು ಹೇಳುತ್ತಾ ಸ್ವತಹ ತಾವೇ ಡಾಕ್ಟರ್ ವಿಷ್ಣುವರ್ಧನ್ ಭೇಟಿಯಾದ ಸಂದರ್ಭಗಳನ್ನು ಹಂಚಿಕೊಂಡರು.**

# ವಕೀಲರ ಸಂಘದ ಅಧ್ಯಕ್ಷರಾಗಿ ಶಶಿಕಾಂತ ಅಡಕಿ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ವಕೀಲರ ಸಂಘಕ್ಕೆ ಶನಿವಾರ ಪದಾಧಿಕಾರಿಗಳ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಒಟ್ಟಾರೆ 91ಮತಗಳಿದ್ದು 83 ಮತಗಳು ಮತದಾನವಾಗಿದ್ದು ಅಧ್ಯಕ್ಷ ಸ್ಥಾನಕ್ಕೆ ಶಶಿಕಾಂತ ಅಡಕಿ 51ಮತಗಳು ಪಡೆದು 20ಮತಗಳಿಂದ ಗೆಲುವು ಸಾಧಿಸಿದರೆ ಪ್ರತಿಸ್ಪರ್ಧಿ ಶರಣುಪಾಟೀಲ ಮೋತಕಪಳ್ಳಿ 31ಮತಗಳು ಪಡೆದರೆ,ಸಂಜುಕುಮಾರ ಮೇತ್ರಿ ಕೇವಲ 01ಮತ ಪಡೆದು ಸೋಲು ಅನುಭವಿಸಿದರು ಎಂದು ಚುನಾವಣಾಧಿಕಾರಿ ಶಾಮರಾವ ದೇಗಲಮಡಿ ಮತ್ತು ರವೀಂದ್ರ ಹೂವಿನಭಾವಿ ತಿಳಿಸಿದ್ದಾರೆ.

ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಸೂರ್ಯಕಾಂತ ಕರಣಿಕರ್ 55ಮತಗಳು ಪಡೆದು ಗೆಲುವು ಸಾಧಿಸಿದ್ದಾರೆ ಪ್ರತಿಸ್ಪರ್ಧಿ ಹಣಮಂತ ಹಿರೇಮನಿ 27ಮತಗಳು ಪಡೆದು ಸೋಲು ಅನುಭವಿಸಿದರು,01ಮತ ತೀರಸ್ಕೃತ ಗೊಂಡಿದೆ. ಉಪಾಧ್ಯಕ್ಷ ಸ್ಥಾನಕ್ಕೆ ಮಲ್ಲಿಕಾರ್ಜುನ ರಾಮತೀರ್ಥ, ಸಹ ಕಾರ್ಯದರ್ಶಿ ಸ್ಥಾನಕ್ಕೆ ದೇವೀಂದ್ರಪ್ಪ ಜಾಬೀನ್, ಖಜಾಂಚಿ ಸ್ಥಾನಕ್ಕೆ ಸುನೀಲಕುಮಾರ ಸೋಲಾಪೂರ ಅವಿರೋಧವಾಗಿ ಆಯ್ಕೆಯಾದರು.


ಉದಯವಾಹಿನಿ ಚಿತ್ರ

**20 ಮತಗಳಿಂದ ಗೆಲುವು**

ಚುನಾವಣೆ ಪ್ರಕ್ರಿಯೆ ನಂತರ ಗೆಲುವು ಸಾಧಿಸಿದ ಪದಾಧಿಕಾರಿಗಳಿಗೆ ವಕೀಲರ ಸಂಘದ ಸದಸ್ಯರು ಸನ್ಮಾನಿಸಿ ಗೌರವಿಸಿ ಸಿಹಿ ಹಂಚಿ ಸಂಭ್ರಮಿಸಿದರು.

**ಮರು ಮತದಾನ:** ಮೊದಲು ಮತ ಎಣಿಕೆ ಸಂದರ್ಭ ಶಶಿಕಾಂತ ಅಡಕಿ 53 ಮತಗಳು, ಶರಣುಪಾಟೀಲ 31 ಮತಗಳು, ಸಂಜುಕುಮಾರ ಮೇತ್ರಿ 01ಮತ ಪಡೆದಿದ್ದಾರೆ ಎಂದು ಚುನಾವಣಾಧಿಕಾರಿ ಓದಿದರು ತದನಂತರ ವಕೀಲರ ಸಂಘದ ಮಾಜಿ ಅಧ್ಯಕ್ಷ ಬಿ.ಸುದರ್ಶನ್, ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧೆ ಮಾಡಿದ ಅಭ್ಯರ್ಥಿ ಶರಣುಪಾಟೀಲ ಮಾತನಾಡಿ ಒಟ್ಟಾರೆ 83ಮತಗಳು ಚಲಾವಣೆಯಾಗಿವೆ ಆದರೆ ಮತಗಳು ಲೆಕ್ಕ ಮಾಡಿದರೆ 85 ಮತಗಳು ಬರುತ್ತಿವೆ ಎರಡು ಮತಗಳು ಹೆಚ್ಚುವರಿ ಹೇಗೆ ಬರುತ್ತವೆ ಎಂದು ಪ್ರಶ್ನೇಸಿದಾಗ ಮತ್ತೊಮ್ಮೆ ಎಣಿಕೆ ಮಾಡಿ ಶಶಿಕಾಂತ ಅಡಕಿ 51,ಶರಣುಪಾಟೀಲ 31,ಸಂಜುಕುಮಾರ ಮೇತ್ರಿ 01ಮತಗಳು ಪಡೆದಿದ್ದಾರೆ ಎಂದು ಚುನಾವಣಾಧಿಕಾರಿ ಘೋಷಿಸಿದ್ದಾರೆ.

# ಕರವೇ ಕಾರ್ಯಕರ್ತರಿಂದ ಸಿಎಂಗೆ ಮನವಿ

• ಉದಯವಾಹಿನಿ, ಬಸವನಬಾಗೇವಾಡಿ

ಕಲಬುರ್ಗಿ ಜಿಲ್ಲೆಯಲ್ಲಿ ಸೆ. 19 ರಂದು ಸರ್ಕಾರಿಯ ಕೃಷಿ ಮಾರುಕಟ್ಟೆ ಮೇಲಿರುವ ಕನ್ನಡ ನಾಮಫಲಕವನ್ನು ಕಿತ್ತಿ ಎಸೆದಿರುವ ಆಡಳಿತ ಮಂಡಳಿ, ಸರಕಾರಿ ಅಧಿಕಾರಿಗಳಿಗೆ ಕರವೇ ಕಾರ್ಯಕರ್ತರು ಮಸಿ ಬಳಿದಿರುವ ಕಾರಣಕ್ಕಾಗಿ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರನ್ನು ಬಂಧಿಸಿರುವ ಕಾರಣಕ್ಕಾಗಿ ಪಟ್ಟಣದಲ್ಲಿ ಶನಿವಾರ ಕರವೇ ಕಾರ್ಯಕರ್ತರು ಸಿಎಂ ಅವರಿಗೆ ಮನವಿಯನ್ನು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಸಂಘಟನಾ ಕಾರ್ಯದರ್ಶಿಗಳು, ಅವಳಿ ಜಿಲ್ಲಾ ಉಸ್ತುವಾರಿಯಾದ ಅಶೋಕ ಹಾರಿವಾಳ ನೇತೃತ್ವದಲ್ಲಿ ತಹಶೀಲ್ದಾರ ಮೂಲಕ ಮನವಿಯನ್ನು ನೀಡಲಾಯಿತು. ಕರವೇ ರಾಜ್ಯಾಧ್ಯಕ್ಷರಾದ ಟಿ.ಎ ನಾರಾಯಣಗೌಡರು ಅಧಿಕಾರಿಗಳಿಗೆ ಮತ್ತು ಆಡಳಿತ ಮಂಡಳಿಯವರಿಗೆ ಎಚ್ಚರಿಕೆಯನ್ನು ನೀಡಿದ್ದಾರೆ.

ಆದಷ್ಟು ಶೀಘ್ರದಲ್ಲಿ ಕರವೇ ಕಾರ್ಯಕರ್ತರ ಮೇಲೆ ಹಾಕಿರುವ ಪ್ರಕರಣವನ್ನು ಹಿಂಪಡೆದು ರಾಜ್ಯದಲ್ಲಿ ಕನ್ನಡ ಭಾಷೆಗೆ ಪ್ರಥಮ ಆದ್ಯತೆಯನ್ನು 60% ರಷ್ಟು ಕನ್ನಡಕ್ಕೆ ನೀಡಬೇಕು ಎಂದು ಸರ್ಕಾರದ ಆದೇಶ ಇದೆ. ಇಲ್ಲದಿದ್ದರೆ ಕಲಬುರ್ಗಿ ಜಿಲ್ಲೆಗೆ ಕರವೇ ಕಾರ್ಯಕರ್ತರನ್ನು ಹೋರಾಟಕ್ಕೆ ಕರೆ ಕೊಡುತ್ತೇವೆ ಎಂದು ಲಕ್ಷಕ್ಕಿಂತ ಹೆಚ್ಚು ಕರವೇ ಕಾರ್ಯಕರ್ತರು ಸೇರಿ ಬೃಹತ್ ಹೋರಾಟ ಮಾಡಿ ತಕ್ಕ ಪಾಠ ಕಲಿಸಬೇಕಾಗುತ್ತದೆ. ಎಂದು ಎಚ್ಚರಿಕೆಯನ್ನು ನೀಡಿದ್ದಾರೆ. ಈ ಸಂದರ್ಭದಲ್ಲಿ ಅನೇಕ ಕಾರ್ಯಕರ್ತರು ಹಾಜರಿದ್ದರು.


ಉದಯವಾಹಿನಿ ಚಿತ್ರ

# ತರಾತುರಿಯಲ್ಲಿ ಜಾತಿ ಸಮೀಕ್ಷೆ ಏಕೆ?: ವಚನಾನಂದ ಸ್ವಾಮೀಜಿ

• ಉದಯವಾಹಿನಿ, ಹುಬ್ಬಳ್ಳಿ



ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯನ್ನು ತರಾತುರಿಯಲ್ಲಿ ಮಾಡಿ ಸರ್ಕಾರ ಏನು ಸಾಧಿಸಲು ಹೊರಟಿದೆ. ಅವೈಜ್ಞಾನಿಕ ಎಂಬ ಕಾರಣಕ್ಕಾಗಿಯೇ ಕಾಂತರಾಜು ಆಯೋಗದ ವರದಿಯನ್ನು ತಿರಸ್ಕರಿಸಲಾಗಿದೆ. ಹೀಗಾಗಿ ಈಗ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಬೇಕು ಎಂದು ಹರಿಹರ ಪಂಚಮಸಾಲಿ ಪೀಠದ ವಚನನಂದ ಸ್ವಾಮೀಜಿ ಒತ್ತಾಯಿಸಿದರು. ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪತ್ರಿಕೆಗಳಲ್ಲಿ ಜಾಹೀರಾತು ನೀಡಿ, ಸಾರ್ವಜನಿಕರ ಆಕ್ಷೇಪಣೆ ಆಹ್ವಾನಿಸಬೇಕು. ಆ ನಂತರ ಕಾನೂನು ತಜ್ಞರ ಸಮಿತಿ ರಚಿಸಿ, ಸಮಾಜದ ಹಿರಿಯರ ಜತೆ ಚರ್ಚಿಸಿ ಸಮೀಕ್ಷೆ ನಡೆಸಬೇಕು. ಇದು ಏಳು ಕೋಟಿ ಕನ್ನಡಿಗರ ಭವಿಷ್ಯದ ಪ್ರಶ್ನೆ. ಗೊಂದಲ ನಿವಾರಿಸುವಂತೆ ಮುಖ್ಯಮಂತ್ರಿ ಮತ್ತು ಸಚಿವರಿಗೆ ಮನವಿ ಮಾಡಲಾಗಿದೆ ಎಂದು ಹೇಳಿದರು.

ಹಿಂದುಳಿದ ವರ್ಗಗಳ ಆಯೋಗವು ಜಾತಿ ಪಟ್ಟಿಯಲ್ಲಿ ಸಾಕಷ್ಟು ಗೊಂದಲ ಮೂಡಿಸಿದೆ. ಲಿಂಗಾಯತ ಕ್ರಿಶ್ಚಿಯನ್, ಮಡಿವಾಳ ಕ್ರಿಶ್ಚಿಯನ್, ಜಂಗಮ ಕ್ರಿಶ್ಚಿಯನ್, ಒಕ್ಕಲಿಗ ಕ್ರಿಶ್ಚಿಯನ್ ಎಂಬ ದೋಷಗಳನ್ನು ಉಳಿಸಿದೆ. ಒಳಪಂಗಡಗಳಲ್ಲಿ, ಲಿಂಗಾಯತ ಅಗಸಕ್ಕೆ ಒಂದು ಕೋಡ್, ಅಗಸ ಲಿಂಗಾಯಕ್ಕೆ ಇನ್ನೊಂದು ಕೋಡ್ ನೀಡಲಾಗಿದೆ. ಅಗಸ ಕ್ರಿಶ್ಚಿಯನ್ ಎಂದು ಬರೆಸಿದವರನ್ನು ಯಾವ ಧರ್ಮದವರೆಂದು ಪರಿಗಣಿಸಲಾಗುತ್ತದೆ ಎಂದು ಪ್ರಶ್ನಿಸಿದರು.

ಹುಬ್ಬಳ್ಳಿಯಲ್ಲಿ ನಡೆದ ಏಕತಾ ಸಮಾವೇಶಕ್ಕೂ, ಪಂಚಮಸಾಲಿ ಸಮಾಜಕ್ಕೂ ಸಂಬಂಧ ಇಲ್ಲ. ಶಾಸಕ ವಿಜಯಾನಂದ ಕಾಶನವರ ಅವರು ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಆ ಸಮಾವೇಶದಲ್ಲಿ ಭಾಗವಹಿಸಿದ್ದಾರೆ. ಪಂಚಮಸಾಲಿ ಪೀಠಗಳು ಹೇಳುವುದನ್ನು ಮಾತ್ರ ಸಮಾಜದವರು ಕೇಳಬೇಕು ಎಂದರು. ಅದು ಸಣ್ಣ ಸಮುದಾಯದವರ ಸಮಾವೇಶ. ಅಲ್ಲಿ ಕೇವಲ ಏಳು ಸಾವಿರ ಜನ ಮತ್ತು ಕೆಲವೇ ಸ್ವಾಮೀಜಿಗಳು ಭಾಗವಹಿಸಿದ್ದರು. ಉಳಿದಂತೆ ಪುರೋಹಿತರಿಗೆ ಕಾವಿ ಬಟ್ಟೆ ಹಾಕಿ ಕೂರಿಸಿದ್ದರು. ಸಮಾವೇಶದಲ್ಲಿ ಯಾವುದೇ ನಿರ್ಣಯ ತೆಗೆದುಕೊಂಡಿಲ್ಲ. ಅವರು ಗೊಂದಲದಲ್ಲಿದ್ದಾರೆ. ನಮ್ಮಲ್ಲಿ ಸ್ಪಷ್ಟತೆ ಇದೆ ಎಂದು ಹೇಳಿದರು.

ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಪಂಚಮಸಾಲಿ ಸಮುದಾಯದವರು ಧರ್ಮದ ಕಾಲಂನಲ್ಲಿ ಹಿಂದೂ, ಜಾತಿ ಕಾಲಂನಲ್ಲಿ ಲಿಂಗಾಯತ ಪಂಚಮಸಾಲಿ ಎಂದು ಬರೆಸುವಂತೆ ಪಂಚಮಸಾಲಿ ಪೀಠ, ವೀರಶೈವ ಲಿಂಗಾಯತ ಪಂಚಮಸಾಲಿ ಸಂಘ ನಿರ್ಣಯ ಕೈಗೊಂಡಿದೆ. 16 ಜಿಲ್ಲೆಗಳಲ್ಲಿ ಪ್ರವಾಸ ಮಾಡಿ, ಸಮಾಜದವರ ಅಭಿಪ್ರಾಯ ಆಲಿಸಿ ಈ ನಿರ್ಣಯ ಕೈಗೊಳ್ಳಲಾಗಿದೆ. ಮಠದಲ್ಲಿ ಕುಳಿತು ನಿರ್ಧಾರ ಮಾಡಿಲ್ಲ. ಈ ಬಗ್ಗೆ ಸಮುದಾಯದವರ ಮನೆಗಳಿಗೆ ಸ್ಟಿಕ್ಕರ್ ಅಂಟಿಸುವ ಮೂಲಕ ಜಾಗೃತಿ ಮೂಡಿಸಲಾಗುವುದು ಎಂದರು.

# ಭೂಸ್ವಾಧೀನಕ್ಕೆ ಶೀಘ್ರ ಪ್ರಾಧಿಕಾರ ರಚನೆ: ಆರ್.ಬಿ. ತಿಮ್ಮಾಪುರ

• ಉದಯವಾಹಿನಿ, ಬಾಗಲಕೋಟೆ

ಹೊಸ ಭೂಸ್ವಾಧೀನ ಕಾಯ್ದೆ ಪ್ರಕಾರ ಯುಕೆಪಿ ಮೂರನೇ ಹಂತದ ಯೋಜನೆ ಅನುಷ್ಠಾನಕ್ಕೆ ಬೇಕಾದ ಭೂಸ್ವಾಧೀನಕ್ಕೆ ಶೀಘ್ರ ಪ್ರಾಧಿಕಾರ ರಚನೆ ಮಾಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಇನ್ನು ಮುಂದೆ ಯೋಜನೆಗೆ ಸಂಬಂಧಿಸಿದ ಎಲ್ಲ ಭೂಸ್ವಾಧೀನದ ಪ್ರಕರಣಗಳನ್ನು ಪ್ರಾಧಿಕಾರದಲ್ಲಿಯೇ ಇತ್ಯರ್ಥ ಮಾಡಲಾಗುವುದು' ಎಂದರು.

ಆಲಮಟ್ಟಿಗೆ ಗೇಟ್ ಕೂಡಿಸುವಾಗ ನಾನೇ ಸಚಿವನಾಗಿದ್ದೆ. ಕ್ರಸ್ಟ್ ಗೇಟ್ ಕೂಡಿಸಲು ಸಾಧ್ಯವಿಲ್ಲ ಎನ್ನುವಂತಹ ಸ್ಥಿತಿ ಇತ್ತು. ಆಗಲೂ ವಿರೋಧ ವ್ಯಕ್ತವಾಗಿತ್ತು. ಆ ನಡುವೆಯೂ ಗೇಟ್ ಕೂಡಿಸಲಾಗಿತ್ತು. ಅದರಿಂದ ಲಕ್ಷಾಂತರ ಹೆಕ್ಟೇರ್ ಭೂಮಿ ನೀರಾವರಿಯಾಗಿದೆ. ಈಗಲೂ ಯೋಜನೆ ಜಾರಿಯಾಗಲಿದೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ರೈತಪರ ಚಿಂತನೆ, ಅಭಿವೃದ್ಧಿ ದೃಷ್ಟಿಯಲ್ಲಿಟ್ಟುಕೊಂಡು ನಿರ್ಧಾರ ತೆಗೆದುಕೊಳ್ಳಲಾಗಿದೆ' ಎಂದು ಹೇಳಿದರು. ಹಲವಾರು ಸುತ್ತಿನ ಚರ್ಚೆಗಳ ನಂತರ ಭೂಮಿ ಬೆಲೆ ನಿಗದಿ ಮಾಡಲಾಗಿದೆ. ಮೂರು ವರ್ಷಗಳಲ್ಲಿ ಅನುದಾನ ನೀಡಿ ಯೋಜನೆ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಹೆಚ್ಚಿನ ಪರಿಹಾರ ಕೋರಿ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳನ್ನು ಹಿಂಪಡೆಯಲು ರೈತರು ಮುಂದೆ ಬರಬೇಕು ಎಂದು ಮನವಿ ಮಾಡಿದರು. ಶಾಸಕರು, ಹೋರಾಟ ಸಮಿತಿಯ ಮುಖಂಡರು ರೈತರೊಂದಿಗೆ ಸಮನ್ವಯ ಸಾಧಿಸಿ ಪ್ರಕರಣಗಳನ್ನು ಹಿಂಪಡೆಯಲು ಮನವೊಲಿಸಬೇಕು. ಈಗಾಗಲೇ ಭೂಮಿ ಸ್ವಾಧೀನ ಕಾರ್ಯ ಪ್ರಗತಿಯಲ್ಲಿದೆ. ಅದನ್ನು ಇನ್ನಷ್ಟು ತೀವ್ರಗೊಳಿಸಲಾಗುವುದು' ಎಂದರು.

ವಸತಿ ನಿಲಯದ ಪ್ರವೇಶಕ್ಕೆ ಸಂಬಂಧಿಸಿದ ವಿದ್ಯಾರ್ಥಿನಿ ಹೇಳಿಕೆ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಈಗಾಗಲೇ ವಿದ್ಯಾರ್ಥಿನಿಗೆ ಪ್ರವೇಶ ಕೊಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದ್ದೇನೆ. ವಸತಿ ನಿಲಯ ಪ್ರವೇಶಕ್ಕೆ ಬೇಡಿಕೆ ಹೆಚ್ಚಿದೆ. ವಸತಿ ನಿಲಯ ದೊರೆಯದ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು 1,500 ನೀಡಲಾಗುತ್ತದೆ. ಹೆಚ್ಚಿನ ವಸತಿ ನಿಲಯ ನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು ಎಂದು ಹೇಳಿದರು.



### ಕೇಂದ್ರದಿಂದ ನೆರವು ಕೊಡಿಸಲಿ

**ಯುಕೆಪಿ ವಿಷಯದಲ್ಲಿ ರಾಜಕಾರಣ ಮಾಡುವುದಿಲ್ಲ. ಹಲವು ದಶಕಗಳಿಂದ ಸೌಲಭ್ಯ ವಂಚಿತರಾಗಿದ್ದೇವೆ. ಸೌಲಭ್ಯ ಒದಗಿಸುವತ್ತ ಗಮನ ಹರಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ ಹೇಳಿದರು. ಹಿಂದಿನ ಸರ್ಕಾರದಲ್ಲಿ ಎಷ್ಟು ಪರಿಹಾರ ನಿಗದಿ ಮಾಡಲಾಗಿತ್ತು ಎಂಬುದು ಎಲ್ಲರಿಗೂ ಗೊತ್ತಿದೆ. ರೈತರ ಬಗ್ಗೆ ಕಾಳಜಿ ಇದ್ದರೆ ಕೇಂದ್ರದಿಂದ ನೆರವು ಕೊಡಿಸಲಿ ಎಂದರು. ಮಹಾರಾಷ್ಟ್ರದ ಆರೋಪದಲ್ಲಿ ಯಾವುದೇ ಹುರುಳಿಲ್ಲ. ಕೇಂದ್ರ ಸರ್ಕಾರ ಕೂಡಲೇ ಗೆಜೆಟ್ ನೋಟಿಫಿಕೇಷನ್ ಮಾಡಬೇಕು ಎಂದರು.**

# ತೋಟಗಾರಿಕೆ ಬೆಳೆಯೂ ಕೊಚ್ಚಿ ಹೋಯ್ತು; ಅನ್ನದಾತನ ಗಾಯದ ಮೇಲೆ ಬರೆ

## ಅತಿವೃಷ್ಟಿಯಿಂದ ಕೃಷಿ ಬೆಳೆ ಬಹುತೇಕ ಹಾನಿ, ಕಲಬುರಗಿ ಜಿಲ್ಲೆಯಲ್ಲಿ 103.64 ತೋಟಗಾರಿಕೆ ಬೆಳೆ ನೀರು ಪಾಲು

• ಉದಯವಾಹಿನಿ, ಕಲಬುರಗಿ

ಅತಿವೃಷ್ಟಿಯಿಂದ ಕೃಷಿ ಬೆಳೆ ಬಹುತೇಕ ಹಾನಿಯಾಗಿದೆ. ಇದರ ಜತೆಗೆ ತೋಟಗಾರಿಕೆ ಬೆಳೆಯೂ ಆಗಸ್ಟ್ ಅಂತ್ಯದವರೆಗೆ ಒಟ್ಟು 103.60 ಹೆಕ್ಟೇರ್ ಹಾನಿಯಾದ ಪರಿಣಾಮ ರೈತರ ಗಾಯದ ಮೇಲೆ ಬರೆ ಎಳೆದಂತಾಗಿದೆ. ಹೆಚ್ಚು ಮಳೆ ಸುರಿದ ಪರಿಣಾಮ ಅತಿವೃಷ್ಟಿಯಾಗಿ ಕೃಷಿ ಬೆಳೆಗಳು ಈಗಾಗಲೇ ಕೊಚ್ಚಿಕೊಂಡು ಹೋಗಿವೆ. ಇದರ ಜತೆಗೆ ತೋಟಗಾರಿಕೆ ಬೆಳೆಗಳೂ ಸಹ ಸಂಪೂರ್ಣ ನೀರು ಪಾಲಾಗಿದ್ದು, ಬಹುತೇಕ ಅನ್ನದಾತರು ಕಂಗಾಲಾಗಿದ್ದಾರೆ. ಪೂರ್ವ ಮುಂಗಾರಿನಲ್ಲಿಯೂ ತೋಟಗಾರಿಕೆ ಬೆಳೆಗಳು ನಷ್ಟವಾಗಿತ್ತು.

ಈಗ ಮತ್ತೆ ಅತಿವೃಷ್ಟಿಯಿಂದ ತೋಟಗಾರಿಕೆ ಬೆಳೆಗಳು ಕೊಚ್ಚಿಕೊಂಡು ಹೋಗಿ ರೈತರ ಗಾಯದ ಮೇಲೆ ಬರೆ ಎಳೆದಿದೆ. ಇದರಿಂದ ಅನ್ನದಾತನ ಗೋಳು ಕೇಳುವವರಿಲ್ಲದಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

**ಎಷ್ಟಾಗಿದೆ ತೋಟಗಾರಿಕೆ ಬೆಳೆ ಹಾನಿ:** ಜಿಲ್ಲೆಯಲ್ಲಿ ಬಹುವಾರ್ಷಿಕ ಬೆಳೆಗಳಾದ ಪಪ್ಪಾಯ 30.35 ಹೆಕ್ಟೇರ್, ಪೇರು 0.40 ಹೆಕ್ಟೇರ್, ಲಿಂಬೆ 1.00 ಹೆಕ್ಟೇರ್, ಗುಲಾಬಿ 3.20 ಹೆಕ್ಟೇರ್, ಡ್ರ್ಯಾಗನ್ ಹಣ್ಣು 2.00 ಹೆಕ್ಟೇರ್ ಹಾನಿಯಾಗಿದೆ. ಇದರ ಜತೆಗೆ ವಾರ್ಷಿಕ ಬೆಳೆಗಳಾದ ಬಾಳೆ 3.74 ಹೆಕ್ಟೇರ್, ಟೊಮ್ಯಾಟೊ 8.00 ಹೆಕ್ಟೇರ್, ಹಸಿಮೆಣಸಿನಕಾಯಿ 3.50 ಹೆಕ್ಟೇರ್, ಈರುಳ್ಳಿ 32.90 ಹೆಕ್ಟೇರ್, ಬದನೆ 2.40 ಹೆಕ್ಟೇರ್, ಬೆಂಡೆಕಾಯಿ 0.80 ಹೆಕ್ಟೇರ್, ಚಂಡು ಹೂ 2.95 ಹೆಕ್ಟೇರ್, ಹೀರೆಕಾಯಿ 1.20 ಹೆಕ್ಟೇರ್, ಸೇವಂತಿಗೆ 1.80 ಹೆಕ್ಟೇರ್, ಕಲ್ಲಂಗಡಿ 5.90 ಹೆಕ್ಟೇರ್, ಕುಂಬಳಕಾಯಿ 0.60 ಹೆಕ್ಟೇರ್, ಡೊಣ್ಣೆ ಮೆಣಸಿನಕಾಯಿ 0.80 ಹೆಕ್ಟೇರ್, ಇತರೆ ತರಕಾರಿ 2.10 ಹೆಕ್ಟೇರ್ ಸೇರಿ ಒಟ್ಟು 103.60 ಹೆಕ್ಟೇರ್ ತೋಟಗಾರಿಕೆ ಬೆಳೆ ನೀರು ಪಾಲಾಗಿದೆ. ಕಲಬುರಗಿ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದಾಗಿ ಆಗಸ್ಟ್ ಅಂತ್ಯದವರೆಗೆ 103.60 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಪೂರ್ವ ಮುಂಗಾರಿನಲ್ಲಿಯೂ 123.06 ಹೆಕ್ಟೇರ್ ಬೆಳೆ ನಷ್ಟವಾಗಿತ್ತು. ತೋಟಗಾರಿಕೆ ಇಲಾಖೆಯು ಜಂಟಿ ಸರ್ವೇ ಕಾರ್ಯವನ್ನು ಕೈಗೊಂಡಿದ್ದು, ಸೆಪ್ಟೆಂಬರ್ ತಿಂಗಳ ಮಳೆಯಿಂದಾದ ಹಾನಿಯ ಸರ್ವೇ ಕಾರ್ಯ ಬಾಕಿ ಇದೆ.

**ಪೂರ್ವ ಮುಂಗಾರಲ್ಲೂ123.06 ಹೆಕ್ಟೇರ್‌ಗೆ ಪೆಟ್ಟು:** ಪೂರ್ವ ಮುಂಗಾರಿನಲ್ಲಿ ಅಕಾಲಿಕ ಮಳೆ, ಗಾಳಿ ಮಿಶ್ರಿತ ಮಳೆ ಸುರಿದ ಹಿನ್ನೆಲೆಯಲ್ಲಿ ಅಂದೂ ಸಹ ತೋಟಗಾರಿಕೆ ಬೆಳೆಗಳು 123.06 ಹೆಕ್ಟೇರ್‌ನಷ್ಟು ಹಾನಿಯಾಗಿತ್ತು. ಈ ಹಾನಿಗೆ ಸಾಫ್ಟ್‌ವೇರ್ ಮೂಲಕ ನಷ್ಟವಾದ ರೈತರಿಗೆ ಪರಿಹಾರವನ್ನೂ ನೀಡಲಾಗಿದೆ.

ಉದಯವಾಹಿನಿ ಚಿತ್ರ


**ಪ್ರಗತಿಯಲ್ಲಿ ಜಂಟಿ ಸರ್ವೇ**

**ತೋಟಗಾರಿಕೆ ಬೆಳೆ ಹಾನಿಯೂ ಇನ್ನೂ ಜಂಟಿ ಸರ್ವೇ ಪ್ರಗತಿಯಲ್ಲಿದೆ. ಸೆಪ್ಟೆಂಬರ್ ಎರಡನೇ ವಾರದಲ್ಲಿಯೂ ಮಳೆ ಸುರಿಯುತ್ತಿರುವುದರಿಂದ ಹೊಲಗಳಲ್ಲಿ ತೇವಾಂಶ ಹೆಚ್ಚಿದೆ. ಹೊಲಗಳಲ್ಲಿ ಹೋಗಿ ಸರ್ವೇ ನಡೆಸಲೂ ಆಗುತ್ತಿಲ್ಲ. ಇದರಿಂದ ಸೆಪ್ಟೆಂಬರ್ ತಿಂಗಳ ಜಂಟಿ ಸರ್ವೇ ಇನ್ನೂ ನಡೆಸಬೇಕಿರುವುದು ಬಾಕಿಯಿದೆ ಎಂದು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಹೇಳುತ್ತಾರೆ.**

**ನಮ್ಮ ಹೊಲದಲ್ಲಿ ಪಪ್ಪಾಯ ಮತ್ತು ಕಲ್ಲಂಗಡಿ ಹಾಕಿದ್ದೆವು. ಆದರೆ, ಅತಿವೃಷ್ಟಿಯಿಂದ ನೀರಿನಲ್ಲಿ ಬೆಳೆ ಕೊಚ್ಚಿ ಹೋಗಿ ನಷ್ಟವಾಗಿದೆ. ಖರ್ಚು ಮಾಡಿದ ಹಣವೆಲ್ಲನೀರು ಪಾಲಾದಂತಾಗಿದೆ. ಸರಕಾರ ರೈತರ ನೆರವಿಗೆ ಬರಬೇಕು.**
**– ಖಾಜಾ ಹುಸೇನ್, ಬಿರಾಳ ರೈತ**

**ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ತೋಟಗಾರಿಕೆ ಬೆಳೆ 103.64 ಹೆಕ್ಟೇರ್ ಬೆಳೆ ಹಾನಿಯಾಗಿದೆ. ಇನ್ನೂ ಸೆಪ್ಟೆಂಬರ್‌ನಲ್ಲಿಯೂ ಸುರಿದ ಮಳೆಯಿಂದ ಹಾನಿಯಾದ ಬೆಳೆಗಳ ಸರ್ವೇ ಮಾಡಬೇಕಿದೆ. ಸಂಪೂರ್ಣ ಸರ್ವೇ ಮುಗಿದ ನಂತರ ಸರಕಾರಕ್ಕೆ ವರದಿ ಸಲ್ಲಿಸಲಾಗುವುದು.**
**– ಸಂತೋಷ ಇನಾಮದಾರ್, ಉಪ ನಿರ್ದೇಶಕರು**

# ಮಿನಿ ನ್ಯೂಸ್

## ಎಸ್‌ಸಿ, ಎಸ್‌ಟಿ, ಓಬಿಸಿಗಳು ಧರ್ಮದ ಕಾಲಂನಲ್ಲಿ ಬೌದ್ಧ ಎಂದು ಬರೆಸಿ

• ಉದಯವಾಹಿನಿ, ಚಿತ್ರದುರ್ಗ



ಅಖಿಲ ಕರ್ನಾಟಕ ಬೌದ್ಧ ದಾಖಲಾತಿ ಆಂದೋಲನ ಸಮಿತಿ ಇಂಡಿ ಸಂಚಾಲಕರಾದ ನಾಗೇಶ್ ಶಿವಶರಣ ಅವರು ಶನಿವಾರ ಖಾಸಗಿ ಹೋಟೇಲಿನಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಮುಂಬರುವ ಹಿಂದುಳಿದ ಜಾತಿಗಳ ಸಾಮಾಜಿಕ ಶೈಕ್ಷಣಿಕ, ಆರ್ಥಿಕ ಸಮೀಕ್ಷೆಯಲ್ಲಿ ಭಾರತದ ಮೂಲನಿವಾಸಿಗಳಾದ ಎಸ್ಸಿ, ಎಸ್ಟಿ, ಓಬಿಸಿಗಳು ಧರ್ಮದ ಕಾಲಂನಲ್ಲಿ ಬೌದ್ಧ ಎಂದು ಬರೆಯಿಸಬೇಕೆಂದು ಮನವಿ ಮಾಡಿಕೊಂಡರು. ಹಿಂದೂ ಧರ್ಮದಲ್ಲಿರುವ ಶ್ರೇಣಿಕೃತ ಜಾತಿ ವ್ಯವಸ್ಥೆಯನ್ನು ಧಿಕ್ಕರಿಸಿ ಡಾ ಬಾಬಾಸಾಹೇಬರು ಲಕ್ಷಾಂತರ ಅನುಯಾಯಿಗಳ ಜೊತೆಗೆ ಬೌದ್ಧ ಧರ್ಮವನ್ನು ಸ್ವೀಕರಿಸಿದ್ದರು, ಅವರ ಅನುಯಾಯಿಗಳಾದ ನಾವುಗಳು ಇಲ್ಲಿಯವರೆಗೆ ಹಲವಾರು ದೌರ್ಜನ್ಯ ದಬ್ಬಾಳಿಕೆ ನಡೆದರೂ ಕೂಡ ಹಿಂದೂ ಧರ್ಮದಲ್ಲಿಯೇ ಉಳಿದುಕೊಂಡಿದ್ದೇವೆ. ಹಲವಾರು ಸಮಸ್ಯೆಗಳನ್ನೂ ಎದುರಿಸಿದ ನಂತರವೂ ನಾವು ಅಧಿಕೃತವಾಗಿ ಬೌದ್ಧ ಧರ್ಮವನ್ನು ಸೇರ್ಪಡೆಗೊಂಡಿಲ್ಲ. ದಿನನಿತ್ಯದ ಜೀವನದಲ್ಲಿ ಬುದ್ಧನ ತತ್ವ ಸಂದೇಶಗಳನ್ನು ಪಾಲಿಸುವ ನಾವುಗಳು ಅಧಿಕೃತವಾಗಿ ಜಾತಿ ಸಮೀಕ್ಷೆಯಲ್ಲಿ ಬೌದ್ಧ ಧರ್ಮೀಯರು ಎಂಬುದನ್ನು ನಮೂದಿಸಬೇಕು ಮತ್ತು ಜಾತಿ ಕಾಲಂದಲ್ಲಿ ಪರಿಶಿಷ್ಟ ಜಾತಿಗಳು ತಮ್ಮ ತಮ್ಮ ಜಾತಿಗಳನ್ನು ನಮೂದಿಸಬೇಕೆಂದು ಆಗ್ರಹಪಡಿಸಿದರು.... ಬೌದ್ಧ ಧರ್ಮದ ಹೆಸರು ನಮೂದಿಸಿದರೇ ಈಗಿರುವ ಮೀಸಲಾತಿಯಲ್ಲಿ ಯಾವುದೇ ತೊಂದರೆಯಾಗುವುದಿಲ್ಲ, ಮೀಸಲಾತಿ ಯಥಾಸ್ಥಿತಿ ಮುಂದುವರೆಯುತ್ತದೆ ಇದು ಸ್ಟೇಟ್ ಗೌರ್ನಮೆಂಟ್, ಸೆಂಟ್ರಲ್ ಗೌರ್ನಮೆಂಟ್ ಮತ್ತು ಹೈಕೋರ್ಟ್ ಸುಪ್ರೀಂ ಕೋರ್ಟ್ ಮಾನ್ಯ ಮಾಡಿರುವುದರಿಂದ ಎಸ್ಸಿ , ಎಸ್ಟಿಗಳು ಹಿಂದೂ ಧರ್ಮದ ಕವಚವನ್ನು ಕಳೆದು ಬೌದ್ಧ ಧರ್ಮದ ಅಡಿ ಸಾಗಬೇಕೆಂದು ಮನವಿಮಾಡಿಕೊಂಡರು.

## ಗಿರಣಿಯ ಅಭಿವೃದ್ಧಿಗೆ ಶ್ರಮಿಸೋಣ

• ಉದಯವಾಹಿನಿ, ಲಕ್ಷ್ಮೇಶ್ವರ

ಪಟ್ಟಣದ ಸೋಮೇಶ್ವರ ರೈತರ ಸಹಕಾರಿ ನೂಲಿನ ಗಿರಣಿಯ ವಾರ್ಷಿಕ ಸರ್ವ ಸಾಧಾರಣೆ ಸಭೆ ಜರುಗಿತು. ಗಿರಣಿಯ ನಿರ್ದೇಶಕ ಹಾಗೂ ಜಿಲ್ಲಾ ಪಂಚಾಯಿತ್ತಿ ಮಾಜಿ ಅಧ್ಯಕ್ಷ ಎಸ್.ಪಿ.ಬಳಿಗಾರ ಮಾತನಾಡಿ, ಮಾಜಿ ಶಾಸಕ ಗೂಳಪ್ಪನವರು ಉಪನಾಳ ಅವರು ಸಾಕಷ್ಟು ಕಷ್ಟಪಟ್ಟು ಗಿರಣಿ ಕಟ್ಟಿದ್ದಾರೆ. ಮೂರು ದಶಕಗಳವರೆಗೆ ಗಿರಣಿಯು ಸಾವಿರಾರು ಜನರಿಗೆ ಉದ್ಯೋಗ ನೀಡಿದೆ. ಆದರೆ ಗಿರಣಿಯ ಯಂತ್ರೋಪಕರಣಗಳು ಹಳೆಯದಾಗಿವೆ. ಮತ್ತೆ ಹೊಸ ಯಂತ್ರೋಪಕರಣಗಳನ್ನು ಅಳವಡಿಸಿ ಗಿರಣಿಯನ್ನು ಪುನಃ ಆರಂಭಿಸುವತ್ತ ಚಿಂತನೆ ಮಾಡಬೇಕಾಗಿದೆ' ಎಂದು ತಿಳಿಸಿದರು.

ಗಿರಣಿಯ ಸರ್ಕಾರದ ಪ್ರತಿನಿಧಿ ವೀರಯ್ಯ ಮಠಪತಿ ಮಾತನಾಡಿ, 'ಗಿರಣಿಯನ್ನು ಪುನಃ ಆರಂಭಿಸಲು ಸರ್ಕಾರದಿಂದ ಅಗತ್ಯ ಇರುವ ಎಲ್ಲಾ ನೆರವನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು. ಗಿರಣಿಯ ಅಧ್ಯಕ್ಷ ಪುಲಿಕೇಶಿ ಉಪನಾಳ ಮಾತನಾಡಿ, ಆಡಳಿತ ಮಂಡಳಿಯ ಎಲ್ಲಾ ಸದಸ್ಯರು ಕೂಡಿ ಗಿರಣಿಯ ಅಭಿವೃದ್ಧಿಗೆ ಶ್ರಮಿಸೋಣ. ಗಿರಣಿ ಚಾಲೂ ಇಲ್ಲದಿದ್ದರೂ ಸಹ ಯಾವುದೇ ಸಾಲದ ಹೊರೆ ಇಲ್ಲ. ಗಿರಣಿಯ ಖರ್ಚು ವೆಚ್ಚಗಳನ್ನು ನೀಗಿಸುವ ನಿಟ್ಟಿನಲ್ಲಿ ಕಟ್ಟಡಗಳನ್ನು ಬಾಡಿಗೆಗೆ ನೀಡಲಾಗಿದೆ' ಎಂದು ಹೇಳಿದರು.

## ಗದಗ ರೈಲ್ವೆ ನಿಲ್ದಾಣಕ್ಕೆ ಪುಟ್ಟರಾಜರ ಹೆಸರಿಡಿ; ಸರ್ಕಾರಕ್ಕೆ ಆಗ್ರಹ

• ಉದಯವಾಹಿನಿ, ಗದಗ

ಲಿಂಗೈಕ್ಯ ಪಂ.ಪುಟ್ಟರಾಜ ಕವಿ ಗವಾಯಿಗಳ ಹೆಸರನ್ನು ಗದಗ ರೈಲ್ವೆ ನಿಲ್ದಾಣಕ್ಕೆ ನಾಮಕರಣ ಮಾಡಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕ್ರಮವಹಿಸಬೇಕು ಎಂದು ಕ್ರಾಂತಿ ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಬಾಬು ಬಾಕಳೆ ಆಗ್ರಹಿಸಿದರು. ನವೀಕೃತಗೊಂಡಿರುವ ಇಲ್ಲಿನ ರೈಲ್ವೆ ನಿಲ್ದಾಣಕ್ಕೆ ಪುಟ್ಟರಾಜ ಗವಾಯಿಗಳ ಹೆಸರು ನಾಮಕರಣಕ್ಕೆ ಆಗ್ರಹಿಸಿ ವಿವಿಧ ಸಂಘಟನೆಗಳ ಜತೆಗೂಡಿ ನಡೆಸಿದ ಪ್ರತಿಭಟನೆಯಲ್ಲಿ ಮಾತನಾಡಿದರು. ಗದುಗಿನ ವೀರೇಶ್ವರ ಪುಣ್ಯಾಶ್ರಮ ಅಂಧ ಅನಾಥರ ಬಾಳಿಗೆ ಬೆಳಕಾಗಿದೆ. ಪುಟ್ಟರಾಜ ಕವಿ ಗವಾಯಿಗಳು ಸಾವಿರಾರು ಮಂದಿ ಮಕ್ಕಳಿಗೆ ಸಂಗೀತಾಭ್ಯಾಸ ಮಾಡಿಸಿ, ಅವರಿಗೆ ಸಾರ್ಥಕ ಬದುಕು ಕಟ್ಟಿಕೊಟ್ಟಿದ್ದಾರೆ. ಇಂತಹ ಮಹಾನ್ ವ್ಯಕ್ತಿಯ ಹೆಸರನ್ನು ಅಜರಾಮರಗೊಳಿಸುವ ಉದ್ದೇಶದಿಂದ ಗದುಗಿನ ರೈಲ್ವೆ ನಿಲ್ದಾಣಕ್ಕೆ ಅವರ ಹೆಸರಿಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಗೂ ಮುನ್ನ ನಗರದ ಭೂಮರಡ್ಡಿ ವೃತ್ತದಲ್ಲಿರುವ ಪಂಡಿತ್ ಪುಟ್ಟರಾಜ ಕವಿ ಗವಾಯಿಗಳ ಮೂರ್ತಿಗೆ ಮಾಲಾರ್ಪಣೆ ಮಾಡಿ, ಪಾದಯಾತ್ರೆ ಮೂಲಕ ಗದಗ ಜಿಲ್ಲಾಧಿಕಾರಿ ಕಚೇರಿ ತಲುಪಿದರು. ಬಳಿಕ ಜಿಲ್ಲಾಧಿಕಾರಿ ಮೂಲಕ ರೈಲ್ವೆ ಸಚಿವರು, ರೈಲ್ವೆ ಇಲಾಖೆ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

## ನಕಲಿ ದಾಖಲೆ ಸೃಷ್ಟಿಸಿ 68 ಎಕರೆ ಜಮೀನು ನೋಂದಣಿ: 6 ಜನರ ಬಂಧನ

• ಉದಯವಾಹಿನಿ, ಹೂವಿನಹಡಗಲಿ

ಇಲ್ಲಿ ಆಸ್ತಿ ಹೊಂದಿ ವಿದೇಶದಲ್ಲಿ ನೆಲೆಸಿರುವವರ ಹೆಸರಿನಲ್ಲಿ ನಕಲಿ ದಾಖಲಿ ಸೃಷ್ಟಿಸಿ ತಾಲ್ಲೂಕಿನ ಕೊಯಿಲಾರಗಟ್ಟಿ ಗ್ರಾಮದ 68.17 ಎಕರೆ ಜಮೀನನ್ನು ನೋಂದಣಿ ಮಾಡಿಸಿ. ಮೂಲ ಪಟ್ಟಾದಾರರಿಗೆ ವಂಚಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಆರು ಆರೋಪಿಗಳನ್ನು ಬಂಧಿಸಿದ್ದಾರೆ. ಆರೋಪಿಗಳಾದ ಬಳ್ಳಾರಿಯ ಕೆ. ಮೋಹನ್, ಬಾದನಹಟ್ಟಿಯ ಟಿ.ರಂಜಿತ್ ಕುಮಾರ್, ಸಿರುಗುಪ್ಪದ ರಾವಿ ತಿರುಮಲೇಶ, ಬಳ್ಳಾರಿಯ ಎಸ್.ವಿಜಯಕುಮಾರ್ ಹೂವಿನಹಡಗಲಿ ತಾಲ್ಲೂಕು ರಾಜವಾಳದ ಜಾಸ್ತಿ ಶ್ರೀನಿವಾಸರೆಡ್ಡಿ, ಪಟ್ಟಣವಾಸಿ ಲಲಿತ ಕುಮಾರ್ ಜೈನ್ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿಗಳಿಗೆ ನ್ಯಾಯಾಲಯ ಜಾಮೀನು ನೀಡಿದೆ.

**ಪ್ರಕರಣ ವಿವರ:** ಸದ್ಯ ದುಬೈನಲ್ಲಿರುವ ಬೆಂಗಳೂರು ಮೂಲದ ಥಾಮಸ್ ವಿಜಯನ್, ಅಮೆರಿಕದಲ್ಲಿರುವ ರಾಜನ್ ಥಾಮಸ್ ಸಹೋದರರು ಈ ಹಿಂದೆ ತಾಲ್ಲೂಕಿನ ಕೊಯಿಲಾರಗಟ್ಟಿಯಲ್ಲಿ 97 ಎಕರೆ ಜಮೀನು ಖರೀದಿಸಿ, ಅದರ ಮಾಲೀಕತ್ವ ಹೊಂದಿದ್ದರು. ಇವರ ಹೆಸರಿನಲ್ಲಿ ಚುನಾವಣಾ ಗುರುತಿನ ಚೀಟಿ ಮತ್ತು ಜನರಲ್ ಪವರ್ ಆಫ್ ಅಟಾರ್ನಿ (ಜಿಪಿಎ) ಪತ್ರದ ನಕಲಿ ದಾಖಲೆಗಳನ್ನು ಸೃಷ್ಟಿಸಿ, 2 ಕೋಟಿ ಮೌಲ್ಯದ 68.17 ಎಕರೆ ಜಮೀನನ್ನು ಆರೋಪಿಗಳು ತಮ್ಮ ಹೆಸರಿಗೆ ನೋಂದಣಿ ಮಾಡಿಸಿಕೊಂಡಿದ್ದಾರೆ. ನಂತರ ನಕಲಿ ಜಿಪಿಎ ಪತ್ರ ಆಧಾರದಲ್ಲಿ ಇತರರಿಗೂ ಜಮೀನು ಮಾರಾಟ ಮಾಡಿ ವಂಚಿಸಿದ್ದಾರೆ.

## ಮಾರಿಷಸ್ ಪ್ರವಾಸ ಕೈಗೊಂಡ ದುನಿಯಾ ವಿಜಯ್ ಪುತ್ರಿ

ಕಡಲ ತೀರಗಳನ್ನು ಹೆಚ್ಚು ಇಷ್ಟಪಡುವ ಮೋನಿಷಾ ವಿಜಯ್ ಕುಮಾರ್ ಈ ಬಾರಿ ಶೂಟಿಂಗ್ ಬಿಡುವಿನಲ್ಲಿ, ಯಾವುದೇ ತಯಾರಿ ಮಾಡಿಕೊಳ್ಳದೆ, ಗೆಳತಿಯೊಂದಿಗೆ ಐದು ದಿನಗಳು ಹಾಗೂ ಆರು ರಾತ್ರಿಯ ಮಾರಿಷಸ್ ಪ್ರವಾಸ ಮಾಡಿ ಬಂದಿದ್ದಾರೆ. ಮಾರಿಷಸ್ ತುಂಬಾ ಅದ್ಭುತವಾದ, ಅಷ್ಟೆ ಸ್ವಚ್ಛ ಬೀಚುಗಳಿರುವ ಡೆಸ್ಟಿನೇಷನ್. ಮಾರಿಷಸ್‌ಗೆ ಹೋಗಬೇಕೆನ್ನುವುದು ನನ್ನ ಬಕೆಟ್ ಲಿಸ್ಟ್‌ನಲ್ಲಿ ಮೊದಲಿನಿಂದಲೂ ಇತ್ತು. ಈಗ ಈಡೇರಿದೆ' ಎಂದಿದ್ದಾರೆ ನಟಿ ಮೋನಿಷಾ ವಿಜಯ್ ಕುಮಾರ್. ಅಲ್ಲಿರುವ ಬಹುತೇಕರು ಭಾರತೀಯರಂತೆ ಕಾಣುತ್ತಿದ್ದರು. ಆದರೆ ಹೆಚ್ಚಿನ ಜನರ ಫ್ರೆಂಚ್ ಮಾತನಾಡುತ್ತಿದ್ದರು. ಐದು ದಿನದ ಪ್ರವಾಸದಲ್ಲಿ ಐದು ದ್ವೀಪಗಳನ್ನು ಕ್ರೂಸ್‌ನಲ್ಲಿ ಎಕ್ಸ್‌ಪ್ಲೋರ್ ಮಾಡಿದ್ದೆವು. ಪ್ರತಿಯೊಂದು ದ್ವೀಪ ಒಂದಕ್ಕಿಂತ ಒಂದು ಭಿನ್ನ. ಸ್ಕೂಬಾ ಡೈವ್ ಮಾಡಲಿಲ್ಲ. ಆದರೂ ಕ್ಲಿಸ್ಟರ್ ಕ್ಲಿಯರ್ ಬೀಚ್‌ನಲ್ಲಿ ಸ್ನಾರ್ಕ್ಲಿಂಗ್ ಮಾಡಿದೆವು. ವಾತಾವರಣ ತುಂಬಾ ಚೆನ್ನಾಗಿತ್ತು. ಪ್ರವಾಸಕ್ಕೆ ಹೇಳಿ ಮಾಡಿಸಿದ ಜಾಗ. ನಾನಿನ್ನು ಅಷ್ಟು ಬೀಚುಗಳಿಗೆ ವಿಸಿಟ್ ಮಾಡಿಲ್ಲ, ಈಗೀಗ ಆರಂಭಿಸಿದ್ದೇನೆ' ಎಂದರು ಅನುಭವ ಹಂಚಿಕೊಂಡರು ನಟಿ ಮೋನಿಷಾ ವಿಜಯ್ ಕುಮಾರ್.

**ಆಹಾರ ವೈವಿಧ್ಯ:** 'ಮಾರಿಷಸ್‌ನಲ್ಲಿ ಹೆಚ್ಚು ಇಂಡಿಯನ್ ಫುಡ್‌ಗಳೇ ಸಿಗುತ್ತವೆ. ಅಲ್ಲಿ ಸೀ ಫುಡ್ ತುಂಬಾ ಫೇಮಸ್. ನನಗೂ ಸೀ ಫುಡ್ ಇಷ್ಟ. ಆದರೆ ಚಿಕ್ಕ ವಯಸ್ಸಿನಿಂದ ಸೀ ಫುಡ್‌ಗೆ ನಾನು ಸ್ವಲ್ಪ ಅಲರ್ಜಿಕ್. ಹಾಗಾಗಿ ಸ್ವಲ್ಪ ಟೇಸ್ಟ್ ಮಾಡಿದೆ. ಇದರ ಜತೆಗೆ ಯೂನಿಕ್ ಆಗಿ ಆಫ್ರಿಕನ್ ಬರ್ಗರ್ ಟೇಸ್ಟ್ ಮಾಡಿದೆ. ಅದರೊಂದಿಗೆ ಸುಶಿಸ್ ಇಷ್ಟವಾಯಿತು' ಎನ್ನುತ್ತಾರೆ ನಟಿ ಮೋನಿಷಾ ವಿಜಯ್ ಕುಮಾರ್.




## ಚಿಕ್ಕಣ್ಣ ಮ್ಯಾರೇಜ್ ಸೀಕ್ರೆಟ್ ಬಿಚ್ಚಿಟ್ಟ ನಟಿ ಮಲೈಕಾ

ಹಿಟ್ಲರ್ ಕಲ್ಯಾಣ ಧಾರಾವಾಹಿ ಹಾಗೂ ಉಪಾಧ್ಯಕ್ಷ ಸಿನಿಮಾ ಖ್ಯಾತಿಯ ನಟಿ ಮಲೈಕಾ ವಸುಪಾಲ್ ಇದೀಗ ಕಲ್ಟ್ ಸಿನಿಮಾದಲ್ಲಿ ಅಭಿನಯಿಸುತ್ತಿದ್ದಾರೆ. ಇತ್ತೀಚೆಗೆ ಚಿತ್ರದ ಹಾಡು ಬಿಡುಗಡೆ ಕಾರ್ಯಕ್ರಮದಲ್ಲಿ ಮಾಧ್ಯಮಗಳ ಜೊತೆಗೆ ಮಲೈಕಾ ಹಲವು ವಿಚಾರಗಳನ್ನ ಹಂಚಿಕೊಂಡಿದ್ದಾರೆ. ಇದೇ ವೇಳೆ ನಟ ಚಿಕ್ಕಣ್ಣ ಅವರ ಮದುವೆ ನಿಶ್ಚಯದ ಬಗ್ಗೆ ಮಾತನಾಡಿದ್ದಾರೆ.

ಚಿಕ್ಕಣ್ಣ ಅವರ ಮದುವೆ ನಿಶ್ಚಯದ ಬಗ್ಗೆ ಮಾತನಾಡಿ, ಅವರು ಮದುವೆಗೆ ಸಜ್ಜಾಗಿದ್ದಾರೆ ಅಂತ ಗೊತ್ತಾದಾಗ ತುಂಬಾ ತುಂಬಾ ಖುಷಿಯಾಯ್ತು. ತುಂಬಾ ವರ್ಷಗಳ ಮುಂಚೆಯೇ ಅವರು ಇಂಡಸ್ಟ್ರೀಗೆ ಬಂದಿದ್ದಾರೆ, ಫೈನಲಿ ಮದುವೆಯಾಗುತ್ತಿದ್ದಾರೆ. ಉಪಾಧ್ಯಕ್ಷ ಸಿನಿಮಾ ಆದ ತಕ್ಷಣ ನಾನು ಮದುವೆಯಾಗುತ್ತೇನೆ ಅಂತ ಅವರು ಹೇಳುತ್ತಿದ್ದರು. ಅದೇ ರೀತಿ ಉಪಾಧ್ಯಕ್ಷ ಆದಮೇಲೆ ಅವರು ಮದುವೆಯಾಗುತ್ತಿದ್ದಾರೆ. ಕಂಗ್ರ್ಯಾಜುಲೇಷನ್ಸ್, ನಿಮ್ಮ ಜೀವನ ಇನ್ನಷ್ಟು ತುಂಬಾ ಚೆನ್ನಾಗಿರಲಿ ಅಂತ ನಾನು ಭಯಸುತ್ತೇನೆ'' ಎಂದಿದ್ದಾರೆ ಮಲೈಕಾ.

**ಲವ್‌ಲೈಫ್ ಪ್ಲ್ಯಾನ್ಸ್ ಬಗ್ಗೆ ಏನಂದ್ರು?** ''ಒಂದು ಮಟ್ಟಕ್ಕೆ ಇಂಡಸ್ಟ್ರೀಯಲ್ಲಿ ಹೆಸರು ಮಾಡಿ, ಸಿನಿಮಾಗಳನ್ನ ಮಾಡಿ, ಆಮೇಲೆ ಆರಾಮಾಗಿ ಮದುವೆಯಾಗುತ್ತೇನೆ. ನನಗೆ ಮಕ್ಕಳೆಂದರೆ ಸಿಕ್ಕಾಪಟ್ಟೆ ಇಷ್ಟ. ನಾನು ನನ್ನ ಮಕ್ಕಳನ್ನ ಚೆನ್ನಾಗಿ ಸಾಕಬೇಕು, ಆರಾಮಾಗಿ ಇರಬೇಕು. ತಂದೆ-ತಾಯಿಯನ್ನ ಚೆನ್ನಾಗಿ ನೋಡಿಕೊಳ್ಳಬೇಕು, ಬಿಟ್ರೆ ಇನ್ಯಾವ ಪ್ಲ್ಯಾನ್ಸ್ ಕೂಡ ಇಲ್ಲ. ಬೇರೆ ಭಾಷೆಗಳಿಂದ ಆಫರ್ಸ್ ಬಂದ್ರೆ ಖಂಡಿತವಾಗಿಯೂ ಸಿನಿಮಾಗಳನ್ನ ಮಾಡುತ್ತೇ ಚಿಕ್ಕಣ್ಣ ಅವರು ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಮಹದೇವಪುರ ಗ್ರಾಮದ ಪಾವನಾ ಗೌಡ ಅವರನ್ನ ವಿವಾಹವಾಗಲಿದ್ದಾರೆ. ಇತ್ತೀಚೆಗೆ ಮದುವೆ ನಿಶ್ಚಯ ಕೂಡ ಆಗಿದೆ. ಪಾವನಾ ಗೌಡ ಉದ್ಯಮಿಯಾಗಿದ್ದು, ಮೆಕಾನಿಕಲ್ ಇಂಜಿನಿಯರ್ ಆಗಿಯೂ ಗುರುತಿಸಿಕೊಂಡಿದ್ದಾರೆ. ಚಿಕ್ಕಣ್ಣ ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ಈ ಜೋಡಿ ಒಟ್ಟಾಗಿ ಕಾಣಿಸಿಕೊಂಡಿತ್ತು. ಇವರ ಮದುವೆ ದಿನಾಂಕಗಳ ಬಗ್ಗೆ ಇನ್ನೂ ಅಧಿಕೃತ ಘೋಷಣೆಯಾಗಿಲ್ಲ, ಆದರೆ ಶೀಘ್ರದಲ್ಲೇ ಈ ಜೋಡಿ ವಿವಾಹವಾಗಲಿದೆ ಎಂದು ಹೇಳಲಾಗುತ್ತಿದೆ.

ಕನ್ನಡ ಚಿತ್ರರಂಗದಲ್ಲಿ ಖ್ಯಾತ ಹಾಸ್ಯ ನಟರಾಗಿ ಗುರುತಿಸಿಕೊಂಡವರು ಚಿಕ್ಕಣ್ಣ. ಅಧ್ಯಕ್ಷ ಸಿನಿಮಾದಲ್ಲಿ ನಟ ಶರಣ್ ಅವರ ಜೊತೆಗೆ ಉಪಾಧ್ಯಕ್ಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. ಆನಂತರ ಉಪಾಧ್ಯಕ್ಷ ಸಿನಿಮಾದ ಮೂಲಕ ನಾಯಕ ನಟನಾಗಿ ಚಿಕ್ಕಣ್ಣ ಮಿಂಚಿದ್ದರು. ಯಶ್, ದರ್ಶನ್, ಸುದೀಪರ್‌ರಂತಹ ಸ್ಟಾರ್ ನಟರ ಜೊತೆಗೆ ಚಿಕ್ಕಣ ನಟಿಸಿದ್ದಾರೆ.



## ಮಹಾನ್ ಟೀಮ್ ಸೇರಿಕೊಂಡ ಬೊಳ್ಳಮ್ಮ

ಸದಭಿರುಚಿಯ ಚಿತ್ರಗಳ ನಿರ್ದೇಶಕ ಪಿ.ಸಿ.ಶೇಖರ್ ನಿರ್ದೇಶನದ, ಪ್ರತಿಷ್ಠಿತ ಸಂಸ್ಥೆಯ ಸಹಯೋಗದೊಂದಿಗೆ ಆಕಾಶ್ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬುದ್ದೂರು ಅವರು ನಿರ್ಮಿಸುತ್ತಿರುವ ಹಾಗೂ ಜನಪ್ರಿಯ ನಟ ವಿಜಯ ರಾಘವೇಂದ್ರ ನಾಯಕರಾಗಿ ನಟಿಸುತ್ತಿರುವ ಮಹಾನ್ ಚಿತ್ರದ ಪ್ರಮುಖ ಪಾತ್ರದಲ್ಲಿ ದಕ್ಷಿಣ ಭಾರತದ ಖ್ಯಾತ ನಟಿ ವರ್ಷ ಬೊಳ್ಳಮ್ಮ ಅಭಿನಯಿಸುತ್ತಿದ್ದಾರೆ. ತಮಿಳಿನ ಬಿಗಿಲ್, 96 ಸೇರಿದಂತೆ ಅನೇಕ ಸೂಪರ್ ಹಿಟ್ ಚಿತ್ರಗಳಲ್ಲಿ ಹಾಗೂ ತೆಲುಗು, ಮಲಯಾಳಂ ಚಿತ್ರಗಳಲ್ಲೂ ನಟಿಸಿರುವ ವರ್ಷ ಬೊಳ್ಳಮ್ಮ ಅವರು ನಟಿಸುತ್ತಿರುವ ಮೊದಲ ಕನ್ನಡ ಚಿತ್ರ ಇದಾಗಿದೆ. ಮಹಾನ್ ಚಿತ್ರದ ಬಗ್ಗೆ ವರ್ಷ ಬೊಳ್ಳಮ್ಮ ಅವರು ಈ ರೀತಿ ಹೇಳುತ್ತಾರೆ. ಮೂಲತಃ ಕನ್ನಡದವಳಾದ ನಾನು ತಮಿಳು, ತೆಲುಗು ಹಾಗೂ ಮಲಯಾಳಂ ಭಾಷೆಗಳ ಚಿತ್ರಗಳಲ್ಲಿ ಅಭಿನಯಿಸಿದ್ದೇನೆ. ಈಗ ಇದೇ ಮೊದಲ ಬಾರಿಗೆ ಕನ್ನಡದ ಮಹಾನ್ ಚಿತ್ರದಲ್ಲಿ ನಟಿಸುತ್ತಿದ್ದೇನೆ. ಮಾತೃಭಾಷೆಯ ಚಿತ್ರದಲ್ಲಿ ನಟಿಸುತ್ತಿರುವುದಕ್ಕೆ ಬಹಳ ಖುಷಿಯಾಗುತ್ತಿದೆ. ಮಹಾನ್ ರೈತರ ಕುರಿತಾದ ಚಿತ್ರ. ರೈತರ ಬದುಕಿನ ಬವಣೆಗಳನ್ನು ನಿರ್ದೇಶಕರು ಈ ಚಿತ್ರದಲ್ಲಿ ತೋರಿಸಲು ಹೊರಟಿದ್ದಾರೆ. ನಾನು ಪಿ.ಸಿ.ಶೇಖರ್ ನಿರ್ದೇಶನದ ಚಿತ್ರಗಳನ್ನು ನೋಡಿದ್ದೇನೆ. ಸದಭಿರುಚಿಯ ಚಿತ್ರಗಳ ನಿರ್ದೇಶಕರು ಅವರು.

ಪಿ.ಸಿ.ಶೇಖರ್ ಅವರು ಮಹಾನ್ ಚಿತ್ರದ ಕಥೆ ಹೇಳಿದಾಗ, ಕಥೆಯಲ್ಲಿರುವ ಸಾಮಾಜಿಕ ಕಳಕಳಿ ಬಹಳ ಇಷ್ಟವಾಯಿತು. ಪಿ.ಸಿ.ಶೇಖರ್ ಅವರ ಜೊತೆಗೆ ಕೆಲಸ ಮಾಡುತ್ತಿರುವುದು ಹಾಗೂ ವಿದ್ಯಾ ಸಂಸ್ಥೆ ನಡೆಸುತ್ತಿರುವ ಪ್ರಕಾಶ್ ಬುದ್ದೂರು ಅವರು ನಿರ್ಮಿಸುತ್ತಿರುವ ಕಳಕಳಿಯುಳ್ಳ ಈ ಸಿನಿಮಾದಲ್ಲಿ ಅಭಿನಯಿಸುತ್ತಿರುವುದು ನನಗೆ ಬಹಳ ಸಂತಸ ತಂದಿದೆ. ಇನ್ನೂ, ನಾನು ವಿಜಯ ರಾಘವೇಂದ್ರ ಅವರ ಅಭಿಮಾನಿ. ಅವರೊಟ್ಟಿಗೆ ಈ ಚಿತ್ರದಲ್ಲಿ ನಟಿಸುತ್ತಿರುವುದಕ್ಕೆ ಬಹಳ ಸಂತೋಷವಾಗಿದೆ ಎಂದು ವರ್ಷ ಬೊಳ್ಳಮ್ಮ ತಿಳಿಸಿದ್ದಾರೆ.





## ಕ್ರಿಶ್ 4 ಚಿತ್ರಕ್ಕೆ ರಶ್ಮಿಕಾ ನಾಯಕಿ

ನಟಿ ರಶ್ಮಿಕಾ ಮಂದಣ್ಣ ಖ್ಯಾತಿ ದಿನ ಕಳೆದಂತೆ ಹೆಚ್ಚುತ್ತಲೇ ಇದೆ. ಅವರು ದೇಶ ಮಟ್ಟದಲ್ಲಿ ಜನಪ್ರಿಯತೆ ಪಡೆದಿದ್ದಾರೆ. ಈಗ ರಶ್ಮಿಕಾ ಮಂದಣ್ಣ ಅವರು ಪ್ರಿಯಾಂಕಾ ಚೋಪ್ರಾ, ಸ್ಥಾನವನ್ನು ತುಂಬಲು ರೆಡಿ ಆಗಿದ್ದಾರೆ ಎನ್ನುವ ಮಾತು ಕೇಳಿ ಬಂದಿದೆ. ಇದು ಅಚ್ಚರಿ ಎನಿಸಿದರೂ ಸತ್ಯ. ಕ್ರಿಶ್ ಹಾಗೂ ಕ್ರಿಶ್ 3 ಚಿತ್ರಕ್ಕೆ ಪ್ರಿಯಾಂಕಾ ಚೋಪ್ರಾ ನಾಯಕಿ ಆಗಿದ್ದರು. ಈಗ ಕ್ರಿಶ್ 4 ಚಿತ್ರದಲ್ಲಿ ಪ್ರಿಯಾಂಕಾ ಸ್ಥಾನವನ್ನು ರಶ್ಮಿಕಾ ತುಂಬಲಿದ್ದಾರೆ ಎನ್ನಲಾಗುತ್ತಿದೆ.

'ಕ್ರಿಶ್ 4' ಚಿತ್ರದ ಸ್ಕ್ರಿಪ್ಟ್ ಕೆಲಸ ಪ್ರಗತಿಯಲ್ಲಿ ಇದೆ. ಇದರ ಜೊತೆಗೆ ಪಾತ್ರವರ್ಗದ ಆಯ್ಕೆ ಕೂಡ ಫೈನಲ್ ಮಾಡುವ ಕೆಲಸ ಆಗುತ್ತಿದೆ. ಪ್ರಿಯಾಂಕಾ ಚೋಪ್ರಾ, ಸದ್ಯ ಹಾಲಿವುಡ್‌ನಲ್ಲಿ ಸೆಟಲ್ ಆಗಿದ್ದು, ಅವರು ಸದ್ಯಕ್ಕಂತೂ ಹಿಂದಿ ಚಿತ್ರರಂಗಕ್ಕೆ ಮರಳಲ್ಲ. ಹೀಗಾಗಿ, ಬೇರೆ ನಟಿಯರ ಆಯ್ಕೆ ತಂಡಕ್ಕೆ ಅನಿವಾರ್ಯ ಆಗಿದೆ. ಈ ವೇಳೆ ನಿರ್ಮಾಪಕರ ಕಣ್ಣು ರಶ್ಮಿಕಾ ಮಂದಣ್ಣ ಮೇಲೆ ಬಿದ್ದಿದೆ. ಹೃತಿಕ್ ರೋಷನ್ ಅವರು 'ಕ್ರಿಶ್ 4' ಚಿತ್ರದ ಹೀರೋ. ಇವರ ಜೊತೆ ರಶ್ಮಿಕಾ ಮಂದಣ್ಣ ಇನ್ನೂ ತೆರೆ ಹಂಚಿಕೊಂಡಿಲ್ಲ. ಈ ಫ್ರೆಶ್ ಜೋಡಿ ನೋಡಲು ಫ್ಯಾನ್ಸ್ ಕೂಡ ಕಾದಿದ್ದಾರೆ. ಹೀಗಾಗಿ, ಚಿತ್ರತಂಡದವರು ಇದಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ ಎಂದು ವರದಿ ಆಗಿದೆ. ರಶ್ಮಿಕಾ ಮಂದಣ್ಣ ಅವರು 'ಪುಷ್ಪ, 'ಪುಷ್ಪ 2', 'ಅನಿಮಲ್', 'ಛಾವಾ' ರೀತಿಯ ಸಿನಿಮಾಗಳನ್ನು ನೀಡಿ ಯಶಸ್ಸು ಕಂಡಿದ್ದಾರೆ. ಸಲ್ಮಾನ್ ಖಾನ್ ನಟನೆಯ 'ಸಿಕಂದರ್' ಸಿನಿಮಾ ಫ್ಲಾಪ್ ಎನಿಸಿಕೊಂಡರೂ ಅವರ ಓಟದ ಮೇಲೆ ಯಾವುದೇ ಪರಿಣಾಮ ಬೀರಿಲ್ಲ.



## ಪವನ್ ಕಲ್ಯಾಣ್ ಸಿನಿಮಾಕ್ಕೆ ಅನುಮತಿ ತಿರಸ್ಕರಿಸಿದ ತೆಲಂಗಾಣ ಸರ್ಕಾರ

ಪವನ್ ಕಲ್ಯಾಣ್ ದಕ್ಷಿಣ ಭಾರತ ರಾಜಕೀಯದ ಜನಪ್ರಿಯ ನಾಯಕರಲ್ಲಿ ಒಬ್ಬರು ಎನಿಸಿಕೊಂಡಿದ್ದಾರೆ. ಆಂಧ್ರ ಪ್ರದೇಶ ಉಪಮುಖ್ಯ ಮಂತ್ರಿ ಆಗಿರುವ ಪವನ್ ಕಲ್ಯಾಣ್ ಆಡಳಿತದ ಜೊತೆಗೆ ಸಿನಿಮಾ ಕೆಲಸಗಳನ್ನೂ ಸಹ ಮುಂದುವರೆಸಿಕೊಂಡು ಹೋಗುತ್ತಿದ್ದಾರೆ. ಕೆಲ ವಾರಗಳ ಹಿಂದಷ್ಟೆ ಅವರ ನಟನೆಯ 'ಹರಿ ಹರ ವೀರ ಮಲ್ಲು' ಸಿನಿಮಾ ಬಿಡುಗಡೆ ಆಗಿತ್ತು. ಆ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಕಮಾಲ್ ಮಾಡಲಿಲ್ಲ. ಇದೀಗ ಅವರ ನಟನೆಯ ಮತ್ತೊಂದು ಸಿನಿಮಾ 'ಓಜಿ' ಬಿಡುಗಡೆ ಆಗುತ್ತಿದೆ. ಪವನ್ ಕಲ್ಯಾಣ್ ಕಳೆದ ಆಂಧ್ರ ವಿಧಾನಸಭೆ ಚುನಾವಣೆಗೆ ಧುಮುಕುವ ಮೊದಲು 'ಓಜಿ' ಸಿನಿಮಾ ಚಿತ್ರೀಕರಣ ಆರಂಭಿಸಿದ್ದರು. ಆದರೆ ಚುನಾವಣೆಯಲ್ಲಿ ಬ್ಯುಸಿ ಆದ ಕಾರಣ ಸಿನಿಮಾ ಚಿತ್ರೀಕರಣ ನಿಲ್ಲಿಸಲಾಗಿತ್ತು. ಆದರೆ ಇತ್ತೀಚೆಗೆ ಮತ್ತೆ ಸಿನಿಮಾದ ಚಿತ್ರೀಕರಣದಲ್ಲಿ ಪಾಲ್ಗೊಂಡು ಪವನ್ ಅವರು ಸಿನಿಮಾ ಮುಗಿಸಿಕೊಟ್ಟಿದ್ದಾರೆ. 'ಓಜಿ' ಸಿನಿಮಾ ಮುಂದಿನ ಗುರುವಾರ (ಸೆಪ್ಟೆಂಬರ್ 25) ಬಿಡುಗಡೆ ಆಗಲಿದೆ. ತೆಲುಗು ರಾಜ್ಯಗಳಲ್ಲಿ ದೊಡ್ಡ ಸಿನಿಮಾಗಳು ಬಿಡುಗಡೆ ಆಗುವ ಮೊದಲು ಸಿನಿಮಾಗಳ ಹೆಚ್ಚುವರಿ ಶೋಗಳಿಗೆ ಹಾಗೂ ಟಿಕೆಟ್ ದರ ಹೆಚ್ಚಳಕ್ಕೆ ಸರ್ಕಾರಗಳಿಂದ ಅನುಮತಿ ಪಡೆಯಬೇಕೆಂಬ ನಿಯಮವಿದೆ. ಪವನ್ ಕಲ್ಯಾಣ್ ನಟನೆಯ ಈ ಹಿಂದಿನ ಸಿನಿಮಾ 'ಹರಿ ಹರ ವೀರ ಮಲ್ಲು' ಸಿನಿಮಾಕ್ಕೂ ಟಿಕೆಟ್ ದರ ಹೆಚ್ಚಿಸಲು ಮತ್ತು ಶೋಗಳ ಸಂಖ್ಯೆ ಹೆಚ್ಚಿಸಲು ತೆಲಂಗಾಣ ಹಾಗೂ ಆಂಧ್ರ ಪ್ರದೇಶ ಸರ್ಕಾರಗಳಿಂದ ಅನುಮತಿ ಪಡೆಯಲಾಗಿತ್ತು. ಅಂತೆಯೇ ಈ ಬಾರಿಯೂ ಸಹ 'ಓಜಿ' ಸಿನಿಮಾದ ಹೆಚ್ಚುವರಿ ಶೋ ಮತ್ತು ಟಿಕೆಟ್ ದರ ಹೆಚ್ಚಳಕ್ಕೆ ಅನುಮತಿ ಕೋರಲಾಗಿತ್ತು. ಆಂಧ್ರ ಸರ್ಕಾರ ನಿರೀಕ್ಷೆಯಂತೆಯೇ ಅನುಮತಿ ನೀಡಿದೆ. ಆದರೆ ನೆರೆಯ ತೆಲಂಗಾಣ ಸರ್ಕಾರ, ಓಜಿ ಸಿನಿಮಾದ ಹೆಚ್ಚುವರಿ ಶೋಗಳಿಗೆ ಅನುಮತಿ ನಿರಾಕರಿಸಿದೆ.



## ರೋಚಕ ಹಣಾಹಣಿ ಸೂಪರ್ ಸಂಡೇ ಭಾರತ-ಪಾಕ್ ಮುಖಾಮುಖಿ


2025ರ ಟಿ20 ಏಷ್ಯಾಕಪ್ ಟೂರ್ನಿಯಲ್ಲಿ ಹ್ಯಾಂಡ್ ಶೇಕ್ ವಿವಾದ ತಣ್ಣಗಾಗುವ ಮುನ್ನವೇ ಭಾರತ ಪಾಕಿಸ್ತಾನ ತಂಡಗಳು ಮತ್ತೊಮ್ಮೆ ಮುಖಾಮುಖಿಯಾಗಲು ಸಜ್ಜಾಗಿವೆ. ಟೂರ್ನಿಯ ಲೀಗ್ ಸುತ್ತಿನಲ್ಲಿ ಅಗ್ರಸ್ಥಾನದಲ್ಲಿರುವ ಟೀಂ ಇಂಡಿಯಾ, 2ನೇ ಸ್ಥಾನದಲ್ಲಿರುವ ಪಾಕಿಸ್ತಾನ ತಂಡಗಳು (ಸೆ.21) ಮತ್ತೊಮ್ಮೆ ಮುಖಾಮುಖಿಯಾಗಲಿವೆ. ದುಬೈನ ಅಂತಾರಾಷ್ಟ್ರೀಯ ಕ್ರಿಕೆಟ್ ಮೈದಾನದಲ್ಲಿ ರಾತ್ರಿ 8 ಗಂಟೆಗೆ ಪಂದ್ಯ ನಡೆಯಲಿದೆ. ಈಗಾಗಲೇ ಲೀಗ್ ಸುತ್ತಿನಲ್ಲಿ ತನ್ನ ಮೂರು ಪಂದ್ಯಗಳನ್ನಾಡಿರುವ ಪಾಕ್ 2 ರಲ್ಲಿ ಗೆದ್ದು 4 ಅಂಕಗಳೊಂದಿಗೆ 2ನೇ ಸ್ಥಾನದಲ್ಲಿದ್ದರೆ, ಭಾರತ ಎರಡೂ ಪಂದ್ಯಗಳಲ್ಲಿ ಗೆದ್ದು ಅಗ್ರಸ್ಥಾನದಲ್ಲಿದೆ. ಸೆ.19ರಂದು ಒಮನ್ ವಿರುದ್ಧ ತನ್ನ ಕೊನೆಯ ಲೀಗ್ ಪಂದ್ಯವನ್ನಾಡಲಿದ್ದು, ಭಾನುವಾರ ಸೂಪರ್ ಫೋರ್ ಮೊದಲ ಪಂದ್ಯದಲ್ಲಿ ಪಾಕ್ ವಿರುದ್ಧ ಮುಖಾಮುಖಿಯಾಗಲಿದೆ. ಕಳೆದ ಭಾನುವಾರ ಪಾಕ್ ವಿರುದ್ಧ ನಡೆದ ಪಂದ್ಯದಲ್ಲಿ ಟೀಂ ಇಂಡಿಯಾ ಭರ್ಜರಿ ಗೆಲುವು ಸಾಧಿಸಿತ್ತು. ಆದ್ರೆ ಈ ಪಂದ್ಯದ ಟಾಸ್ ವೇಳೆ ಹಾಗೂ ಪಂದ್ಯದ ಗೆದ್ದ ಬಳಿಕ ಭಾರತೀಯ ಆಟಗಾರರು ಹ್ಯಾಂಡ್ ಶೇಕ್ ಮಾಡೋದನ್ನ ಬಿಟ್ಟಿದ್ದರು. ಸದ್ಯ ಹ್ಯಾಂಡ್ ಶೇಕ್ ವಿವಾದ ತೀವ್ರತೆ ಕಡಿಮೆಯಾಗುವ ಮುನ್ನವೇ ಭಾರತ-ಪಾಕ್ ಸೂಪರ್ ಫೋರ್‌ನಲ್ಲಿ ಮತ್ತೊಮ್ಮೆ ಮುಖಾಮುಖಿಯಾಗುತ್ತಿರುವುದು ಭಾರೀ ಥ್ರಿಲ್ಲಿಂಗ್ ಆಗಿಸಿದೆ.

## ಪಾಕಿಸ್ತಾನ ವಿರುದ್ಧದ ಪಂದ್ಯಕ್ಕೂ ಮುನ್ನ ಭಾರತಕ್ಕೆ ಬಿಗ್ ಶಾಕ್: ಅಕ್ಷರ್ ಪಟೇಲ್ ಇಂಜುರಿ

ಶೇಖ್ ಜಾಯೆದ್ ಕ್ರೀಡಾಂಗಣದಲ್ಲಿ ಶುಕ್ರವಾರ ಭಾರತ ತಂಡ 2025ರ ಏಷ್ಯಾ ಕಪ್‌ನ ಗುಂಪು ಹಂತದ ಕೊನೆಯ ಪಂದ್ಯವನ್ನು ಆಡಿತು. ಈ ಪಂದ್ಯವನ್ನು ಭಾರತ ತಂಡ 21 ರನ್‌ಗಳಿಂದ ಗೆದ್ದಿದೆ. ಟೀಮ್ ಇಂಡಿಯಾ ಈಗಾಗಲೇ ಸೂಪರ್ ಫೋರ್‌ನಲ್ಲಿ ಸ್ಥಾನ ಪಡೆದಿರುವ ಕಾರಣ ಈ ಪಂದ್ಯ ಕೇವಲ ಔಪಚಾರಿಕವಾಗಿತ್ತು. ಹೀಗಾಗಿ ತಂಡದಲ್ಲಿ ಕೆಲ ಆಟಗಾರರಿಗೆ ವಿಶ್ರಾಂತಿ ನೀಡಿದರೆ ನಾಯಕ ಸೂರ್ಯಕುಮಾರ್ ಯಾದವ್ 8 ವಿಕೆಟ್‌ಗಳ ಪತನದ ನಂತರವೂ ಬ್ಯಾಟಿಂಗ್ ಮಾಡಲು ಬರಲಿಲ್ಲ. ಮೊದಲು ಬ್ಯಾಟಿಂಗ್ ಮಾಡಿದ ಭಾರತ 188 ರನ್ ಗಳಿಸಿತು. ಓಮನ್ 167 ರನ್ ಗಳಿಸಿತು. ಇದೀಗ ಟೀಮ್ ಇಂಡಿಯಾ ಸೂಪರ್- 4ನ ಮೊದಲ ಪಂದ್ಯಕ್ಕೆ ಸಜ್ಜಾಗುತ್ತಿದ್ದು, ಪಾಕಿಸ್ತಾನ ವಿರುದ್ಧ ಆಡಲಿದೆ. ಆದರೆ, ಈ ಹೈವೋಲ್ಟೇಜ್ ಪಂದ್ಯಕ್ಕೂ ಮುನ್ನ ಭಾರತಕ್ಕೆ ದೊಡ್ಡ ಹಿನ್ನಡೆ ಆಗಿದೆ.

**ಅಕ್ಷರ್ ಪಟೇಲ್ ತಲೆಗೆ ಗಾಯ:** ಈ ಪಂದ್ಯದಲ್ಲಿ, ಟೀಮ್ ಇಂಡಿಯಾ ಆಟಗಾರ ಅಕ್ಷರ್ ಪಟೇಲ್ ಗಾಯಗೊಂಡ ಘಟನೆ ನಡೆದಿದೆ. ಅಕ್ಷರ್ ಕ್ಯಾಚ್ ಹಿಡಿಯಲು ಪ್ರಯತ್ನಿಸುವಾಗ ಸಮತೋಲನ ಕಳೆದುಕೊಂಡು, ಕ್ಯಾಚ್ ಕೈಬಿಟ್ಟು ಗಾಯಗೊಂಡರು. ಗಾಯದಿಂದಾಗಿ ಅವರು ಮೈದಾನದಿಂದ ಹೊರಹೋಗಬೇಕಾಯಿತು. ಓಮನ್ ಇನ್ನಿಂಗ್ಸ್‌ನ 15 ನೇ ಓವರ್‌ನಲ್ಲಿ ಈ ಘಟನೆ ಸಂಭವಿಸಿದೆ. ಶಿವಂ ದುಬೆ ಎಸೆದ ಎಸೆತವನ್ನು ಹಮ್ಮದ್ ಮಿರ್ಜಾ ಕಟ್ ಮಾಡಲು ಪ್ರಯತ್ನಿಸಿದರು, ಆದರೆ ಚೆಂಡು ಅವರ ಬ್ಯಾಟ್‌ನ ಅಂಚಿಗೆ ತಾಗಿ ಮಿಡ್-ಆಫ್ ಕಡೆಗೆ ಸಾಗಿತು. ಈ ಸಂದರ್ಭ ಅಕ್ಷರ್ ಪಟೇಲ್ ಓಡಿ ಚೆಂಡಿನ ಬಳಿ ತಲುಪುವಲ್ಲಿ ಯಶಸ್ವಿಯಾದರು. ಆದಾಗ್ಯೂ, ಚೆಂಡು ಅವರ ಕೈಯಿಂದ ಎರಡು ಬಾರಿ ಜಾರಿ ಕೊನೆಗೆ ಕೈಬಿಟ್ಟರು.

ಈ ಸಮಯದಲ್ಲಿ, ಅಕ್ಷರ್ ಅವರ ತಲೆ ನೆಲಕ್ಕೆ ಬಡಿದಿದೆ. ಅಕ್ಷರ್ ನೋವಿನಿಂದ ಬಳಲುತ್ತಿರುವುದನ್ನು ನೋಡಿದ ಫಿಸಿಯೋ ತಕ್ಷಣ ಮೈದಾನಕ್ಕೆ ಆಗಮಿಸಿ ನಂತರ ಅವರನ್ನು ಡಗೌಟ್‌ಗೆ ಕರೆದೊಯ್ದರು. ಅಕ್ಷರ್ ಮತ್ತೆ ಫೀಲ್ಡಿಂಗ್ ಮಾಡಲು ಮೈದಾನಕ್ಕೆ ಹಿಂತಿರುಗಲಿಲ್ಲ.



ಇದು ಈಗ ಪಾಕಿಸ್ತಾನ ವಿರುದ್ಧದ ಪಂದ್ಯಕ್ಕೆ ಅವರು ಸಂಪೂರ್ಣವಾಗಿ ಫಿಟ್ ಆಗುತ್ತಾರೆಯೇ ಎಂಬ ಪ್ರಶ್ನೆಯನ್ನು ಹುಟ್ಟುಹಾಕಿದೆ.

**ಭಾರತ-ಪಾಕಿಸ್ತಾನ ಸೂಪರ್ 4 ಪಂದ್ಯ ಯಾವಾಗ?:** ಭಾರತ ಹಾಗೂ ಪಾಕಿಸ್ತಾನ ನಡುವಣ ಸೂಪರ್ 4 ಪಂದ್ಯ ಸೆಪ್ಟೆಂಬರ್ 21 ರಂದು ದುಬೈ ಅಂತರಾಷ್ಟ್ರೀಯ ಸ್ಟೇಡಿಯಂನಲ್ಲಿ ನಡೆಯಲಿದೆ. ಅಕ್ಷರ್ ತಂಡದ ಪ್ರಮುಖ ಆಟಗಾರ. ಇಲ್ಲಿಯವರೆಗೆ, ಅವರು ಮೂರು ಪಂದ್ಯಗಳಲ್ಲಿ ಮೂರು ವಿಕೆಟ್ ಪಡೆದಿದ್ದಾರೆ. ಪಾಕಿಸ್ತಾನ ವಿರುದ್ಧ ಕೇವಲ 18 ರನ್ ಗಳಿಗೆ ಎರಡು ವಿಕೆಟ್ ಕಬಳಿಸಿದ್ದರು. ಓಮನ್ ವಿರುದ್ಧ ಬ್ಯಾಟಿಂಗ್ ನಲ್ಲಿ 26 ರನ್ ಗಳ ಕೊಡುಗೆ ಸಹ ನೀಡಿದ್ದಾರೆ. ಇದೀಗ ಪಾಕ್ ವಿರುದ್ಧದ ಮಹತ್ವದ ಪಂದ್ಯಕ್ಕೆ ಅಕ್ಷರ್ ಲಭ್ಯ ಇರುತ್ತಾರ ನೋಡಬೇಕಿದೆ.

## ಟಿ20 ಕ್ರಿಕೆಟ್‌ನಲ್ಲಿ ಐತಿಹಾಸಿಕ ಶತಕ ಪೂರೈಸಿದ ಅರ್ಷದೀಪ್

ಏಷ್ಯಾಕಪ್‌ನ ಲೀಗ್ ಹಂತ ಮುಕ್ತಾಯಗೊಂಡಿದೆ. ಭಾರತ ಹಾಗೂ ಒಮಾನ್ ನಡುವೆ ನಡೆದ ಲೀಗ್ ಸುತ್ತಿನ ಕೊನೆಯ ಪಂದ್ಯದಲ್ಲಿ ನಿರೀಕ್ಷೆಯಂತೆಯೇ ಟೀಂ ಇಂಡಿಯಾ ಗೆಲುವು ಸಾಧಿಸಿತು. ಆದಾಗ್ಯೂ ಕ್ರಿಕೆಟ್ ಶಿಶು ಒಮಾನ್, ಟೀಂ ಇಂಡಿಯಾದಂತಹ ಬಲಿಷ್ಠ ತಂಡದೆದುರು ಗಮನಾರ್ಹ ಪ್ರದರ್ಶನ ನೀಡಿ ಎಲ್ಲರ ಮೆಚ್ಚುಗೆಗೆ ಪಾತ್ರವವಾಯಿತು. ಈ ಪಂದ್ಯ ಟೀಂ ಇಂಡಿಯಾಕ್ಕೆ ಕೇವಲ ಔಪಚಾರಿಕ ಪಂದ್ಯವಾಗಿದ್ದರಿಂದ ಆಡುವ ಹನ್ನೊಂದರ ಬಳಗದಲ್ಲಿ ಎರಡು ಬದಲಾವಣೆಗಳನ್ನು ಮಾಡಲಾಗಿತ್ತು. ಅದರಂತೆ ಹರ್ಷಿತ್ ರಾಣಾ ಹಾಗೂ ಅರ್ಷದೀಪ್ ಸಿಂಗ್ ಈ ಪಂದ್ಯದಲ್ಲಿ ಆಡುವ ಅವಕಾಶ ಪಡೆದಿದ್ದರು. ತಂಡದ ಬೌಲಿಂಗ್ ವಿಭಾಗವನ್ನು ಮುನ್ನಡೆಸಿದ್ದ ಅರ್ಷದೀಪ್ ಈ ಪಂದ್ಯದಲ್ಲಿ ವಿಶೇಷ ಶತಕವನ್ನು ಪೂರೈಸಿದರು.

ಏಷ್ಯಾಕಪ್‌ನಲ್ಲಿ ಕೊನೆಗೂ ಆಡುವ ಅವಕಾಶ ಪಡೆದಿದ್ದ ಅರ್ಷದೀಪ್ ಸಿಂಗ್ ಒಮಾನ್ ವಿರುದ್ಧದ ಪಂದ್ಯದಲ್ಲಿ ತಮ್ಮ ಮೊದಲ ವಿಕೆಟ್ ಪಡೆದ ತಕ್ಷಣ ಟಿ20 ಅಂತರರಾಷ್ಟ್ರೀಯ ಪಂದ್ಯಗಳಲ್ಲಿ ಶತಕ ಪೂರೈಸಿದರು. ಈ ಮೂಲಕ ಈ ಸ್ವರೂಪದಲ್ಲಿ 100 ವಿಕೆಟ್‌ಗಳನ್ನು ಪಡೆದ ಮೊದಲ ಭಾರತೀಯ ಬೌಲರ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

2022 ರಲ್ಲಿ ಟೀಂ ಇಂಡಿಯಾ ಪರ ಟಿ20ಗೆ ಪಾದಾರ್ಪಣೆ ಮಾಡಿದ ಅರ್ಷದೀಪ್, ಮೂರು ವರ್ಷಗಳಲ್ಲಿ ಈ ವಿಶೇಷ ಸಾಧನೆ ಮಾಡಿದ್ದಾರೆ. ಇದು ಅವರ ಟಿ20 ಅಂತರರಾಷ್ಟ್ರೀಯ ವೃತ್ತಿಜೀವನದ ಕೇವಲ 64 ನೇ ಪಂದ್ಯವಾಗಿದ್ದು, ಕಡಿಮೆ ಪಂದ್ಯಗಳಲ್ಲಿ 100 ವಿಕೆಟ್‌ಗಳನ್ನು ಪೂರೈಸಿದ ಸಾಧನೆ ಮಾಡಿದ್ದಾರೆ.

ಅರ್ಷದೀಪ್ ತಮ್ಮ ವೃತ್ತಿಜೀವನದಲ್ಲಿ ಎರಡು ಬಾರಿ ಇನ್ನಿಂಗ್ಸ್‌ನಲ್ಲಿ 4 ವಿಕೆಟ್‌ಗಳನ್ನು ಪಡೆದ ಸಾಧನೆ ಮಾಡಿದ್ದಾರೆ.

ಅರ್ಷದೀಪ್ ನಂತರ, ಭಾರತದ ಪರ ಎರಡನೇ ಅತಿ ಹೆಚ್ಚು ವಿಕೆಟ್ ಪಡೆದ ಬೌಲರ್ ಲೆಗ್ ಸ್ಪಿನ್ನರ್ ಯುಜ್ವೇಂದ್ರ ಚಾಹಲ್, 80 ಪಂದ್ಯಗಳಲ್ಲಿ 96 ವಿಕೆಟ್‌ಗಳನ್ನು ಪಡೆದಿದ್ದಾರೆ. ಹಾರ್ದಿಕ್ ಪಾಂಡ್ಯ, 114 ಪಂದ್ಯಗಳಲ್ಲಿ 96 ವಿಕೆಟ್‌ಗಳೊಂದಿಗೆ ಮೂರನೇ ಸ್ಥಾನದಲ್ಲಿದ್ದಾರೆ. ಜುಲೈ 2022 ರಲ್ಲಿ ಭಾರತ ಪರ ಟಿ20ಐ ಚೊಚ್ಚಲ ಪಂದ್ಯವನ್ನಾಡಿದ್ದ ಅರ್ಷದೀಪ್, ಅಂದಿನಿಂದ ನಿರಂತರವಾಗಿ ಉತ್ತಮ ಪ್ರದರ್ಶನ ನೀಡುತ್ತಿದ್ದಾರೆ. ಇದು ಅವರ ಎರಡನೇ ಏಷ್ಯಾ ಕಪ್. 2022 ರಲ್ಲಿ ಅವರು ಟೂರ್ನಮೆಂಟ್‌ನಲ್ಲಿಯೂ ಭಾಗವಹಿಸಿದ್ದರು. ಆಗ, ಟೂರ್ನಮೆಂಟ್ ಅನ್ನು ಯುಎಇಯಲ್ಲಿ ಮತ್ತು ಟಿ20 ಸ್ವರೂಪದಲ್ಲಿ ನಡೆಸಲಾಗುತ್ತಿತ್ತು.



## ನಮಗೆ ಎನ್‌ಸಿಎನಲ್ಲಿ ಅವಕಾಶ ಕೊಡಿ ಎಂದ ಒಮಾನಿ ಆಟಗಾರರು

ಏಷ್ಯಾಕಪ್ 2025 ರಲ್ಲಿ ಪಾಕಿಸ್ತಾನ ವಿರುದ್ಧದ ಪಂದ್ಯ ಆರಂಭವಾಗುವ ಮೊದಲು ಸಲ್ಮಾನ್ ಅಘಾ ಅವರೊಂದಿಗೆ ಕೈಕುಲುಕಲು ಭಾರತದ ನಾಯಕ ಸೂರ್ಯಕುಮಾರ್ ಯಾದವ್‌ನಿರಾಕರಿಸಿದರು. ಪಂದ್ಯದ ನಂತರ ಕೂಡ, ಭಾರತೀಯ ತಂಡದ ಆಟಗಾರರು ಪಾಕಿಸ್ತಾನಿ ಆಟಗಾರರೊಂದಿಗೆ ಕೈಕುಲುಕಲಿಲ್ಲ. ಆದರೆ ಶುಕ್ರವಾರ ರಾತ್ರಿ ಭಾರತ ಮತ್ತು ಒಮಾನ್ ನಡುವಿನ ಪಂದ್ಯ ಕೊನೆಗೊಂಡಾಗ, ದೃಶ್ಯ ಬದಲಾಯಿತು. ಅಬುಧಾಬಿಯ ಶೇಖ್ ಜಾಯೆದ್ ಕ್ರೀಡಾಂಗಣದಲ್ಲಿ ಎರಡೂ ತಂಡಗಳು ಮುಖಾಮುಖಿಯಾದವು. ಸೂರ್ಯ ಇವರೊಂದಿಗೆ ನಯವಾಗಿ ಮಾತನಾಡುತ್ತ ಸಮಯ ಕಳೆದರು. ವಿಶೇಷ ಎಂದರೆ ಒಮಾನ್ ತಂಡದಲ್ಲಿ ಹಲವಾರು ಪಾಕಿಸ್ತಾನಿ ಆಟಗಾರರು ಕೂಡ ಇದ್ದಾರೆ.

**ಸೂರ್ಯ ಅವರಿಂದ ಒಮಾನಿ ಆಟಗಾರರಿಗೆ ಸಲಹೆ:** ಭಾರತ-ಓಮನ್ ಪಂದ್ಯದ ನಂತರ, ಒಂದು ಸುಂದರ ದೃಶ್ಯ ಕಂಡುಬಂತು. ಓಮನ್ ಕ್ರಿಕೆಟ್ ಆಟಗಾರರು ಭಾರತೀಯ ನಾಯಕ ಸೂರ್ಯಕುಮಾರ್ ಯಾದವ್ ಅವರನ್ನು ಸುತ್ತುವರೆದು, ಸಲಹೆಗಳನ್ನು ಪಡೆದುಕೊಂಡರು. ಅವರು ಮಾತನಾಡಿದ ನಂತರ ಎಲ್ಲರೂ ಭಾರತೀಯ ಟಿ20 ನಾಯಕನನ್ನು ಶ್ಲಾಘಿಸಿದರು.

ಓಮನ್ ನಾಯಕ ಜತಿಂದರ್ ಸಿಂಗ್, ನನಗೆ ನನ್ನ ತಂಡದ ಬಗ್ಗೆ ತುಂಬಾ ಹೆಮ್ಮೆಯಿದೆ. ನಾನು ಮೊದಲ ದಿನದಿಂದಲೂ ಇದನ್ನೇ ಹೇಳುತ್ತಿದ್ದೇನೆ'' ಎಂದು ಹೇಳಿದರು. ಸೂರ್ಯಕುಮಾರ್ ಯಾದವ್ ಬಂದು ಅವರೊಂದಿಗೆ ಮಾತನಾಡಿದ್ದಕ್ಕೆ ನನಗೆ ತುಂಬಾ ಸಂತೋಷವಾಗಿದೆ ಎಂದು ಓಮನ್ ನಾಯಕ ಜತಿಂದರ್ ಸಿಂಗ್ ಹೇಳಿದರು. ಅವರು ಬಂದು ನಮ್ಮ ಆಟಗಾರರೊಂದಿಗೆ ಮಾತನಾಡಿದ್ದಕ್ಕೆ ನಾನು ತುಂಬಾ ಕೃತಜ್ಞನಾಗಿದ್ದೇನೆ. ಅವರು ಟಿ20ಯಲ್ಲಿ ಹೇಗೆ ಆಡಬೇಕೆಂದು ಹೇಳುತ್ತಿದ್ದರುಎಂದು ಹೇಳಿದರು. ಏತನ್ಮಧ್ಯೆ, ಓಮನ್ ನಾಯಕ ಜತಿಂದರ್ ಸಿಂಗ್ ತಮ್ಮ ತಂಡಕ್ಕೆ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿಯ ಬಾಗಿಲು ತೆರೆಯುವಂತೆ ಬಿಸಿಸಿಐ ಅನ್ನು ಒತ್ತಾಯಿಸಿದ್ದಾರೆ. ಭಾರತ ಮುಂದೆ ಬಂದು ಎನ್‌ಸಿಎ ನಲ್ಲಿ ತರಬೇತಿ ಪಡೆಯಲು ನಮಗೆ ಅವಕಾಶ ನೀಡಿದರೆ ಅದು ಉತ್ತಮವಾಗಿರುತ್ತದೆ ಎಂದು ನಾನು ಭಾವಿಸುತ್ತೇನೆ. ನಾವು ನಮ್ಮ ಕೌಶಲ್ಯ, ಮಾನಸಿಕ ಸಿದ್ಧತೆ ಮತ್ತು ಫಿಟ್ನೆಸ್ ಮೇಲೆ ಕೆಲಸ ಮಾಡಬಹುದು ಎಂದು ಜತಿಂದರ್ ಸಿಂಗ್ ಹೇಳಿದ್ದಾರೆ.



## ಭಾರತದ ವಿರುದ್ಧ ವೇಗದ ಶತಕ ಸಿಡಿಸಿ ಆಸೀಸ್ ಬ್ಯಾಟರ್

ಆಸ್ಟ್ರೇಲಿಯಾದಿಂದ ವಿಶ್ವದಾಖಲೆ ಮೊತ್ತ

ಭಾರತೀಯ ಮಹಿಳಾ ಕ್ರಿಕೆಟ್ ತಂಡದ ವಿರುದ್ಧ ನಡೆಯುತ್ತಿರುವ ಆಸ್ಟ್ರೇಲಿಯಾ ಮಹಿಳಾ ತಂಡದ 3ನೇ ಏಕದಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡವು ಭರ್ಜರಿ ಬ್ಯಾಟಿಂಗ್ ಪ್ರದರ್ಶನ ನೀಡಿದೆ. ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಸರಣಿ ಗೆಲುವಿನ ನಿರ್ಣಾಯಕ ಪಂದ್ಯದಲ್ಲಿ ಆಸ್ಟ್ರೇಲಿಯಾ ಮಹಿಳಾ ತಂಡವು 47.5 ಓವರ್‌ಗಳಲ್ಲಿ 412 ರನ್‌ಗಳಿಸಿದೆ. ಇದು ಮಹಿಳಾ ಕ್ರಿಕೆಟ್‌ನಲ್ಲಿ ಆರನೇ ಅತ್ಯಧಿಕ ಸ್ಕೋರ್ ಸರಿಗಟ್ಟಿದೆ. ಭಾರತದ ವಿರುದ್ಧ 50 ಓವರ್‌ಗಳ ಪಂದ್ಯದಲ್ಲಿ ದಾಖಲಾದ ಗರಿಷ್ಠ ಮೊತ್ತ ಕೂಡ ಇದಾಗಿದೆ. ಸ್ಟಾರ್ ಬ್ಯಾಟರ್ ಬೆತ್ ಮೂನಿ ಕೇವಲ 57 ಎಸೆತಗಳಲ್ಲಿ ಶತಕ ಸಿಡಿಸಿ ಈ ವಿಶ್ವದಾಖಲೆಯ ಮೊತ್ತಗಳಿಸಲು ನೆರವಾದರು. ಅಲ್ಲದೆ ಎರಡನೇ ವೇಗದ ಶತಕವಾಗಿದೆ. ಈಗ ಭಾರತಕ್ಕೆ 413 ರನ್‌ಗಳ ಗುರಿ, ಇದು ಇತಿಹಾಸ ಸೃಷ್ಟಿಸುವ ಅವಕಾಶವಾಗಿದೆ.

**ಆಸ್ಟ್ರೇಲಿಯಾ ಸ್ಫೋಟಕ ಆರಂಭ:** ಆಸ್ಟ್ರೇಲಿಯಾ ತಂಡವು ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲ ವಿಕೆಟ್‌ಗೆ 4.2 ಓವರ್‌ಗಳಲ್ಲಿ ಆಸ್ಟ್ರೇಲಿಯಾ 43 ರನ್ ಕಲೆಯಾಕಿತು. ನಾಯಕಿ ಅಲಿಸಾ ಹೀಲಿ 18 ಎಸೆತಗಳಲ್ಲಿ 7 ಬೌಂಡರಿಗಳ ಸಹಿತ 30ರನ್‌ಗಳಿಸಿ ಸ್ಫೋಟಕ ಆರಂಭಕ್ಕೆ ಕಾರಣರಾದರು. ಹೀಲಿ ವಿಕೆಟ್ ಬಳಿಕ ಬಂದ ಎಲಿಸ್ ಪೆರ್ರಿ, 2ನೇ ವಿಕೆಟ್ ಜೊತೆಯಾಟದಲ್ಲಿ ಯುವ ಆರಂಭಕ ಆಟಗಾರ್ತಿ ಜಾರ್ಜಿಯಾ ವೋಲ್ ಜೊತೆಗೂಡಿ 101 ಎಸೆತಗಳಲ್ಲಿ 107 ರನ್‌ಗಳ ಜೊತೆಯಾಟ ನೀಡಿದರು. ವೋಲ್ 68 ಎಸೆತಗಳಲ್ಲಿ 14 ಬೌಂಡರಿಗಳ ಸಹಿತ 81 ರನ್‌ಗಳಿಸಿ ಸ್ನೇಹ್ ರಾಣಾ ಬೌಲಿಂಗ್‌ನಲ್ಲಿ ಔಟ್ ಆದರು. ನಂತರ 4ನೇ ಕ್ರಮಾಂಕದಲ್ಲಿ ಬಂದ ಬೆತ್ ಮೂನಿ ವಿಧ್ವಂಸ ಸೃಷ್ಟಿಸಿದರು. ಪ್ರತೀ ಓವರ್‌ನಲ್ಲಿ ಬೌಂಡರಿ ಕಲೆಯಾಕಿದ ಮೂನಿ ಕೇವಲ ಕೇವಲ 57 ಎಸೆತಗಳಲ್ಲಿ ತಮ್ಮ 4ನೇ ಶತಕವನ್ನು ಪೂರೈಸಿದರು. ಒಟ್ಟಾರೆ 75 ಎಸೆತಗಳಲ್ಲಿ 23 ಬೌಂಡರಿ, 1 ಸಿಕ್ಸರ್ ಸಹಿತ 138 ರನ್ ಗಳಿಸಿದ ಮೂನಿ, ಭಾರತದ ಬೌಲರ್‌ಗಳನ್ನು ಧೂಳಿಪಟ ಮಾಡಿದರು. ಈ ಶತಕವು ಮಹಿಳಾ ಕ್ರಿಕೆಟ್‌ನಲ್ಲಿ ಎರಡನೇ ವೇಗದ ಶತಕವಾಗಿದೆ. ವೇಗದ ಶತಕದ ದಾಖಲೆ ಆಸ್ಟ್ರೇಲಿಯಾದ ಮಾಜಿ ನಾಯಕಿ ಮೆಗ್ ಲ್ಯಾನಿಂಗ್ ಹೆಸರಿನಲ್ಲಿದೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966